## ಒಂದನೇ ಪುಟದಿಂದ

### ಕಾರ್ಖಾನೆಗಳಿಂದ ಮುಕ್ತಿ ಯಾವಾಗ?

ಆರೋಪವು ಕೇಳಿಬರುತ್ತಿದೆ. ಆದ್ದರಿಂದ ಜರನ್ನು ರಕ್ಷಿಸಬೇಕಾದವರು ಜನರ ಬೆನ್ನಿಗೆ ಚೂರಿ ಹಾಕುತ್ತಿದ್ದಾರೆ ಎಂಬ ಆರೋಪವು ಇದೆ. ಕೆಮಿಕಲ್ ಕಾರ್ಖಾನೆಗಳಿಂದ ರೈತರು ತಾವು ಬೆಳೆದ ಬೆಳೆ ಕೈಗೆ ಬಾರದ ಹಾಗೆ ಆಗುತ್ತಿದೆ. ಮಾವಿನ ಗಿಡಗಳಿಗೆ ಮಾವು ಹತ್ತುತ್ತಿಲ್ಲ, ಕಾರ್ಖಾನೆಗಳಿಂದ ರೈತರು ಕೂಡಾ ತತ್ತರಿಸುತ್ತಿದ್ದಾರೆ. ಇವುಗಳಿಂದ ಮುಕ್ತಿ ಯಾವಾಗ ಎಂಬ ಪ್ರಶ್ನೆ ಮುಗ್ಧ ಜನರದ್ದಾಗಿದೆ.

### ಹತ್ಯೆ: ಐವರ ಬಂಧನ

ಗುಂಡೇರಾವ್ ತಂದೆ ಬಸವರಾಜ್ ಲಾಳಿ ಅವರು ದೂರು ಸಲ್ಲಿಸಿದ್ದು, ವೃದ್ಧ ಮಹಿಳೆಗೆ ವಾರಸುದಾರರು ಇಲ್ಲದೇ ಇರುವುದರಿಂದ ಸಾವಿನ ಪ್ರಕರಣ ಪತ್ತೆ ಹಚ್ಚುವುದು ಕಠಿಣವಾಗಿತ್ತು. ಸಿಪಿಐಗಳಾದ ಚಂದ್ರಶೇಖರ ತಿಗಡಿ, ಜಗದೇವಪ್ಪ ಪಾಳಾ, ಪಿಎಸ್ಐಗಳಾದ ಗೌತಮ್, ಶೀಲಾದೇವಿ, ತಿಮ್ಮಯ್ಯ, ಎಎಸ್ಐ ಗುಂಡಪ್ಪ, ಎಆರ್ಎಸ್ಐ ಉಪಳಪ್ಪ, ಎಪಿಸಿ ಮಂಜುನಾಥ, ಸಿಬ್ಬಂದಿಗಳಾದ ಕಲ್ಲಪ್ಪ, ವೀರಶೆಟ್ಟಿ, ಪ್ರೇಮಕುಮಾರ್, ಆನಂದ್, ಬಾಬುರಾವ್, ಬಲರಾಮ್, ಬಸವಣ್ಣಪ್ಪ, ಸಂತೋಷ, ಪರಶುರಾಮ್, ರುದ್ರಗೌಡ, ನಂದು, ಮಾಳಗೊಂಡ, ಅಶೋಕ್, ಗಫೂರ್, ಪ್ರಶಾಂತ್, ಅರುಣ್, ಕೃಷ್ಣಾ, ಸಂಗಣ್ಣ, ಚಂದ್ರಶೇಖರ, ರಮೇಶ್, ಸಂಗಣ್ಣ, ಜಡೆಪ್ಪ, ಕೊಟ್ರೇಶ್, ಹಣಮಂತ್ ಮುಂತಾದವರು ಕಾರ್ಯಾಚರಣೆ ಕೈಗೊಂಡು ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದರು ಎಂದು ಅವರು ತಿಳಿಸಿದರು.ಬಂಧಿತರು ವಿಚಾರಣೆಯ ಕಾಲಕ್ಕೆ ಕಳೆದ ಎರಡು ತಿಂಗಳಿಂದ ಐವರು ಆರೋಪಿತರು ಗ್ರಾಮದ ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಹಿಂದುಗಡೆ ಕುಳಿತು ಅದೇ ಗ್ರಾಮದ ಒಂಟಿ ಮಹಿಳೆ ಶ್ರೀಮತಿ ಜಗದೇವಿ ಗಂಡ ರೇವಣಸಿದ್ದಪ್ಪ ಲಾಳಿ ಎಂಬ ವೃದ್ಧ ಮಹಿಳೆ ಮನೆಯಲ್ಲಿ ಒಬ್ಬಳೇ ಇದ್ದು, ಆಕೆಯ ಹತ್ತಿರ ಹಣ ಹಾಗೂ ಬಂಗಾರ ಹಾಗೂ ಆಸ್ತಿ ಇದ್ದು, ಆಕೆಗೆ ಹಿಂದೆ, ಮುಂದೆ ಯಾರೂ ಇಲ್ಲ. ಹಾಗಾಗಿ ಆಕೆಯನ್ನು ಕೊಲೆ ಮಾಡಲು ಸಂಚು ರೂಪಿಸಲಾಗಿತ್ತು. ಎರಡು ಬಾರಿ ಹತ್ಯೆ ಮಾಡುವ ಯತ್ನ ವಿಫಲವಾಗಿತ್ತು ಎಂಬುದನ್ನು ತಿಳಿಸಿದರು ಎಂದು ಅವರು ಹೇಳಿದರು.ಕಳೆದ 10ರಂದು ಮಧ್ಯಾಹ್ನ ಮೂರು ಗಂಟೆಯ ಅವಧಿಯಲ್ಲಿ ಆರೋಪಿ ತಾನಾಜೀ ಮತ್ತು ವಿಜಯಕುಮಾರ್ ಅವರು ಇಬ್ಬರೂ ಅಜ್ಜಿಯ ಮನೆಯ ಹಿಂಭಾಗದಿಂದ ಒಳಗೆ ಹೋಗಿ ಮನೆಯ ತಲಬಾಗಿಲು ಹಾಕಿ ಮನೆಯೊಳಗೆ ಅಜ್ಜಿಗೆ ಸೀರೆಯಿಂದ ಕುತ್ತಿಗೆ ಸುತ್ತಿ, ತಲೆಗೆ ಬಲವಾದ ಆಯುಧದಿಂದ ಹೊಡೆದು ಕೊಲೆ ಮಾಡಿ ಯಾರಿಗೂ ಸಂಶಯ ಬರದ ಹಾಗೆ ಮಂಚದ ಮೇಲೆ ಮಲಗಿಸಿ ಮೈಮೇಲೆ ಇದ್ದ ಕಿವಿಯಲ್ಲಿನ ಬಂಗಾರದ ಓಲೆ, ಕೊರಳಲ್ಲಿನ ಗುಂಡಿನ ಸರ, ಅಲಮಾರಿಯ ಕೀ ತೆಗೆದು ಅದರೊಳಗಿದ್ದ 21000ರೂ.ಗಳು ಮತ್ತು ಲಿಂಗದ ಕಾಯಿ ತೆಗೆದುಕೊಂಡು ಎರಡೂ ಬಾಗಿಲುಗಳನ್ನು ಲಾಕ್ ಮಾಡಿ ಯಾರಿಗೂ ಸಂಶಯ ಬಾರದ ರೀತಿಯಲ್ಲಿ ಪೋಲಿಸರಿಗೆ ದಾರಿ ತಪ್ಪಿಸುವ ಉದ್ದೇಶದಿಂದ ಮನೆಯ ಹಿಂದಿನ ಬಾಗಿಲಿನಿಂದ ಓಡಿ ಹೋಗಿದ್ದಾಗಿ ಅವರು ತಿಳಿಸಿದರು.ಆರೋಪಿ ವಿಜಯಕುಮಾರನು ಇನ್ನೊಬ್ಬ ಒಂಟಿ ಮಹಿಳೆಯನ್ನು ಗುರಿಯಾಗಿಟ್ಟುಕೊಂಡು ಆಕೆಯ ಹತ್ತಿರ 30,000ರೂ.ಗಳನ್ನು ಪಡೆದಿದ್ದ. ಆ ಮಹಿಳೆಯನ್ನೂ ಸಹ ಇದೇ ರೀತಿ ಕೊಲೆ ಮಾಡಿ ಅವಳಲ್ಲಿದ್ದ ಹಣದ ಬಾಂಡ್ ಮತ್ತು ಬಂಗಾರದ ಆಭರಣಗಳನ್ನು ದೋಚುವ ಸಂಚು ಹೊಂದಿರುವ ಕುರಿತು ವಿಚಾರಣೆಯಿಂದ ಹೊರಬಂದಿದೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಮಹೇಶ್ ಮೇಘಣ್ಣನವರ್, ಡಿಎಸ್ಪಿ ಶಂಕರಗೌಡ ಪಾಟೀಲ್ ಮುಂತಾದವರು ಉಪಸ್ಥಿತರಿದ್ದರು.

### ಏನಾದರೂ ಕೊಡುಗೆ ನೀಡಲಿ:ಸಚಿವ ಪ್ರಿಯಾಂಕ್

ಮಾಡಿದ್ದು ಸೇರಿದಂತೆ ಹಲವಾರು ಕ್ರಾಂತಿಕಾರಿ ಬದಲಾವಣೆ ಮಾಡಿದ್ದಾರೆ. ಇಂದಿರಾಗಾಂಧಿ ಅವರು 44 ಬಾರಿ ಪತ್ರಿಕಾಗೋಷ್ಠಿ ಮಾಡಿದ್ದಾರೆ ಇವರೇನು ಮಾಡಿದ್ದಾರೆ? ಮೊನ್ನೆ ರಾಹುಲ್ ಗಾಂಧಿ ಹೇಳಿದಂತೆ ಮೋದಿಯವರ ಬಗ್ಗೆ ಕೆಲ ಮೀಡಿಯಾಗಳು ಹೈಪ್ ಮಾಡುತ್ತಿದ್ದಾರೆ ಅಷ್ಟೇ ಎಂದು ವಾಗ್ದಾಳಿ ನಡೆಸಿದರು.ಬಿಜೆಪಿ ಪಕ್ಷ ಚುನಾವಣೆ ಆಯೋಗವನ್ನು ತಮ್ಮ ಕೈಗೊಂಬೆಯನ್ನಾಗಿ ಮಾಡಿಕೊಂಡಿದೆ ಎಂದು ಆರೋಪಿಸಿದ ಖರ್ಗೆ, ಕರ್ನಾಟಕದಲ್ಲಿ ಚುನಾವಣೆಯಲ್ಲಿ ಭ್ರಷ್ಟಾಚಾರ ನಡೆದಿದೆ ಹಾಗೆ ಮಹಾರಾಷ್ಟ್ರದಲ್ಲಿಯೂ ಆಗಿದೆ. ಈ ಬಗ್ಗೆ ರಾಹುಲ್ ಗಾಂಧಿ ಈಗಾಗಲೇ ಹೇಳಿದ್ದಾರೆ. ಇಂದಿನಿಂದ ಸಿಂದೂರ ಬಗ್ಗೆ ಚರ್ಚೆ ಆಗುತ್ತದೆ. ನಂತರ ಚುನಾವಣೆ ಅಕ್ರಮದ ಬಗ್ಗೆ ಎಲ್ಲವೂ ದಾಖಲೆ ಸಮೇತ ಮಾತನಾಡುತ್ತೇವೆ ಎಂದು ಅವರು ಹೇಳಿದರು.ಪರಿಶಿಷ್ಟರ ಅನುದಾನ ದುರ್ಬಳಕೆ ಆಗಿದ್ದರೆ ಆ ಬಗ್ಗೆ ಬಿಜೆಪಿ ದಾಖಲೆ ನೀಡಲಿ. ಹಾಗೆ ಆಗಿದ್ದರೆ ಕ್ರಮ ಜರುಗಿಸಲಾಗುವುದು. ಬಿಜೆಪಿ ನಾಯಕರು ಸುಮ್ಮನೆ ಆರೋಪ ಮಾಡುವುದು ಬಿಟ್ಟು ಜನರಿಗೆ ದಾರಿ ತಪ್ಪಿಸುವುದನ್ನು ಬಿಟ್ಟು ಸರ್ಕಾರಕ್ಕೆ ದಾಖಲೆ ಒದಗಿಸಲಿ. ಬಿಜೆಪಿ ಕಾಲದಲ್ಲಿ ಎಸ್‌ಸಿಸಿಪಿ, ಟಿಎಸ್‌ಪಿ ಅನುದಾನ ದುರ್ಬಳಕೆ ಆಗಿತ್ತು. ಅದನ್ನು ಅಂದಿನ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಒಪ್ಪಿಕೊಂಡಿದ್ದರು. ಈಗ ಅದೇ ಬಿಜೆಪಿ ನಾಯಕರು ತಪ್ಪು ಮಾಹಿತಿ ಕೊಡುತ್ತಿದ್ದಾರೆ. ಬಿಜೆಪಿಯವರ ಆರೋಪಗಳಿಗೆ ಸದನದಲ್ಲೇ ಉತ್ತರ ನೀಡಲಾಗಿದೆ ಎಂದು ಅವರು ಹೇಳಿದರು.ದಲಿತರ ಬಗ್ಗೆ ಆದಿವಾಸಿಗಳ ಬಗ್ಗೆ ನಿಜವಾದ ಕಾಳಜಿ ಇದ್ದರೆ ಬಿಜೆಪಿ ನಾಯಕರು ಕೇಂದ್ರದಿಂದ ಅನುದಾನ ತರಿಸಿಕೊಡಲಿ ಎಂದು ಸವಾಲು ಹಾಕಿದ ಸಚಿವರು, ಬಿಜೆಪಿ ಆಡಳಿತವಿರುವ ರಾಜ್ಯದಲ್ಲಾದರೂ ಅನುದಾನ ಒದಗಿಸಲಿ ಎಂದು ಆಗ್ರಹಿಸಿದರು.ವಿರೋಧ ಪಕ್ಷದ ಶಾಸಕರಿಗೆ ಅನುದಾನ ಕೊರತೆಯಾಗಿದೆ ಎಂದು ಹೇಳಲಾದ ಆರೋಪಕ್ಕೆ ಉತ್ತರಿಸಿದ ಸಚಿವರು, ಎಲ್ಲ ಶಾಸಕರು ತಮ್ಮ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನಿರೀಕ್ಷೆ ಮಾಡುವುದು ತಪ್ಪಲ್ಲ. ಅಂದು ಬಿಜೆಪಿ ಸರ್ಕಾರ ಇದ್ದಾಗಲೂ ಕೂಡಾ ನಮಗೆ ಅನುದಾನ ಬಿಡುಗಡೆ ಮಾಡುವಲ್ಲಿ ತಾರತಮ್ಯ ಎಸಗಲಾಗಿತ್ತು. ಈ ಬಗ್ಗೆ ನಾನು ಹಲವಾರು ಬಾರಿ ಹೇಳಿದ್ದೇನೆ ಎಂದು ಸ್ಪಷ್ಟಪಡಿಸಿದರು.ಕಲಬುರ್ಗಿಯಲ್ಲಿ ಜರುಗಿದ ಸಚಿವ ಸಂಪುಟ ಕೈಗೊಂಡ ನಿರ್ಣಯಗಳ ಜಾರಿ ಬಗ್ಗೆ ಸಧ್ಯದಲ್ಲೇ ಸಮಗ್ರ ಮಾಹಿತಿ ನೀಡಲಾಗುವುದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಯೂರಿಯಾ ಕೊರತೆ ಅಷ್ಟೊಂದು ಕಾಣಿಸುತ್ತಿಲ್ಲ. ಕಳೆದ ಒಂದುವರೆತಿಂಗಳ ಹಿಂದೆ ಕೇಂದ್ರ ಕೃಷಿ ಸಚಿವರನ್ನು ಭೇಟಿ ಮಾಡಿದ ಕೃಷಿ ಸಚಿವ ಚೆಲುವರಾಯಸ್ವಾಮಿ ಯೂರಿಯಾ ಗೊಬ್ಬರ ಸರಬರಾಜಿಗೆ ಆದ್ಯತೆ ನೀಡುವಂತೆ ಮನವಿ ಸಲ್ಲಿಸಿದ್ದರು. ಈ ಸಲ ನಮಗೆ ಅಗತ್ಯವಿರುವ ಗೊಬ್ಬರ ಸರಬರಾಜು ಮಾಡಿಲ್ಲ. ರಾಜ್ಯದ ಓಪಿನಿಂಗ್ ಬ್ಯಾಲೆನ್ಸ್ ನ್ನು ಬೇಡಿಕೆಯಲ್ಲಿ ಕಡಿತಗೊಳಿಸಿದ ಕೇಂದ್ರ ಸರ್ಕಾರ ಉಳಿದರಸಗೊಬ್ಬರ ಸರಬರಾಜು ಮಾಡಿದೆ. ಈ ಹಿಂದೆ ರಾಜ್ಯದ ಓಪಿನಿಂಗ್‌ಬ್ಯಾಲೆನ್ಸ್‌ನ್ನು ಪರಿಗಣಿಸುತ್ತಿರಲಿಲ್ಲ ಎಂದರು.ಜಿಲ್ಲೆಯಲ್ಲಿ ಈ ಸಲ 100ರಷ್ಟು ಬಿತ್ತನೆಯಾಗಿದೆ. 500 ಟನ್ ಗೊಬ್ಬರ ಬೇಡಿಕೆ ಇದ್ದು, 200 ಟನ್ ಗೊಬ್ಬರವನ್ನು ಬಾಗಲಕೋಟೆಯಿಂದ ತರಸಲಾಗುತ್ತಿದೆ. ಉಳಿದ 300 ಟನ್ ರಸಗೊಬ್ಬರವನ್ನು ಆದಷ್ಟು ಬೇಗ ತರಿಸಲಾಗುವುದು. ರಸಗೊಬ್ಬರ ವಿಚಾರದಲ್ಲಿ ಇಲ್ಲಿ ಪ್ರತಿಭಟನೆ ಮಾಡುವ ಬದಲು ಬಿಜೆಪಿಗರು ದಿಲ್ಲಿಯಲ್ಲಿ ಪ್ರತಿಭಟನೆ ಮಾಡಿ ರಾಜ್ಯಕ್ಕೆ ಗೊಬ್ಬರ ತರಿಸಿಕೊಡಲಿ ಎಂದು ಅವರು ಸಲಹೆ ನೀಡಿದರು.ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯಲ್ಲಿನ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ್ ಖರ್ಗೆ ಅವರು ತಮಗೆ ಮುಖ್ಯಮಂತ್ರಿ ಸಿಗದಿರುವ ಕುರಿತು ಹೇಳಿರುವುದನ್ನು ಪ್ರಸ್ತಾಪಿಸಿದಾಗ ಸಚಿವ ಖರ್ಗೆಯವರು ಪ್ರತಿಕ್ರಿಯಿಸಿ, ಸಂಪೂರ್ಣ ವಿಡಿಯೋ ನೋಡಿದಾಗ ಮಾತ್ರ ಅವರ ಮಾತಿನ ಅರ್ಥ ಆಗುತ್ತದೆ. ಪಕ್ಷಕ್ಕಾಗಿ ಅವರು ದುಡಿದಿದ್ದಾರೆ. ಇಲ್ಲಿಂದ ದಿಲ್ಲಿಯವರೆಗೆ ಅವರು ಮುಟ್ಟಿದ್ದಾರೆ. ಮುಖ್ಯಮಂತ್ರಿ ಪದವಿ ತಪ್ಪಿರುವ ಬಗ್ಗೆ ಅವರಿಗೆ ಯಾವುದೇ ಅಸಮಾಧಾನ ಇಲ್ಲ ಎಂದರುಖರ್ಗೆಯವರು ಮುಂದಿನ ರಾಜಕೀಯ ಜೀವನದ ನಿರ್ಧಾರಗಳನ್ನು ಅವರು ತೆಗೆದುಕೊಳ್ಳುತ್ತಾರೆ. ಅವರ ನಿರ್ಧಾರವನ್ನು ಸೋನಿಯಾಗಾಂಧಿ, ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ಕೂಡಾ ಗೌರವಿಸುತ್ತಾರೆ ಎಂದು ಅವರು ಹೇಳಿದರು.ರಂದೀಪ್ ಸುರ್ಜೆವಾಲಾ ಅವರು ಸಚಿವರ ಸಭೆ ಕರೆದಿರುವುದಕ್ಕೆ ಬಿ.ಎಲ್. ಸಂತೋಷ ಅವರು ಆಕ್ಷೇಪ ವ್ಯಕ್ತಪಡಿಸಿರುವುದರ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಅವರು, ಸುರ್ಜೆವಾಲಾ ಬದಲಿಗೆ ದತ್ತಾತ್ರೇಯ ಹೊಸಬಾಳೆ ಅಥವಾ ಸಂತೋಷ್ ಸಭೆ ತೆಗೆದುಕೊಳ್ಳಬೇಕೇ? ಎಂದು ಪ್ರಶ್ನಿಸಿದರು.

## ಹಳ್ಳಿ ಕಲಾವಿದರಿಗೆ ಸೂಕ್ತ ವೇದಿಕೆ ಸಿಗಲಿ: ಸುರೇಖಾ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 28: ಹಳ್ಳಿಗಳಲ್ಲಿ ಸಾವಿರಾರುಜನಪದಹಾಡುಗಳನ್ನು ಹಾಡುವ ಕಲಾವಿದರಿದ್ದಾರೆ. ಅಂಥವರಿಗೂ ಸೂಕ್ತ ವೇದಿಕೆ ಮತ್ತು ಅವಕಾಶಗಳು ಸಿಗಬೇಕು. ಈ ನಿಟ್ಟಿನಲ್ಲಿ ರಂಗಾಯಣ ಜಾಗೃತಿ ಕಾರ್ಯಕ್ರಮಗಳನ್ನು ಹೆಚ್ಚುಹೆಚ್ಚುಹಾಕಿಕೊಳ್ಳಬೇಕೆಂದು ಅಪರಜಿಲ್ಲಾಧಿಕಾರಿ ಕು.ಸುರೇಖಾ ತಿಳಿಸಿದರು.

ಕರ್ನಾಟಕ ರಂಗಾಯಣ ಕಲಬುರಗಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರುಗಳ ಸಂಯುಕ್ತಾಶ್ರಯದಲ್ಲಿ ಪೂಜ್ಯ ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ 2021–22ನೇ ಸಾಲಿನ ರಂಗಗೀತೆಗಳ ಗಾಯನ ಮತ್ತು ನಾಟಕ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಲೆ ಮತ್ತು ಸಾಹಿತ್ಯ ಪೋಷಣೆಯಲ್ಲಿ ಬೀದರ ಅಗ್ರಪಂಕ್ತಿಯಲ್ಲಿದೆ. ಬಹಿರಂಗದಲ್ಲಿ ಪಾಶ್ಚಾತ್ಯ ಸಂಸ್ಕೃತಿ ಅಳವಡಿಸಿಕೊಂಡರೂ ಅಂತರಂಗದಲ್ಲಿ ಜನಪದ ಸಂಸ್ಕೃತಿ ಹಾಸುಹೊಕ್ಕಾಗಿದೆ. ಜಿಲ್ಲೆಯ ಕಲಾವಿದರು ದೇಶ ವಿದೇಶಗಳಲ್ಲಿ ಪ್ರದರ್ಶನ ಮಾಡಿ ಬಂದಿದ್ದಾರೆ. ಹಿಂದೆ ಕಲಾವಿದರಿಗೆಮನೋಅಭಿವ್ಯಕ್ತಿಗೆ ಅವಕಾಶಗಳು ಇರಲಿಲ್ಲ. ಈಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ರಂಗಾಯಣ ಸಾಕಷ್ಟು ಅವಕಾಶಗಳನ್ನು ನೀಡುತ್ತಿದೆ. ಕಲಾವಿದರ ತಮ್ಮ ಬದ್ಧತೆಯೊಂದಿಗೆ ಅದನ್ನು ಸದುಪಯೋಗ ಮಾಡಿಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಂಗಾಯಣ ಕಲಬುರಗಿ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ ಮಾತನಾಡಿ ಗಡಿಭಾಗದಲ್ಲಿ ಏನೇ ಸಮಸ್ಯೆಗಳಿದ್ದರೂ ಕೂಡಾ ಕಲಾ ಪ್ರದರ್ಶನದಲ್ಲಿ ಏನೂ ಕೊರತೆಯಿಲ್ಲ. ಇಂತಹ ಉತ್ಸಾಹ ಕಂಡು ಬೀದರ ಜಿಲ್ಲಾ ಕಲಾವಿದರಿಗೆ ಪ್ರೋತ್ಸಾಹಿಸುತ್ತೇನೆ. ದಕ್ಷಿಣ ಕರ್ನಾಟಕದಲ್ಲಿ ಕೆಲವೇ ಜನರಿದ್ದರೂ ಇಡೀ ರಾಜ್ಯದ ತುಂಬಾ ಪ್ರಚಾರ ಮಾಡಿಕೊಳ್ಳುತ್ತಾರೆ. ಆದರೆ ಬೀದರನಲ್ಲಿ ಸಾವಿರಾರು ಜನರು ಸೇರಿ ನಾಟಕ ಪ್ರದರ್ಶನಗೈದರೂ ಇದು ಬೆಂಗಳೂರಿಗೆ ತಲುಪುವುದಿಲ್ಲ. ಹೀಗಾಗಿ ಇಲ್ಲಿ ಪ್ರತಿಭೆಗೆ ಕೊರತೆಯಿಲ್ಲ. ಗುರುತಿಸುವಿಕೆಗೆ ಕೊರತೆಯಿದೆ. ಆ ಗುರುತಿಸುವ ಕಾರ್ಯ ನಾವು ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಇಲಾಖೆ ಹಾಗೂ ಕಲಾವಿದರ ಸಹಕಾರದೊಂದಿಗೆ ರಂಗಾಯಣ ಶಾಲಾ ಮತ್ತು ಕಾಲೇಜುಗಳಲ್ಲಿ ರಂಗೋತ್ಸವ ಕಾರ್ಯಕ್ರಮ ಹಮ್ಮಿಕೊಂಡು ಶಾಲಾ ಮಟ್ಟದಿಂದಲೇ ಮಕ್ಕಳಲ್ಲಿ ದೇಶಿ ಸಂಸ್ಕೃತಿಯನ್ನು ಬಿಂಬಿಸುವ ನಾಟಕ, ರಂಗಗೀತೆ ಮತ್ತು ಜನಪದ ಸಾಹಿತ್ಯದ ಕುರಿತು ಅಭಿರುಚಿ ಹುಟ್ಟಿಸುವ ಕಾರ್ಯ ಮಾಡಲಿದ್ದೇವೆ ಎಂದರು.

ವಿಶೇಷ ಉಪನ್ಯಾಸ ನೀಡಿದ ಹಿರಿಯ ರಂಗಕರ್ಮಿ ಪ್ರೊ. ಸಂಗ್ರಾಮ ಎಂಗಳೆ ಮಾತನಾಡಿ ಜಾಗತಿಕರಣ ಆಧುನಿಕರಣ ಹಾಗೂ ಮೊಬೈಲ್ ಯುಗದಲ್ಲಿ ಕಲೆ ಮತ್ತು ಕಲಾವಿದರು ಅಳಿವಿನಂಚಿನಲ್ಲಿದ್ದಾರೆ.ಆದ್ದರಿಂದ ಅತ್ಯಂತ ಉತ್ಸಾಹದೊಂದಿಗೆ ಇನ್ನೂ ಹೆಚ್ಚಿನ ಕಾರ್ಯಕ್ರಮ ಹಮ್ಮಿಕೊಂಡು ಜನಪದ ಕಲೆ ಉಳಿಸಿ ಬೆಳೆಸುವ ಕಾರ್ಯ ಮಾಡಬೇಕಾಗಿದೆ ಎಂದರು. ರಂಗಾಯಣ ಇದೀಗ ಯುವ ಪೀಳಿಗೆಗೆ ಪ್ರೋತ್ಸಾಹ ನೀಡುತ್ತಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸುರೇಶ ಚನಶೆಟ್ಟಿ ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಮಾತನಾಡಿದರು.

ವೇದಿಕೆ ಮೇಲೆ ಕರ್ನಾಟಕ ಗಡಿಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ಪ್ರಮುಖರಾದ ವಿಷ್ಣುಕಾಂತ ಬಿಜೆ, ಕಾಶಿನಾಥ ಚಲ್ವಾ, ಎಂ.ಎಸ್.ಮನೋಹರ, ಮಾರುತಿ ಬೌದ್ಧೆ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಹಿರಿಯ ಕಲಾವಿದ ಶಂಭುಲಿಂಗ ವಾಲದೊಡ್ಡಿ ರಂಗಗೀತೆಗಳನ್ನು ನಡೆಸಿಕೊಟ್ಟರು. ಮಲ್ಲಿಕಾರ್ಜುನ ಸ್ವಾಮಿ ಐನೊಲ್ಲಿ ನಾಡಗೀತೆ ಮತ್ತು ವಚನ ಸಂಗೀತ ನಡೆಸಿಕೊಟ್ಟರು.

ಇದೇ ವೇಳೆ ಡಾ. ಸಿದ್ರಾಮ ಕಾರಣಿಕ ನಿರ್ದೇಶನದ ಮಲ್ಲಿಕಾರ್ಜುನ ದೊಡ್ಡಮನಿ ಪ್ರಸ್ತುತಪಡಿಸಿದ ರಂಗ ವೃಕ್ಷ ನಾಟಕ ನೃತ್ಯ ಸೇವಾ ಸಂಘದ ಕಲಬುರಗಿಯ ವತಿಯಿಂದ ಡಾ. ರಮಾಬಾಯಿ ಅಂಬೇಡ್ಕರ್ ಅವರ ಅದ್ಭುತ ನಾಟಕ ಪ್ರದರ್ಶನ ಮಾಡಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಡಿ.ಎಸ್.ಜೋಶಿ ನಿರೂಪಿಸಿದರು.

## ಕಾಂಗ್ರೆಸ್ ರೈತ ವಿರೋಧಿ : ಭಗವಂತ ಖೂಬಾ ಆರೋಪ



ಬೀದರ. ಜು. 28 : ಕೇಂದ್ರ ಸರ್ಕಾರದಿಂದ ಬಿತ್ತನೆಗಾಗಿ ರಸಗೊಬ್ಬರ ಕಳುಹಿಸಿದರೂ ರಾಜ್ಯ ಕಾಂಗ್ರೆಸ್ ಸರ್ಕಾರ ಕೃತಕ ಅಭಾವ ಸೃಷ್ಟಿಸಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿದೆ. ಇದು ಕೂಡಲೇ ನಿಲ್ಲಬೇಕು. ರೈತರಿಗೆ ಸಮರ್ಪಕವಾಗಿ ರಸಗೊಬ್ಬರ ವಿತರಣೆ ಮಾಡಬೇಕೆಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಭಾನುವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ರೈತವಿರೋಧಿ ಸರ್ಕಾರವಾಗಿದೆ. ಕೇಂದ್ರವು ಯೂರಿಯಾ ರಸಗೊಬ್ಬರವನ್ನು 8.73 ಲಕ್ಷ ಮೆಟ್ರಿಕ್ ಟನ್, ಡಿಎಪಿ 2.87 ಲಕ್ಷ ಮೆಟ್ರಿಕ್ ಟನ್, ಎನ್.ಪಿ.ಕೆ.ಎಸ್.12.41 ಲಕ್ಷ ಮೆ. ಟನ್ ರಸಗೊಬ್ಬರ ರಾಜ್ಯಕ್ಕೆ ಕಳುಹಿಸಿದೆ. ಅದರಲ್ಲಿ ಬೀದರ ಜಿಲ್ಲೆಗೆ ಯೂರಿಯಾ 13727 ಮೆ.ಟನ್, ಡಿ.ಎ.ಪಿ. 13211 ಮೆ. ಟನ್ ಕಳುಹಿಸಿದೆ. ಅದರಲ್ಲಿ 8139 ಮೆ. ಟನ್ ಯೂರಿಯಾ ಮಾರಾಟ ಮಾಡಲಾಗಿದೆ. ಡಿ.ಎ.ಪಿ. 7274 ಮೆ.ಟನ್ ರಸಗೊಬ್ಬರ ಮಾರಾಟ ಮಾಡಲಾಗಿದೆ. ಯೂರಿಯಾ ಜಿಲ್ಲೆಯಲ್ಲಿ ಇನ್ನೂ 1363 ಮೆ. ಟನ್ ಲಭ್ಯವಿದೆ. ಡಿ.ಎ.ಪಿ. 2047 ಮೆ. ಟನ್ ಜಿಲ್ಲೆಯಲ್ಲಿ ಲಭ್ಯವಿದೆ. ಆದರೂ ಕೂಡ ರಾಜ್ಯ ಸರ್ಕಾರ ಕೃತಕ ಅಭಾವ ಸೃಷ್ಟಿಸಿ ರೈತರಿಗೆ ತೊಂದರೆ ನೀಡುತ್ತಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರೈತರ ಮಕ್ಕಳಿಗೆ ಬಿಜೆಪಿ ಈ ಹಿಂದೆ ನೀಡುತ್ತಿದ್ದ ವಿದ್ಯಾನಿಧಿ ವಿದ್ಯಾರ್ಥಿ ವೇತನ ಬಂದ್ ಮಾಡಿದೆ. 52 ಲಕ್ಷ ರೈತರಿಗೆ ವರ್ಷದಲ್ಲಿ 4 ಸಾವಿರ ಹಣ ಬಿಜೆಪಿ ಸರ್ಕಾರ ನೀಡುತಿತ್ತು. ಅದೂ ಕಾಂಗ್ರೆಸ್ ಬಂದ್ ಮಾಡಿದೆ. ಕೇಂದ್ರದಿಂದ ಬಂದ ಎನ್.ಡಿ.ಆರ್.ಎಫ್. ಮತ್ತು ಎಸ್.ಡಿ.ಆರ್.ಎಫ್ ಹಣ ರಾಜ್ಯ ಸರ್ಕಾರ ರೈತರಿಗೆ ಕೊಡಲಿಲ್ಲ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಮೇಲೆ 3400 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೈತರಬಾವಿ, ಬೋರ್ವೆಲ್ ಗೆ ಕೊಡಿಸುವ ಟ್ರಾನ್ಸ್ ಫಾರ್ಮರ್ ಬಿಜೆಪಿ ಅವಧಿಯಲ್ಲಿ ಕೇವಲ 25 ಸಾವಿರಕ್ಕೆ ಮಾತ್ರ ನೀಡಲಾಗುತಿತ್ತು. ಕಾಂಗ್ರೆಸ್ ಸರ್ಕಾರದಲ್ಲಿ 3 ಲಕ್ಷಕ್ಕೆ ಏರಿಸಿದೆ ಎಂದರು.

ಇದೇ ವೇಳೆ ಮಾಜಿ ಬುಡಾ ಅಧ್ಯಕ್ಷ ಬಾಬು ವಾಲಿ, ಪ್ರಮುಖರಾದ ಶಿವರಾಜ ಅಲ್ಮಾಜೆ, ಶ್ರೀನಿವಾಸ ಚೌಧರಿ, ಸಂತೋಷ ರೆಡ್ಡಿ ಆಣದೂರ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಶ್ರಾವಣ ಸಂಭ್ರಮವಲ್ಲ, ಸತ್ಯ ಸಾಧನೆ: ಗಂಗಾಂಬಿಕಾ ಅಕ್ಕ




ಬೀದರ. ಜು. 28 :'ಭಾರತೀಯರಿಗೆ ಶ್ರಾವಣ ಎಂದರೆ ಕೇವಲ ಸಂಭ್ರಮ ಅಲ್ಲ. ಅದು ಸತ್ಯ ಸಾಧನೆಯ ನಿಜ ಸಂಭ್ರಮ. ಶ್ರಾವಣ ಸತ್ಯ ಸಾಧನೆಗೆ ದಾರಿ ತೋರುವ ಶರಣರೊಡನೆ ಆಡಿ–ಪಾಡಿ ನಲಿದಾಡುವ ನಿಜ ಸಂಭ್ರಮ' ಎಂದು ಬಸವ ಸೇವಾ ಪ್ರತಿಷ್ಠಾನದ ಗಂಗಾಂಬಿಕಾ ಅಕ್ಕ ತಿಳಿಸಿದರು.

ಶ್ರಾವಣ ಮಾಸದ ಅಂಗವಾಗಿ ನಗರದ ಶರಣ ಉದ್ಯಾನದಲ್ಲಿ ಶುಕ್ರವಾರ ಸಂಜೆ ನಡೆದ 'ಪ್ರಭುಲಿಂಗ ಲೀಲೆ' ಪ್ರವಚನದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಪೂಜೆ, ಪ್ರಾರ್ಥನೆ, ಅನುಭಾವ ಗೋಷ್ಠಿಗಳು ನಡೆಯುವುದರಿಂದ ಎಲ್ಲೆಡೆ ಧನಾತ್ಮಕ ಅಲೆಗಳು ಪಸರಿಸುವ ಮೂಲಕ ಜನರಲ್ಲಿ ಬದುಕು ಎದುರಿಸುವ ಆತ್ಮವಿಶ್ವಾಸ ಮೂಡುತ್ತದೆ. ಮನುಷ್ಯ ಭಯಮುಕ್ತನಾಗಬೇಕಾದರೆ ಆತ್ಮ ವಿದ್ಯೆಯ ಕಡೆ ಹೋಗುವುದು ಅತಿ ಅವಶ್ಯಕ. ಆತ್ಮ ವಿದ್ಯೆಯೇ ಸರ್ವ ಶ್ರೇಷ್ಠ ವಿದ್ಯೆ ಎಂದು ಹೇಳಿದರು.

ಹಾರಕೂಡ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಚೆನ್ನವೀರ ಶಿವಾಚಾರ್ಯರು ಉದ್ಘಾಟಿಸಿ, ಒಂದು ತಿಂಗಳ ವರೆಗೆ ನಿರಂತರವಾಗಿ ನಡೆಯುವ 'ಪ್ರಭುಲಿಂಗ ಲೀಲೆ' ಪ್ರವಚನವನ್ನು ಭಕ್ತರು ಆಲಿಸಿ ಪುನೀತರಾಗಬೇಕು ಎಂದರು.

ಸರ್ಕಾರಿ, ಅರೆ ಸರ್ಕಾರಿ ನೌಕರರ ಪತ್ತಿನ ಸೌಹಾರ್ದ ಸಹಕಾರ ಸಂಘದ ಅಧ್ಯಕ್ಷ ರಾಜೇಂದ್ರಕುಮಾರ ಗಂದಗೆ ಮಾತನಾಡಿ, ಬಸವಾದಿ ಶರಣರು ವಚನಗಳ ಮೂಲಕ ಸಮಾಜದಲ್ಲಿನ ಅಸಮಾನತೆ ಮತ್ತು ಅನ್ಯಾಯದ ವಿರುದ್ಧ ಧ್ವನಿ ಎತ್ತಿದ್ದರು. ವಚನ ಸಾಹಿತ್ಯವು ಧಾರ್ಮಿಕ, ಸಾಮಾಜಿಕ ಮತ್ತು ದಾರ್ಶನಿಕ ಚಿಂತನೆಗಳನ್ನು ಒಳಗೊಂಡಿದೆ. ಶರಣರ ದಾರ್ಶನಿಕರ ಸಂತರ ನುಡಿಗಳನ್ನು ಕೇಳಿ ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಬದುಕು ಹಸನಾಗುತ್ತದೆ ಎಂದು ಹೇಳಿದರು.

ಬ್ರಹ್ಮಕುಮಾರೀಸ್ ಈಶ್ವರೀಯ ವಿದ್ಯಾಲಯದ ರಾಜಯೋಗಿಣಿ ಬಿ.ಕೆ. ಗುರುದೇವಿ ಅಕ್ಕ ಮಾತನಾಡಿದರು. ಪ್ರತಿಷ್ಠಾನದ ಡಾ. ವಿಜಯಶ್ರೀ ಬಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.

ಹಿರಿಯ ಚಿತ್ರ ಕಲಾವಿದ ಸಿ. ಬಿ. ಸೋಮಶೆಟ್ಟಿ ಷಟಸ್ಥಲ ಧ್ವಜರೋಹಣಗೈದರು. ಬಿ.ಕೆ.ಹಿರೇಮಠ ಇದ್ದರು. ಶಿವಕುಮಾರ

ಪಾಂಚಾಳ ಮತ್ತು ಸಂಗಡಿಗರು ವಚನಗಾಯನ ನಡೆಸಿಕೊಟ್ಟರು. ಪ್ರವಚನ ಸೇವಾ ಸಮಿತಿಯ ಅಧ್ಯಕ್ಷೆ ಜ್ಞಾನದೇವಿ ಬಬಛೆಡೆ ಸ್ವಾಗತಿಸಿದರೆ, ಸುಮಾ ಭೂಶೆಟ್ಟಿ ನಿರೂಪಿಸಿದರು. ಗುರುನಗರ ನೀಲಮ್ಮನ ಬಳಗದ ಶರಣೆಯರು ಗುರುಪೂಜೆ ನಡೆಸಿಕೊಟ್ಟರು.

## ಜಿಎನ್‌ಡಿ ಕಾಲೇಜಿನಲ್ಲಿ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ



ಬೀದರ. ಜು. 28 :ಜಿಎನ್‌ಡಿ ಇಂಜಿನೀಯರಿಂಗ್ ಕಾಲೇಜಿನಲ್ಲಿ ಎಂಬಿಎ ವಿಭಾಗವು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳವನ್ನು ಹೈಬ್ರೇಡ್ ಮೋಡ್‌ನಲ್ಲಿ ಹಸಿರು ಹಣಕಾಸಿನ ಮೂಲಕ ಸುಸ್ಥಿರ ಆರ್ಥಿಕತೆ ಕುರಿತು ರಾಷ್ಟ್ರೀಯ ಸಮ್ಮೇಳನ ಹಮ್ಮಿಕೊಳ್ಳಲಾಗಿತ್ತು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಾದೇಶಿಕ ಕಛೇರಿ ಕಲಬುರ್ಗಿಯ ಪ್ರೊ. ಡಾ.ಬಿ.ಶಂಭುಲಿಂಗಪ್ಪ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡುತ್ತ ಮಾನವ ಚಟುವಟಿಕೆಗಳಿಂದಾಗಿ ಪರಿಸರ ನಾಶವಾಗುತ್ತಿದೆ, ಪರಿಸರದ ಉಳಿವಿಗಾಗಿ ಇಂಧನದ ನವೀನ ಆಯ್ಕೆಗಳಾದ ಸೌರಶಕ್ತಿ, ವಾಯುಶಕ್ತಿ ಮತ್ತು ಜಲಶಕ್ತಿಯಂತಹ ನವೀಕರಿಸಬಹುದಾದ ಅಗತ್ಯತೆಯನ್ನು ಹೊರಹಾಕಿ, ಇವುಗಳು ಇಂದಿನ ದಿನಗಳಲ್ಲಿ ಪೆಟ್ರೋಲಿಯಂ ಹಾಗೂ ಕಲ್ಲಿದ್ದಗಿಂತ ಕಡಿಮೆ ವೆಚ್ಚದಲ್ಲಿ ಲಭ್ಯವಿರುವ ಶಕ್ತಿಯ ಮೂಲಗಳಾಗಿವೆ ಎಂಬುದನ್ನು ವಿವರಿಸಿದರು.

ಕೇಂದ್ರ ವಿಶ್ವವಿದ್ಯಾಲಯದ ವ್ಯವಹಾರ ಅಧ್ಯಯನಗಳ ಡೀನ್ ಆಗಿರುವ ಪ್ರೊ. ಪಾಂಡುರಂಗ ವಿ. ಅವರು ಮಾತನಾಡುತ್ತ ಪ್ಲಾಸ್ಟಿಕ್ ಮುಕ್ತ ಭಾರತ ಮಾಡಲು ವರ್ಷಗಳು ಬೇಕಾಗುತ್ತದೆ ಎಂಬ ಗಂಭೀರ ವಿಷಯವನ್ನು ಉಲ್ಲೇಖಿಸಿ ನೈಸರ್ಗಿಕ ಸಂಪತ್ತುಗಳನ್ನು ಭವಿಷ್ಯ ಪೀಳಿಗೆಗಾಗಿ ಉಳಿಸಿ ಕೊಡುವ ಜವಾಬ್ದಾರಿ ಇಂದಿನ ಯುವಪೀಳಿಗೆಯ ಮೇಲಿದೆ ಎಂದು ತಿಳಿಸಿದರು. 2015 ರಿಂದ ಸ್ಥಿರ ಅಭಿವೃದ್ಧಿಯ ಕುರಿತಾಗಿ ಜಾಗತಿಕ ಮಟ್ಟದಲ್ಲಿ ತೀವ್ರ ಚರ್ಚೆಗಳು ನಡೆದಿವೆ ಇಂದಿನ ಯುವಕರು "ವಿಕಸಿತ ಭಾರತ"ದ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಕರೆ ಕೊಟ್ಟರು.

ಸಂಸ್ಥೆಯ ಉಪಾಧ್ಯಕ್ಷೆ ಡಾ.ರೇಷ್ಮಾ ಕೌರ ಅವರು ಮಾತನಾಡಿ ಈಗಾಗಲೇ ಜೂನ್ ತಿಂಗಳಲ್ಲಿ 500 ಸಸಿಗಳನ್ನು ನೆಡಲಾಗಿದೆ. ಪ್ಲಾಸ್ಟಿಕ ವಸ್ತುಗಳನ್ನು ಬಳಕೆ ಮಾಡದಂತೆ ವಿದ್ಯಾರ್ಥಿಗಳಿಗೆ ಪ್ರತಿಜ್ಞೆ ಮಾಡಿಸಲಾಗಿದೆ ಎಂದರು.

ಎಂಬಿಎ ವಿಭಾಗದ ಮುಖ್ಯಸ್ಥೆ ಡಾ. ಜ್ಯೋತಿ ಐನಾಪುರ ಅವರು ಸ್ವಾಗತವನ್ನು ಕೋರಿದರೆ ಪ್ರಾಂಶುಪಾಲರಾದ ಡಾ.ಎಂ.ಧನಂಜಯ್, ಡಾ. ಮಹೇಶ್‌ಕುಮಾರ, ಡಾ.ಶಶಿಧರ್ ಪಾಟೀಲ್, ಡಾ. ವಿಜಯರಾಜ್ ಸಾಹು ಮತ್ತು ಡಾ. ಹೂರ್ ಉನ್ನಿಸಾ ಉಪಸ್ಥಿತರಿದ್ದರು.

# ಒಳ ಪ್ರಸನ್ನತೆ ಹಾಗೂ ಸಾಮ್ಯತೆಯೇ ಉತ್ತಮ ಆರೋಗ್ಯದ ಅಡಿಪಾಯ – ಹಾರಕೂಡ ಶ್ರೀ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಒಳಪ್ರಸನ್ನತೆಯನ್ನುಕಾಪಾಡಿಕೊಂಡು ಎಲ್ಲಾ ಇಂದ್ರಿಯಗಳು ಹಾಗೂ ಅಂಗಾಂಗಗಳಲ್ಲಿ ಸಾಮ್ಯತೆ ಹೊಂದಿರುವುದು ಮನುಷ್ಯನ ಉತ್ತಮ ಆರೋಗ್ಯಕ್ಕೆ ಅಡಿಪಾಯ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.



ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಬಸವಕಲ್ಯಾಣದ ಆರುಷ ಮಕ್ಕಳ ಹಾಗೂ ಇ ಏನ್ ಟಿ ಆಸ್ಪತ್ರೆಯ ವತಿಯಿಂದ ಆಯೋಜಿಸಿದ ಉಚಿತ ಆರೋಗ್ಯ ತಪಾಸಣೆ ಶಿಬಿರದ ಉದ್ಘಾಟನಾ ಸಮಾರಂಭದ ಪಾವನ ಸನ್ನಿಧಾನ ವಹಿಸಿ ಮಾತನಾಡಿದ ಶ್ರೀಗಳು ಸ್ವಸ್ಥ ಆರೋಗ್ಯವೇ ನೆಮ್ಮದಿ ಬದುಕಿನ ಮೂಲಾಧಾರವಾಗಿದ್ದು, ಉತ್ತಮ ಆರೋಗ್ಯವಿದ್ದರೆ ಮಾತ್ರ ಏನೆಲ್ಲಾ ಸಾಧನೆ ಮಾಡಲು ಸಾಧ್ಯವಾಗುತ್ತದೆ.

ಸದೃಢ ಕಾಯದ ಜೊತೆಗೆ ದೃಢವಾದ ಚಿತ್ತ ಸುದ್ದಿಯೂ ಹೊಂದಿರಬೇಕಾಗುತ್ತದೆ.

"ಧರ್ಮ ಅರ್ಥ ಕಾಮ ಮೋಕ್ಷಾಣಾಂ, ಆರೋಗ್ಯ ಮೂಲೋತ್ತಮ " ಎನ್ನುವಂತೆ ಜೀವನದಲ್ಲಿ ಎಲ್ಲದಕ್ಕೂ ಉತ್ತಮ ಆರೋಗ್ಯ ಎನ್ನುವುದು ಆತ್ಮೀಯ ಒಡನಾಡಿಯಾಗಿ ಕಾರ್ಯನಿಭಾಯಿಸುತ್ತದೆ.

ಇಂದು ಚಿಕ್ಕ ಚಿಕ್ಕ ಮಕ್ಕಳಲ್ಲಿಯೂ ಭೀಕರ ಕಾಯಿಲೆಗಳು ಕಂಡು ಬರುತ್ತಿರುವುದು ಕಳವಳಕಾರಿ ಸಂಗತಿ.

ನಮ್ಮ ಆರೋಗ್ಯದ ಶಿಲ್ಪಿಗಳು ನಾವೇ ಆಗಿರುವುದರಿಂದ ದುಷ್ಟ ವ್ಯಸನಗಳಿಗೆ ಬಲಿಯಾಗದೆ ಒಳಗೂ ಹೊರಗೂ ಶುಚಿತ್ವರೂಡಿಸಿಕೊಂಡು ಶ್ರೇಷ್ಠ ಗುಣಮಟ್ಟದ ಬದುಕು ಸಾಗಿಸುವಂತಾಗಬೇಕು.

ಈ ನಿಟ್ಟಿನಲ್ಲಿ ಬಸವಕಲ್ಯಾಣದ ಆರುಷ್ ಆಸ್ಪತ್ರೆ ವೈದ್ಯರು ಹೊಂದಿರುವ ಸಾಮಾಜಿಕ ಕಳಕಳಿ ಸ್ತುತ್ಯರ್ಹವಾಗಿದ್ದು ಇವರ ಪ್ರಯತ್ನ ಫಲಪ್ರದ ಗೊಳ್ಳಲಿ ಹಾಗೂ ಸರ್ವರೂ ಸುಖಿಯಾಗಿ ಬಾಳಲಿ ಎಂದು ಶುಭ ಹಾರೈಸಿದರು.

ಡಾ. ಶಿವರಾಜ ಮಾಲಿ ಪಾಟೀಲ ಸ್ವಾಗತಿಸಿ, ಶಿಬಿರದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ. ಕೆ. ಹಿರೇಮಠ, ಪಿ ಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಮೇಘರಾಜ ನಾಗರಾಳೆ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ, ಡಾ. ನಂದಿನಿ ಮಾಲಿಪಾಟೀಲ, ಡಾ. ಮಹದೇವ ಪಾಟೀಲ, ಡಾ. ರಾಜಶೇಖರ ಮದರಿ, ಹಾರಕೂಡ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಮಹಾದೇವ ಪೂಜಾರಿ, ಪಂಡಿತರಾವ ದೇಗಾಂವ, ಸಿದ್ರಾಮ ಹೆಗಡೆ, ಕಾಶಪ್ಪ ದೇಗಾಂವ, ಶಿವರಾಜ ತಾಟೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಕುಮಾರಿ ಭುವನೇಶ್ವರಿ ಮತ್ತು ಅನುಶ್ರೀ ಭಕ್ತಿ ಗೀತೆ ಪ್ರಸ್ತುತಪಡಿಸಿದರು.

ವಿಠಲ ಹೂಗಾರ ನಿರೂಪಣೆ ಮಾಡಿದರು.

ಶಿಬಿರದಲ್ಲಿ 200ಕ್ಕೂ ಅಧಿಕ ಜನ ಆರೋಗ್ಯ ತಪಾಸಣೆ ಮಾಡಿಕೊಂಡರು.

# ಹಳ್ಳಿಖೇಡ್ (ಬಿ) ಪಟ್ಟಣದಲ್ಲಿ ಹೈಟೆಕ್ ಬಸ್ ನಿಲ್ದಾಣ:ಶಾಸಕ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:– ಹಳ್ಳಿಖೇಡ್ ಬಿ ಪಟ್ಟಣದ ಅಭಿವೃದ್ಧಿಗೆ ನಾನು ಹೆಚ್ಚಿನ ಆದ್ಯತೆ ನೀಡಿ ಅಭಿವೃದ್ಧಿ ಪಡಿಸುತ್ತಿದ್ದೇನೆ ಎಂದು ಶಾಸಕ ಡಾ. ಸಿದ್ದು ಪಾಟೀಲ್ ತಾಲೂಕಿನ ಹಳ್ಳಿಖೇಡ್ ಬಿ. ಪಟ್ಟಣದಲ್ಲಿ ರಾಜ್ಯ ಹೆದ್ದಾರಿ 198 ಹೊನ್ನಳ್ಳಿ ದಿಂದ ಉಡಬಾಳ ವರೆಗೆ 38 ರಿಂದ 40 ಕಿಲೋ ಮೀಟ–ರ್ ವರೆಗೆ ರಸ್ತೆ ಕಾಮಗಾರಿ ಸುಧಾರಣೆ ಕಾಮಗಾರಿ ಸೀಮೆ ನಾಗಣ್ಣ ಕ್ರಾಸ್ ದಿಂದ ಬಸವಣ್ಣ ವೃತ್ತದ ವರೆಗೆ ಚತುರಸ್ಪದ ರಸ್ತೆ ನಿರ್ಮಾಣ 2024–25ನೇ ಸಾಲಿನ ಅಪೆಂಡಿಕ್ಸ್– ಇ ಯೋಜನ ಅಡ್ಡಿಯಲ್ಲಿ 416.64 ಲಕ್ಷ ರೂಪಾಯಿ ಮೊತ್ತದ ಕಾಮಗಾರಿ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ಸೀಮೆ ನಾಗಣ್ಣ ಕ್ರಾಸ್ ದಿಂದ ಬಸವೇಶ್ವರ ವೃತ್ತದ ವರೆಗೆ ಸುಂದರ ಚತುಷ್ಪಥ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ. ರಸ್ತೆ ವಿಭಜಕ ಮೇಲೆ ಹುಮನಾಬಾದ ಮಾದರಿಯಲ್ಲಿ ಸುಂದರ ದಾರಿ ದೀಪ ಹಾಕಲಾಗುವುದು.




## ಚತುಷ್ಪಥ ರಸ್ತೆ ನಿರ್ಮಾಣಕ್ಕೆ ಗುದ್ದಲಿ ಪೂಜೆ

ಪಟ್ಟಣಕ್ಕೆ ಈ ಸುಂದರ ರಸ್ತೆ ಮೇರಗು ನೀಡಲಿದೆ ಎಂದರು. ಕೆ.ಕೆ.ಆರ್.ಡಿ.ಬಿ.ಅನುದಾನದಲ್ಲಿ 149 ಲಕ್ಷ ರೂಪಾಯಿ ನೀಡಿ ಹುಮನಾಬಾದ, ಘಾಟಬೋರಳ, ಹಳ್ಳಿಖೇಡ್ ಬಿ ಪಟ್ಟಣಗಳಿಗೆ ಅನುದಾನ ನೀಡಲಾಗಿದೆ ಎಂದರು. ಪಟ್ಟಣದಲ್ಲಿ ಹೈಟೆಕ್ ಬಸ್ ನಿಲ್ದಾಣದ ಮಾಡಲು ಸಾರಿಗೆ ಸಚಿವರಲ್ಲಿ 3ಕೋಟಿ ರೂಪಾಯಿ ನೀಡುವಂತೆ ಮನವಿ ಮಾಡಿದ್ದೇ, ಸರ್ಕಾರ 1ಕೋಟಿ ರೂಪಾಯಿ ಮಂಜೂರು ಮಾಡಿದೆ, ಕೆ.ಕೆ. ಆರ್.ಡಿ.ಬಿ. ಅನುದಾನದಲ್ಲಿ 1.5 ಕೋಟಿ ರೂಪಾಯಿ ಒಟ್ಟು 2.5 ಕೋಟಿ ಅಂದಾಜು ವೆಚ್ಚದಲ್ಲಿ ಸುಂದರ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗುವುದು. ಇಲ್ಲಿಯ ಸರ್ಕಾರಿ ಆಸ್ಪತ್ರೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಅನುದಾನದಲ್ಲಿ ಮಂಜೂರಾದ ಆಸ್ಪತ್ರೆ ಕಟ್ಟಡ ನಿರ್ಮಾಣ ನಡೆಯುತ್ತಿದೆ. ಈ ಕಟ್ಟಡ ಪೂರ್ಣಗೊಳಿಸಲು ನಾನು 2 ಕೋಟಿ ರೂಪಾಯಿ ಅನುದಾನ ನೀಡಿದ್ದೇನೆ, ಅತೀ ಶೀಘ್ರದಲ್ಲೇ ಲೋಕಾರ್ಪಣೆ ಮಾಡಲಾಗುತ್ತದೆ ಎಂದರು. ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಪಾಟೀಲ್ ಮುಖ್ಯ ಅತಿಥಿಗಳಾಗಿ ಮಾತನಾಡಿ, ನನ್ನ ಸಹೋದರ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಈ ಪಟ್ಟಣದ ಸರ್ವಾಂಗೀಣ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಶಾಸಕರಿಗೆ ಹೆಚ್ಚಿನ ಅನುದಾನ ಬರುತ್ತಿದೆ. ನೀವು ನಿಮ್ಮದೇ ಅಭಿವೃದ್ಧಿ ಆಗದೆ, ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಕಾಳಜಿ ವಹಿಸಲು ಸಿದ್ದು ಪಾಟೀಲರಿಗೆ ಸಲಹೆ ನೀಡಿದರು. ವಿಧಾನ ಪರಿಷತ್ ಸದಸ್ಯರಿಗೆ ಕಡಿಮೆ ಅನುದಾನವಿದೆ ಈ ಹಿಂದೆ ನಾನು ಹುಮನಾಬಾದ ಕ್ಷೇತ್ರದ ಅಭಿವೃದ್ಧಿಗೆ 10 ಕೋಟಿ ರೂಪಾಯಿ ಅನುದಾನ ನೀಡಿದ್ದೇನೆ ಎಂದರು. ಹಿಂದಿನ ಶಾಸಕರು ನಿರ್ಮಾಣ ಮಾಡಿಸಿರುವ ಯಾತ್ರಿಕಾ ಭವನ ನಿರ್ಮಾಣ ಕಾಮಗಾರಿ ಇನ್ನು ಪೂರ್ಣಗೊಂಡಿಲ್ಲ ಈ ಕಾಮಗಾರಿ ಪೂರ್ಣಗೊಳಿಸಲು ಅನುದಾನ ನೀಡಲು ಆಗ್ರಹಿಸಿದರು.

ನನಗೆ 41 ವಿಧಾನ ಸಭಾ ಕ್ಷೇತ್ರಗಳಿವೆ ಆದರೆ ಸರ್ಕಾರದ 2ಕೋಟಿ ಕೆ.ಕೆ.ಆರ್.ಡಿ. ಬಿ ಅನುದಾನದಲ್ಲಿ 5ಕೋಟಿ ರೂಪಾಯಿ ಬರುತ್ತದೆ ಎಂದರು. ಸಹಾಯಕ ಅಭಿಯಂತರ ಅಲಿಸಾಬ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಜಗದೇವಿ ರಾಜು ಶಂಕೆ, ಸಹಾಯಕ ಕಾರ್ಯಪಾಲಕ ಅಭಿಯಂತರ ವೆಂಕಟ ಸಿಂಧೆ, ವೀರೇಂದ್ರ ಶಟಗಾರ, ಪುರಸಭೆ ಮುಖ್ಯಾಧಿಕಾರಿ ಲಿಂಗಪ್ಪ ಹದನೂರ್, ಚಿಟಗುಪ್ಪ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಮಹಾಂತಯ್ಯ ತೀರ್ಥ, ನಾಗರಾಜ ಹಿಬಾರೆ ಸೇರಿದಂತೆ ಪುರಸಭೆ ಸದಸ್ಯರು ಗ್ರಾಮಸ್ಥರು ಉಪಸ್ಥಿತರಿದ್ದರು.

## ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ಮಧ್ಯೆ ಮಾತಿನ ಚಕಮಕಿ...!



ಹಳ್ಳಿಖೇಡ್ ಬಿ.ಪಟ್ಟಣದಲ್ಲಿ ಚತುಷ್ಪಥ ರಸ್ತೆ ನಿರ್ಮಾಣ ಕಾಮಗಾರಿ ಗುದ್ದಲಿ ಪೂಜೆ ಕಾರ್ಯಕ್ರಮ ನಂತರ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಪಾಟೀಲ್ ಮಾತನಾಡುತ್ತಿದಾಗ ಕಿಕ್ಕಿರಿದು ಸೇರಿದ ಸಭಿಕರಲ್ಲಿ ಕಾಂಗ್ರೆಸ್ ಕಾರ್ಯಕರ್ತನಿಗೆ ಅವಾಚ್ಯ ಶಬ್ದಗಳಿಂದ ಬೈದಾಗ ಸಭೆಯಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ಕಾರ್ಯಕರ್ತರ ಮಧ್ಯೆ ಗದ್ದಲ ಆರಂಭಗೊಂಡಿತ್ತು. ಎರೆಡು ಪಕ್ಷದ ಕಾರ್ಯಕರ್ತರ ಬೈಗುಳದ ಮಾತಿನ ಚಕಮಕಿ ಆರಂಭಗೊಂಡಿತು. ಪೊಲೀಸರು ಮಧ್ಯ ಪ್ರವೇಶಿಸಿ ಚಿರಾಡುವ ಮತ್ತು ಗದ್ದಲ ಮಾಡುತ್ತಿರುವ ವ್ಯಕ್ತಿಗಳನ್ನು ಕಾರ್ಯಕ್ರಮದಿಂದ ಹೊರಗೆ ಒಯ್ಯಾಲಾಯಿತ್ತು. ಈ ಘಟನೆಯ ಸಂಬಂಧ ಚಂದ್ರಶೇಖರ್ ಪಾಟೀಲ್ ಮಾತನಾಡಿ, ಈ ಕಾರ್ಯಕ್ರಮಕ್ಕೆ ಪೊಲೀಸರು ಎಷ್ಟು ಬಂದೋಬಸ್ತ್ ಏರ್ಪಡಿಸಿದ್ದೀರಿ ಕಾರ್ಣಿಕರ್ತರು ಆಗುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಿದ್ದು ಪಾಟೀಲರ ಉದ್ದೇಶಿಸಿ ಮಾತನಾಡಿ, ಸರ್ಕಾರದ ಯಾವುದೇ ಕಾರ್ಯಕ್ರಮಗಳಿಗೆ ನಿಮ್ಮ ಬೆಂಬಲಿಗರಿಗೆ ಕರ ತರಬೇಡಿ ನಾನು ಒಬ್ಬಟ್ಟಿಯಾಗಿ ಬರುತ್ತೇನೆ ನೀವು ಹಾಗೆ ಬನ್ನಿ ಎಂದು ಶಾಸಕರಿಗೆ ಹಿತೋಪದೇಶ ಮಾಡಿದರು. ಡಾ. ಸಿದ್ದು ಪಾಟೀಲ್ ತಮ್ಮ ಬೆಂಬಲಿಗರಿಗೆ, ಕಾರ್ಯಕರ್ತರಿಗೆ ಶಾಂತತೆಯಿಂದ ಇರಲು ಮನವಿ ಮಾಡಿದರು. ಸಿಪಿಐ ಗುರು ಪಾಟೀಲ್ ಮಧ್ಯ ಪ್ರವೇಶಿಸಿ ವಿನಾಕಾರಣ ಈ ಗದ್ದಲ ಸೃಷ್ಟಿ ಮಾಡಿದ ಕಾರ್ಯಕರ್ತರಿಗೆ ತರಾಟೆಗೆ ತೆಗೆದುಕೊಂಡ ಮೇಲೆ ಗದ್ದಲ ಅಂತ್ಯಗೊಂಡಿತು.

'ವೈಜ್ಞಾನಿಕ ವೈಚಾರಿಕ ಹಿನ್ನಲೆ ಅರಿತು' ಹಬ್ಬಗಳು ಆಚಾರಿಸುವುದು ಸೂಕ್ತ.

# ಹಬ್ಬದ ಹೆಸರಿನಲ್ಲಿ ಹುತ್ತಿಗೆ ಹಾಲು ಎರೆಯುವುದು ಸೂಕ್ತವಲ್ಲ. ವೈಜನಾಥ .ಎಂ .ಕೋಳಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ' ಕಲಬುರಗಿ ನಗರದ ಆದರ್ಶ ನಗರ, ಪದವಿಪೂರ್ವ ಕಾಲೇಜಿನಲ್ಲಿ ಬಸವ ಪಂಚಮಿ ಹಿನ್ನೆಲೆಯಲ್ಲಿ ಕಾಲೇಜಿನ ವಿದ್ಯಾರ್ಥಿಗಳಿಗೆ



ವೈಜ್ಞಾನಿಕ ಹಿನ್ನೆಲೆ ಅರಿತು ವೈಚಾರಿಕ ಮನೋಭಾವನೆಯಿಂದ ಹಬ್ಬಗಳನ್ನು ಆಚರಿಸುವದು ಸೂಕ್ತ ಹಬ್ಬದ ಹೆಸರಿನಲ್ಲಿ ಹುತ್ತಕ್ಕೆ ಹಾಲು ಎರೆಯುವದು ಸೂಕ್ತವಲ್ಲ .


ದಯವೇ ಧರ್ಮದ ಮೂಲವಯ್ಯ ಆಗಬೇಕೆ ಹೊರತು ಭಯವೇ ಧರ್ಮದ ಮೂಲವಾಗಬಾರದು' ಎಂದು ನಿವೃತ್ತ ಪ್ರಾಂಶುಪಾಲರಾದ ಶ್ರೀ ವೈಜಿನಾಥ .ಎನ್. ಕೋಳಾರ ರವರು ಸರಕಾರಿ ಪದವಿ ಪೂರ್ವ ಕಾಲೇಜು ಆದರ್ಶ ನಗರ ಕಲಬುರಗಿ ಯಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ಮಾನವ ಬಂಧುತ್ವ ವೇದಿಕೆ ಕಲಬುರಗಿ ಮತ್ತು ಸಂಸ್ಕಾರ ಪ್ರತಿಷ್ಠಾನ್ ಕಲಬುರಗಿ, ಜಾಗತಿಕ ಲಿಂಗಾಯತ ಮಹಾ ಸಭಾ, ಕಲಬುರ್ಗಿ ಆರ್ಟ್ ಥಿಯೇಟರ್, ಕಲಬುರ್ಗಿ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಬಸವ ಪಂಚಮಿ' ಕಾರ್ಯಕ್ರಮದ ಮುಖ್ಯ ಉಪನ್ಯಾಸಕರಾಗಿ ಉಪನ್ಯಾಸ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ಯ ಪ್ರಾಂಶುಪಾಲರಾದ ಶ್ರೀ ರಾಜು ಗಂಗಾಧರ್ ರವರು ವಹಿಸಿದ್ದರು.

ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಯನ್ನು ಹಿರಿಯ ಉಪನ್ಯಾಸಕರಾದ .ಜೆ. ಮಲ್ಲಪ್ಪರವರು ಮಾತನಾಡಿ ಬಸವ ಪಂಚಮಿ ಆಚರಣೆ–ಯ ಉದ್ದೇಶ ವನ್ನು ತಿಳಿಸಿ. ಜನರ ಮನೆಗಳ ಸೂರುಗಳು ಗಟ್ಟಿಯಾಗಿ ಬೇಕೆ ಹೊರತು ಗುಡಿಗಳ ಗೋಪುರಗಳಲ್ಲ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಶ್ರೀ ಪ್ರಭುಲಿಂಗ ಮಹಾಗಾಂವ ಕರ್ ಜಿಲ್ಲಾ ಅಧ್ಯಕ್ಷರು ಲಿಂಗಾಯತ ಮಹ ಸಭಾ.. ಶ್ರೀಮತಿ ಪ್ರತಿಭಾ ದೇವೂರ್ ಮುಖ್ಯ ಶಿಕ್ಷಕರು ಸರ್ಕಾರಿ ಪ್ರೌಢ ಶಾಲೆ ಕೆಪಿಎಸ್. ಸುನೀಲ ಮಾನಪಡೆ ಶ್ರೀ ವಿಠಲ ಚಿಕಣಿ ನಿರ್ದೇಶಕರು ಸಂಸ್ಕಾರ ಪ್ರತಿಷ್ಠಾನ. ಶ್ರೀ ನಾಗೇಂದ್ರ ಜವಳಿ ಜಿಲ್ಲಾ ಸಂಚಾಲಕರು ಮಾನವ ಬಂಧುತ್ವ ವೇದಿಕೆ ಕಲಬುರಗಿ ಶ್ರೀ ಮೈಲಾರಿ ದೊಡ್ಡಮನಿ ಯುವ ಮುಖಂಡರು ಕಲಬುರಗಿ ಮತ್ತು. ಅನೀಲ ಮಂಗಾ ಸರಕಾರಿ ಪದವಿ ಪೂರ್ವ ಕಾಲೇಜಿನ ಎಲ್ಲ ಉಪನ್ಯಾಸಕರಾದ ಶ್ರೀ ಸಯೀದ್ ಅಬ್ದುಲ್ ಖಾದರ್ ಶ್ರೀ ಗಾಂಧಿ ಸುರಚಂದ್ರ. ಶ್ರೀ ಶಿವಕುಮಾರ ಯೇರಿಗೇರಿ, ಶ್ರೀಮತಿ ಭಾರತಿ ಪಾಂಡ್ಯೆ ಶ್ರೀಮತಿ ಲೀಲಾವತಿ ಪಡಶೆಟ್ಟಿ ಶ್ರೀಮತಿ ಜಗದೇವಿ ಶ್ರೀಮತಿ ಬನಶಂಕರಿ ಶ್ರೀಮತಿ ಜಯಶ್ರೀ ಪಾಟೀಲ್ ಮತ್ತು ಎಲ್ಲಾ ವಿದ್ಯಾರ್ಥಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು ಕಾರ್ಯಕ್ರಮದ ವಂದನಾರ್ಪಣೆಯನ್ನು ಕನ್ನಡ ಉಪನ್ಯಾಸಕರಾದ ಶ್ರೀ ವಿಠ್ಠಲ ಬಾವಿಮಾನಿ ಯವರು ಮಾಡಿದರು.

ಕಾರ್ಯಕ್ರಮದಲ್ಲಿ ಎಲ್ಲ ವಿದ್ಯಾರ್ಥಿಗಳಿಗೆ ಹಾಲು ಹಣ್ಣು ವಿತರಿಸಲಾಯಿತು.



ಬಸವಕಲ್ಯಾಣ :– ಇಲ್ಲಿನ ತಿಪುರಾಂತಿನ ಸಂಸ್ಥಾನ ಗವಿಮಠದಲ್ಲಿ ಶ್ರಾವಣ ಮಾಸ ಅಂಗವಾಗಿ ವಿಶೇಷ ಉಪನ್ಯಾಸ ಮಾಲೆ ಉದ್ಘಾಟನಾ ಸಮಾರಂಭದಲ್ಲಿ ಡಾ. ಯುವರಾಜ ಮಾಣಿಕಪ್ಪ ಬಿರಾದಾರ ತಾಲೂಕಾ ವೈದ್ಯಾಧಿಕಾರಿಗಳಾಗಿ ನೇಮಕಗೊಂಡಿರುವ ಪ್ರಯುಕ್ತ ಪೂಜ್ಯಶ್ರೀ ಷ.ಬ್ರ ಡಾ.ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಗವಿಮಠದಲ್ಲಿ ವಿಶೇಷ ಸನ್ಮಾನ ಮಾಡಲಾಯಿತು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).



ಬಸವಕಲ್ಯಾಣ :– ಜು 28 ತಾಲೂಕಿನ ಗದಲೇಗಾಂವ ಬಿ. ಸಿರಗಾಪೂರ, ಖೇರ್ಡ್ ಕೆ. ಹಾಗೂ ಲೆಂಗಟಿ ಗ್ರಾಮದ ಸಾವಿರಾರು ಭಕ್ತರು ಶ್ರಾವಣ ಮಾಸದ ನಿಮಿತ್ತವಾಗಿ ಸುಕ್ಷೇತ್ರ ಹಾರಕೂಡ ಶ್ರೀಮಠಕ್ಕೆ ಪಾದಯಾತ್ರೆ ಪ್ರಾರಂಭಿಸಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ದರ್ಶನ ಆಶೀರ್ವಾದ ಪಡೆದರು.ಮಲ್ಲಮ್ಮ ನುಡಿ ಚಿತ್ರ).

# ಮಲ ಮತ್ತು ಕೆಸರು ಸಂಸ್ಕಾರಣಾ ಘಟಕ ಭೂಮಿ ಪೂಜೆ ಜರುಗಿತು



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:– ತಾಲೂಕಿನ ಹಳ್ಳಿಖೇಡ್ (ಬಿ) ಪುರಸಭೆ ಹಾಗೂ ಚಿಟಗುಪ್ಪ ಪುರಸಭೆಗೆ ಕರ್ನಾಟಕ ನಗರ ಮೂಲ ಸೌಕರ್ಯ ಮತ್ತು ಹಣಕಾಸು ನಿಗಮ ಯೋಜನೆ ಅಡ್ಡಿಯಲ್ಲಿ ಪುರಸಭೆ ಮಲ ಮತ್ತು ಕೆಸರು ಸಂಸ್ಕಾರಣಾ ಘಟಕ ಅಂದಾಜು ವೆಚ್ಚ 3.70 ಲಕ್ಷ ರೂಪಾಯಿ ಭೂಮಿ ಪೂಜೆಯನ್ನು ಶಾಸಕ ಡಾ. ಸಿದ್ದು ಪಾಟೀಲ್ ಹಳ್ಳಿಖೇಡ್ (ಬಿ) ಪಟ್ಟಣದ ಹೊರವಲಯದ ಅಲ್ಲೂರ್ ರಸ್ತೆ ಪಕ್ಕದಲ್ಲಿ ಭೂಮಿ ಪೂಜೆಯನ್ನು ಶಾಸಕ ಡಾ. ಸಿದ್ದು ಪಾಟೀಲ್ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ್ ಪಾಟೀಲ್ ಸರಳ ಸಮಾರಂಭದಲ್ಲಿ ಗುದ್ದಲಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಹಳ್ಳಿಖೇಡ್ ಪುರಸಭೆ ಅಧ್ಯಕ್ಷೆ ಜಗದೇವಿ ಶಂಕೆ, ಮುಖ್ಯಾಧಿಕಾರಿಗಳಾದ ನಿಂಗಪ್ಪ ಹದುನೂರ್, ಹುಸಾಮುದ್ದೀನ್ ಬಾಬಾ, ಪುರಸಭೆ ಮಾಜಿ ಅಧ್ಯಕ್ಷ ಮಹಾಂತಯ್ಯಾ ತೀರ್ಥ, ನಾಗರಾಜ ಹಿಬಾರೆ, ಅನಂತಚೇತನ ಕನ್ಸ್ ಟ್ರಕ್ಷನ ಕಂಪನಿಯ ಪ್ರಶಾಂತ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಿಲ್ವಪತ್ರಿ ವೃಕ್ಷ ಶಿವನ ಪೂಜೆಗೆ ಅಷ್ಟೇ ಅಲ್ಲ. ಇದು ಔಷಧಿ ವೃಕ್ಷ ಇದನ್ನು ಸಂರಕ್ಷಿಸಿ ಉಳಿಸಿ:– ಕಾವಡಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:– ಬಿಲ್ವಪತ್ರಿ ವೃಕ್ಷ ಶಿವನ ಪೂಜೆಗೆ ಅಷ್ಟೇ ಅಲ್ಲ. ಇದು ಒಂದು ಔಷಧಿ ಮಹಾ ವೃಕ್ಷ ಇದನ್ನು ಉಳಿಸಿ ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕರ ಆದ್ಯ ಕರ್ತವ್ಯವಾಗಿದೆ ಎಂದು ಪರಿಸರ ವಾಹಿನಿ ಬೀದರ್ ಅಧ್ಯಕ್ಷ ಶೈಲೇಂದ್ರ ಕಾವಡಿ ಪಟ್ಟಣದ ಗದಗಿ ಮಠದಲ್ಲಿ ಶ್ರಾವಣ ಮಾಸದ ಶುಭ ಸಂದರ್ಭದಲ್ಲಿ ಬಿಲ್ವಪತ್ರ ಸಂರಕ್ಷಣೆ ಅಭಿಯಾನ ಅಂಗವಾಗಿ ಬಿಲ್ವಪತ್ರೆ ಸಸಿ ವಿತರಿಸಿ ಮಾತನಾಡಿದರು. ಬಿಲ್ವಪತ್ರಿ ಎಲೆ ತಿನ್ನೋದರಿಂದ ಮದು ಮೇಹಾ ರೋಗ ಸೇರಿದಂತೆ ಹಲವಾರು ರೋಗಗಳಿಗೆ ಈ ವೃಕ್ಷದ ಎಲೆ, ತೆ–ಊಗೋಟೆ ಹಲವಾರು ಔಷಧಿಗಳ ತಯಾರಿಕೆಯಲ್ಲಿ ಬಳಸುತ್ತಾರೆ ಎಂದರು. ಬೀದರ್ ಜಿಲ್ಲೆಯಲ್ಲಿ ಪ್ರತಿ ಗ್ರಾಮಗಳಲ್ಲಿ ಈ ವೃಕ್ಷ ತೀರ ಅಪರೂಪವಾಗಿದೆ. ಶ್ರಾವಣ ಬಂದಾಗ ಈ ವೃಕ್ಷದ ಮಹಿಮೆ ಅರಿತು ದೇವರ ಪೂಜೆಗಾಗಿ ವೃಕ್ಷಗಳನ್ನು ಹುಡುಕುತ್ತ ಅಲ್ಲಿಯುವರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ ಎಂದರು.



ಪರಿಸರ ವಾಹಿನಿ ಬೀದರ್ ವತಿಯಿಂದ ಕಳೆದ ಐದಾರು ವರ್ಷಗಳಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿ ಬಿಲ್ವಪತ್ರಿ ವೃಕ್ಷ ಸುರಕ್ಷಣೆ ಅಭಿಯಾನ ಹಮ್ಮಿಕೊಂಡು ಆದ್ದ ಮಠಗಳಲ್ಲಿ, ಮಂದಿರಗಳಲ್ಲಿ, ರೈತರ ಹೊಲದಲ್ಲಿ ಸಸಿ ನೆಡಸಲಾಗುತ್ತದೆ ಎಂದರು. ನಮ್ಮ ಜಾಗೃತಿ ಅಭಿಯಾನದ ಅಂಗವಾಗಿ ನೆಟ್ಟ ಸಸಿಗಳು ಸಮೃದ್ಧವಾಗಿ ಬೆಳೆಯುತ್ತಿವೆ ಎಂದರು. ಈ ಒಂದು ಅಭಿಯಾನವನ್ನು ಹಾರಕೂಡ ಡಾ. ಚನ್ನವೀರ ಶಿವಾಚಾರ್ಯರ ಕೃಪ ಆಶೀರ್ವಾದದಿಂದ ಸಸಿ ವಿತರಿಸಲಾಗುತ್ತಿದೆ ಎಂದರು. ನಿವೃತ್ತ ಪ್ರಾಚಾರ್ಯ ಶಿವಾನಂದ ಮಠಪತಿಯವರಿಗೆ ಬಿಲ್ವಪತ್ರಿ ಸಸಿ ವಿತರಿಸಲಾಯಿತು. ಸಸಿ ಸ್ವೀಕರಿಸಿ ಮಾತನಾಡಿ, ಇದು ಒಂದು ಪವಿತ್ರವಾದ ಅಭಿಯಾನ ಮುಂದುವರಿಸಲು ಶುಭ ಹಾರೈಸಿದರು. ಪ್ರತಿಯೊಬ್ಬರು ಈ ಔಷಧಿ ವೃಕ್ಷ ಬೆಳೆಸಿ ಸಂರಕ್ಷಿಸಲು ತಿಳಿಸಿದರು. ಶೇಷಾಂಕ ಕಾವಡಿ ಸ್ವಾಗತಿಸಿದರು. ಶರಣು ದನಕಾಯಿ ಕೊನೆಯಲ್ಲಿ ವಂದಿಸಿದರು.

# ನಿಜಸುಖಿ ಪ್ರಶಸ್ತಿಗೆ ಬಸವರಾಜ ಹಡಪದ ಆಯ್ಕೆ



ಕಲಬುರಗಿ:– ಕಳೆದ ಮೂರೂವರೆದಶಕಗಳಿಂದಲೂ ಕಲೆ, ಸಾಹಿತ್ಯ, ಸಾಂಸ್ಕೃತಿಕ , ಸಾಮಾಜಿಕ. ದಾರ್ಮಿಕ ಸೇವೆ ಮತ್ತು ರಂಗಭೂಮಿ ನಾಟಕ ನಿಸ್ವಾರ್ಥ ಸೇವೆಯ ಚಟುವಟಿಕೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಜಿಲ್ಲಾ ಹಡಪದ ಅಪ್ಪಣ್ಣ ಸಮಾಜದ ಗೌರವಾಧ್ಯಕ್ಷ ಬಸವರಾಜ ಜಿ. ಹಡಪದ ಸುಗೂರ ಎನ್ ಇವರನ್ನು ಕ್ಷೌರಿಕ ವೃತ್ತಿಯಲ್ಲಿ 'ನಿಜಸುಖಿ ಹಡಪದ ಅಪ್ಪಣ್ಣ' ಎಂಬ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಅಧ್ಯಕ್ಷ ಈರಣ್ಣ ಸಿ. ಹಡಪದ ತಿಳಿಸಿದ್ದಾರೆ. ಕಲಬುರಗಿ ಜಿಲ್ಲೆಯ ಹಡಪದ ಅಪ್ಪಣ್ಣ ಸಮಾಜದ ಹಾಗೂ ನಿಜಸುಖಿ ಚಾರಿಟೇಬಲ್ ಟ್ರಸ್ಟ್ ನ ಸಂಯೋಗದಲ್ಲಿ ಇದೇ ಜುಲೈ 31ರಂದು ಸುವರ್ಣ ಸಭಾ ಭವನ ಕನ್ನಡ ಸಾಹಿತ್ಯ ಪರಿಷತ್ತು ಕಲಬುರಗಿಯಲ್ಲಿ ಕಾರ್ಯಕ್ರಮ ಏರ್ಪಡಿಸಿರುವ ರಾಜ್ಯ ಹಡಪದ ಸಮಾಜದ ಮಾಜಿ ಕಾರ್ಯಾಧ್ಯಕ್ಷರು ಮತ್ತು ಕಲಬುರಗಿ ಜಿಲ್ಲೆಯ ಅಧ್ಯಕ್ಷರಾದ ಈರಣ್ಣ ಸಿ. ಹಡಪದ ಸಣ್ಣೂರ ಅವರ 41ನೇ ಜನ್ಮ ದಿನದ ಪ್ರಯುಕ್ತ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 41 ಸಾಧಕರಿಗೆ ಸಮಾಜಮುಖಿ ಕಾರ್ಯಕ್ರಮದ ಸಮ್ಮೇಳನದಲ್ಲಿ ನಿ ಜ ಸ ು ಖಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಸ ಮಾ ಜ ದ ಸ ಂ ಘ ಟ ನೆ ಜೊತೆಯಲ್ಲಿ ಹಡಪದ ಅಪ್ಪಣ್ಣ ಕ್ಷೌರಿಕ ಕ್ಷೇತ್ರದಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ಬಸವರಾಜ ಹಡಪದ ಸುಗೂರ ಎನ್ ಅವರು ಚಿತ್ತಾಪುರ ತಾಲೂಕಿನ ಹಡಪದ ಅಪ್ಪಣ್ಣ ಸಮಾಜದ ತಾಲ್ಲೂಕು ಅಧ್ಯಕ್ಷರಾಗಿ ಅವರ ಅಧ್ಯಕ್ಷತೆಯಲ್ಲಿ ತಾಲ್ಲೂಕಿನಲ್ಲಿ ಸಮಾಜದ ಸಭೆ ಸಮಾರಂಭ ಮಾಡಲು ಸ್ವತಃ ಸ್ಥಳ ಖರೀದಿ ಮಾಡಿ ಸಮಾಜದ ಸ್ಥಳದಲ್ಲಿ ಸಮುದಾಯ ಭವನ ಕಟ್ಟಡ ಮಾಡಿ ಮಾಜಿ ಶಾಸಕ ವಾಲ್ಮೀಕಿ ನಾಯಕ ಅವರ ಹಾಗೂ ಸಮಾಜದ ಜನತೆಯ ಸಮ್ಮುಖದಲ್ಲಿ ಉದ್ಘಾಟಿಸಿದರು. ಮತ್ತು ಶಹಾಬಾದ ನಗರದಲ್ಲಿ ಸಹ ಸಮಾಜದ ಜನತೆಯ ದೇಣಿಗೆಯನ್ನು ಸಂಗ್ರಹಿಸಿ ಶಹಾಬಾದ ತಾಲ್ಲೂಕು ಬಸವೇಶ್ವರ ನಗರದಲ್ಲಿ ಇರುವ ಹಡಪದ ಅಪ್ಪಣ್ಣ ದೇವಸ್ಥಾನದ ಕಟ್ಟಡ ನಿರ್ಮಾಣಕ್ಕೆ ಪಣತೆ–ೂಟ್ಟು , ದೇವಸ್ಥಾನ ಹಾಗೂ ಮೂರ್ತಿ ಸ್ಥಾಪನೆ ಅನೇಕ ಮಠಾಧೀಶರು, ಸಮಾಜದ ಪೀಠಾಧಿಪತಿಗಳಾದ ಪರಮ ಪೂಜ್ಯ ಶ್ರೀ ಅನ್ನಧಾನಿ ಭಾರತಿ ಸ್ವಾಮಿಗಳು ತಂಗಡಗಿ, ಕಂಬಳೇಶ್ವರ ಮಠದ ಶ್ರೀ ಸೋಮಶೇಖರ್ ಶಿವಾಚಾರ್ಯರ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಹಾಗೂ ಮಾಜಿ ರಾಜ್ಯಾಧ್ಯಕ್ಷ ಅಣ್ಣಾರಾವ ನರಿಬೋಳ, ಬಸವರಾಜ ಹಡಪದ ಹಳ್ಳಿ, ಪ್ರಕಾಶ ಹಡಪದ ಮಲಕೋಡ, ಭಗವಂತ ಹಡಪದ ಕಿರಣಗಿ, ಜಗನ್ನಾಥ ಶಂಕರವಾಡಿ, ನಾಗಣ್ಣ ಮುತ್ತಕೋಡ, ಸೇರಿದಂತೆ ಸಮಾಜದ ಹಿರಿಯರ ಸಮ್ಮುಖದಲ್ಲಿ ಸ್ಥಾಪನೆ ಮಾಡಿದರು. ನಾಟಕ, ರಂಗಭೂಮಿ, ಕಲಾವಿದರು ಸಮಾಜಮುಖಿ ಕಾರ್ಯ ಚಟುವಟಿಕೆಗಳನ್ನು ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಮೂವತ್ತೈದು ವರ್ಷಗಳಿಂದ ಸಮಾಜ ಸೇವೆ ಮೌಢ್ಯ ನಿರ್ಮೂಲನೆಯ ಕುರಿತಾಗಿ ಹಲವಾರು ವೈಚಾರಿಕ ಕಾರ್ಯಕ್ರಮಗಳನ್ನು ಸಂಘಟಿಸಿ ಜನರಲ್ಲಿ ಜಾಗೃತಿ ಮೂಡಿಸಿದ್ದಾರೆ. ಮತ್ತು ಕರೋನಾ ಸಂದರ್ಭದಲ್ಲೂ ಸಹ ಹಗಲಿರುಳು ಶ್ರಮಿಸಿ ಅನಾಥರಿಗೆ ಅಂಧರಿಗೆ, ನಿರ್ಗತಿ–ಕರಿಗೆ ಉಚಿತವಾಗಿ ಕ್ಷೌರ ಸೇವೆ ಮಾಡಲು ಸ್ಪಂದಿಸಿದ್ದಾರೆ. ಇವರಿಗೆ ಈಗಾಗಲೇ ಬಾಗಲಕೋಟೆ ಜಿಲ್ಲೆಯ ಸಮಾವೇಶದಲ್ಲಿ ಸಹ ನಿಜಸುಖಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಲಬುರಗಿ ಜಿಲ್ಲೆಯ ಜಯನಗರದ ಬಸವ ಸಮಿತಿ ಜಿಲ್ಲಾಧ್ಯಕ್ಷೆ ಡಾ. ವಿಲಾವತಿ ಖುಬಾ ತಾಯಿಯವರು 'ಕಾಯಕಯೋಗಿ ' ಪ್ರಶಸ್ತಿ ನೀಡಿ ಗೌರವಿಸಿದರು. ಬಸವರಾಜ ಹಡಪದ ಸುಗೂರ ಎನ್ ಅವರು ಜಿಲ್ಲಾ ಗೌರವಾಧ್ಯಕ್ಷ ಆದ ಮೇಲೆ ಸಮಾಜದ ಅಧ್ಯಕ್ಷರ ಹಾಗೂ ಪದಾಧಿಕಾರಿಗಳ ಜೊತೆಯಲ್ಲಿ ಸಮಾಜದ ಪರವಾಗಿ ಅನೇಕ ಹೋರಾಟ ನಡೆಸಿ ಮತ್ತು ಸಮಾಜದ ಬೃಹತ್ ಸಮಾವೇಶ ಕಾರ್ಯಕ್ರಮಗಳನ್ನು ಇಮ್ಮಡಿಗೊಳಿಸಿದ್ದಾರೆ. ಹಡಪದ ಅಪ್ಪಣ್ಣ ಕ್ಷೌರಿಕ ಸಮಾಜದ ನಿರ್ಗತಿಕರಿಗೆ, ಜನಸಾಮಾನ್ಯರಿಗೆ, ಅಂಗವಿಕಲರಿಗೆ ಉಚಿತವಾಗಿ ಕ್ಷೌರ ಸೇವೆ ಸಲ್ಲಿಸಿ ಅವರ ವೃತ್ತಿಪರ ಕೆಲಸ ಕಾರ್ಯಗಳನ್ನು ರೂಪಿಸಿದ ಕೀರ್ತಿ ಬಸವರಾಜ ಹಡಪದ ಸುಗೂರ ಎನ್ ಅವರಿಗೆ ಸಲ್ಲುತ್ತದೆ ಎಂದರು.

# ಯುವ ಲೇಖಕರು ಸೃಜನಶೀಲತೆ ಬೆಳೆಸಿಕೊಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.28:ಯುವ ಲೇಖಕರು ತಮ್ಮ ಪ್ರತಿಭೆ, ಸೃಜನಶೀಲತೆ ಬಳಸಿಕೊಂಡು ಆಸಕ್ತಿಯ ಸಾಹಿತ್ಯಪ್ರಕಾರಗಳಲ್ಲಿ ಸಾಹಿತ್ಯ ಸೃಷ್ಟಿಸಬೇಕು ಎಂದು ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಡಾ.ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆಯಲ್ಲಿ ಸೋಮವಾರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ ಸಾಹಿತಿ ಸಂಗಮೇಶ್ವರ ಮುರ್ಕೆ ಬರೆದ ಬೀದರ ಜಿಲ್ಲೆಯ ಸಂಸ್ಕೃತಿ ಪರಂಪರೆ ಲೋಕಾರ್ಪಣೆ, ಪತ್ರಿಕಾ ಹಾಗೂ ವೈದ್ಯ ದಿನಾಚರಣೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಯುವ ಸಾಹಿತಿಗಳು ಸಾಹಿತ್ಯ ಕೃಷಿಯಲ್ಲಿ ತೊಡಗಿಸಿಕೊಂಡರೆ ಸಾಹಿತ್ಯ ಕ್ಷೇತ್ರ ಸಮೃದ್ಧವಾಗಿ ಬೆಳೆಯಲು ಸಾಧ್ಯ. ಬರಹಗಾರರು ಮಾನವೀಯ ಕಾಳಜಿ, ಕಳಕಳಿಯೊಂದಿಗೆ ಸೂಕ್ಷ್ಮ ಸಂವೇದನಾಶೀಲರಾಗಿ ಸಾಹಿತ್ಯ ರಚಿಸಿ ವರ್ತಮಾನದ ವಾರಸುದಾರರಿಗೆ ಮಾರ್ಗದರ್ಶನ ಮಾಡುವಂತಾಗಬೇಕು ಎಂದರು.

ತಾ.ಪಂ.ಇಒ ಹಣಮಂತರಾಯ ಕೌಟಗೆ ಮಾತನಾಡಿ, ಆರೋಗ್ಯಕರ ಪ್ರಜಾಪ್ರಭುತ್ವಕ್ಕೆ ಮಾಧ್ಯಮ ರಂಗ ಅಗತ್ಯ. ಸಮಾಜದ ಪರಿಶುದ್ಧತೆಯಲ್ಲಿ ಮಾಧ್ಯಮ ಕ್ಷೇತ್ರದ ಪಾತ್ರ ಮಹತ್ವದ್ದಾಗಿದೆ. ಸಕಾರಾತ್ಮಕ ವಿಚಾರಗಳಿಗೆ ಪ್ರಾಮುಖ್ಯ ನೀಡುತ್ತಿರುವ ಪತ್ರಿಕೆಗಳಿಂದ ಶಸಕ್ತ ಭಾರತ ನಿರ್ಮಾಣ ಸಾಧ್ಯವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಸಾಪ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ ಮಾತನಾಡಿ, ಗಡಿಭಾಗದಲ್ಲಿ ಕನ್ನಡನಾಡು–ನುಡಿ ಬೆಳವಣಿಗೆಗೆ ಪತ್ರಕರ್ತರ ಸೇವೆ ಅನನ್ಯ. ಚನ್ನಬಸವಪಟ್ಟದ್ದೇವರು ಹುಟ್ಟಿದ ಪುಣ್ಯಭೂಮಿ ಕಮಲನಗರದಲ್ಲಿ ಕಸಾಪ ತಾಲೂಕು ಘಟಕ ಕೈಗೊಳ್ಳುತ್ತಿರುವ ವಿವಿಧ ರಚನಾತ್ಮಕ ಕಾರ್ಯಗಳು ಇತರರಿಗೆ ಮಾದರಿಯಾಗಿದೆ ಎಂದರು.

ಡಾ.ಎಸ್.ಎಸ್.ಮೈನಾಳೆ ಕೃತಿ ಪರಿಚಯ ಮಾಡಿದರು. ಸಿಪಿಐ ಶ್ರೀಕಾಂತ ಅಲ್ಲಾಪುರ, ಸಾಹಿತಿ ಸಂಗಮೇಶ್ವರ ಮುರ್ಕೆ ಮಾತನಾಡಿದರು. ಕಾರ್ಯಕ್ರಮದ ದಿವ್ಯನೇತೃತ್ವ ಶ್ರೀ ಮಹಾಲಿಂಗ ಸ್ವಾಮೀಜಿ ವಹಿಸಿದ್ದರು. ತಹಸೀಲ್ದಾರ್ ಅಮಿತಕುಮಾರ ಕುಲಕರ್ಣಿ ಕಾರ್ಯಕ್ರಮ ಉದ್ಘಾಟಿಸಿದರು.

ಜೀ ಕನ್ನಡ ನ್ಯೂಜ್ ವರದಿಗಾರ ಅನೀಲಕುಮಾರ ದೇಶಮುಖ ಅವರಿಗೆ ವಿಶೇಷ ಸನ್ಮಾನ ಮಾಡಿ ಗೌರವಿಸಲಾಯಿತು.

ಗ್ರಾಪಂ ಅಧ್ಯಕ್ಷೆ ಸುಶೀಲಾ ಸಜ್ಜನ್, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಸುನೀಲ ಕಸ್ತೂರೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಬಸವರಾಜ ಪಾಟೀಲ್, ಶಿವಶಂಕರ ಟೋಕರೆ, ಆಡಳಿತ ವೈದ್ಯಾಧಿಕಾರಿ ಡಾ.ಶ್ರೀಮಂತ ಮಡಿವಾಳ, ಪಂಢರಿ ಆಡೆ, ಡಾ.ಅಶೋಕುಮಾರ ಮಳಗೆ, ಚನ್ನಬಸವ ಘಾಳೆ, ಸತೀಶ ಜೀರ್ಗೆ, ಧನರಾಜ ಸೊಲ್ಲಾಪುರೆ, ನಾಗಯ್ಯ ಸ್ವಾಮಿ, ಶಿವಾನಂದ ವಡ್ಡೆ, ಜಗನ್ನಾಥ ಜೀರ್ಗೆ, ಧನರಾಜ ಭವರಾ, ಉಮೇಶ ಜೀರ್ಗೆ, ಸಂತೋಷ ಸುಲಾಕೆ, ಅವಿನಾಶ ಶಿವಣಕರ, ರಾಜಕುಮಾರ ಬಿರಾದಾರ, ಬಾಲಾಜಿ ಬಿರಾದಾರ ಇತರರಿದ್ದರು.

ಕಸಾಪ ತಾಲೂಕು ಅಧ್ಯಕ್ಷ ಪ್ರಶಾಂತ ಮಠಪತಿ ಸ್ವಾಗತಿಸಿದರು. ಹಾವಗಿರಾವ ಮಠಪತಿ ನಿರೂಪಣೆ ಮಾಡಿದರು.

ಈ ವೇಳೆ ತಾಲೂಕಿನ ಪತ್ರಕರ್ತರು ಹಾಗೂ ವೈದ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

> ಎಲ್ಲ ಕೃತಿಗಳ ಆಶಯ ಸತ್ಯದ ಅನ್ವೇಷಣೆ ಆಗಬೇಕು. ಆಗ ಮಾತ್ರ ಅದು ಸಮಾಜವನ್ನು ಸ್ಪಂದಿಸುತ್ತದೆ. ಸತ್ಯದ ಅನ್ವೇಷಣೆ ಆದಾಗ ವೈಚಾರಿಕ, ಸಾಮಾಜಿಕ ಮೌಲ್ಯಗಳ ಚಿಂತನೆ ಬೆಳೆಸಲು ಸಾಧ್ಯ. ಉತ್ತಮ ಸಾಹಿತ್ಯ ಕೃತಿ ರಚನೆಗೆ ಅನುಭವ ಬೇಕು. ಅನುಭಾವದ ಅಕ್ಷರ ರೂಪವೇ ಸಾಹಿತ್ಯ. ಲೇಖಕ ಅನುಭವಗಳನ್ನು ಪಡೆದು ಅದರ ನೆಲೆಗಟ್ಟಿನಲ್ಲಿ ಸಾಹಿತ್ಯ ರಚಿಸಬೇಕು.
>
> –ಶ್ರೀಗುರುಬಸವಪಟ್ಟದ್ದೇವರು, ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ

> ಸರ್ಕಾರ ಹಾಗೂ ಸಮಾಜದ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಜನರ ಧ್ವನಿಯನ್ನು ಆಡಳಿತ ವರ್ಗಕ್ಕೆ ಹಾಗೂ ಜನಪ್ರತಿನಿಧಿಗಳ ಕಿವಿಗೆ ತಲುಪಿಸುವ ಸಂದೇಶ ವಾಹಕ ಕೆಲಸ ಮಾಡುತ್ತಿದೆ. ಕೋವಿಡ್ ಸಂದಿಗ್ಧ ಸ್ಥಿತಿಯಲ್ಲಿ ಪತ್ರಕರ್ತರು ಹಾಗೂ ವೈದ್ಯರು, ಪೊಲೀಸರ ಜತೆಗೆ ಕೋವಿಡ್ ವಾರಿಯರ್ಸ್‌ಗಳಾಗಿ ತಮ್ಮ ಪ್ರಾಣದ ಹಂಗು ತೊರೆದು ಕಾರ್ಯನಿರ್ವಹಿಸಿದ್ದು ಮರೆಯಲಾಗದು.*
>
> –ಸುರೇಶ ಚನಶೆಟ್ಟಿ, ಕಸಾಪ ಜಿಲ್ಲಾಧ್ಯಕ್ಷ

# ರೈತರಿಗೆ ರಸಗೊಬ್ಬರ ಕೊರತೆ ವಿರುದ್ಧ ಜಿಲ್ಲಾದ್ಯಂತ ನಾಳೆ ರಸ್ತೆತಡೆ



ಬೀದರ. ಜು. 28 : ಕೇಂದ್ರ ಸರ್ಕಾರವು ರಾಜ್ಯದ ರೈತರ ಅವಶ್ಯಕತೆಗಿಂತ ಹೆಚ್ಚಿನ ಯುರಿಯಾ, ಡಿ.ಎ.ಪಿ., ಶೇಖರಣೆ ಮತ್ತು ಕಾಂಪ್ಲೇಕ್ಸ ರಸಗೊಬ್ಬರಗಳನ್ನು ಸರಬರಾಜು ಮಾಡಿದ್ದರು ಕೂಡ ರಾಜ್ಯ ಸರ್ಕಾರದ ಅವೈಜ್ಞಾನಿಕ ದಾಸ್ತಾನು ಹಾಗೂ ಕಾಳಸಂತೆಗೆ ಉತ್ತೇಜನ ನೀಡುವ ಉದ್ದೇಶದಿಂದ ರೈತರಿಗೆ ಅಭಾವ ಸೃಷ್ಟಿಸಿರುವುದನ್ನು ಖಂಡಿಸಿ ನಾಳೆ ದಿನಾಂಕ 30/07/2025 ರಂದು ಜಿಲ್ಲೆಯಾದ್ಯಂತ ಬಿ.ಜೆ.ಪಿ. ವತಿಯಿಂದ ರೈತರೊಂದಿಗೆ ರಸ್ತೆ ತಡೆ ನಡೆಸಿ ಪ್ರತಿಭಟನೆ ಮಾಡಲಾಗುವುದು.

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರು, ಕೃಷಿ ಸಚಿವರಾದ ಚೆಲುವರಾಯಸ್ವಾಮಿಯವರು ಹಾಗೂ ಎಪಿಎಮ್‌ಸಿ ಸಚಿವರಾದ ಶಿವಾನಂದ ಪಾಟೀಲರು ಮಾಧ್ಯಮಗಳಲ್ಲಿ ಒಬ್ಬರಿಗೊಬ್ಬರು ತಾಳಮೇಳವಿಲ್ಲದಂತೆ ವಿಭಿನ್ನ ಹೇಳಿಕೆಗಳನ್ನು ನೀಡಿ ರೈತರಿಗೆ ಗೊಂದಲ ಮುಡಿಸಿ ಕಾಳಸಂತಕೊರರಿಗೆ ಕಡಿವಾಣ ಹಾಕುವ ಬದಲು ಪ್ರೊತ್ಸಾಹಿಸುವ ರೈತವಿರೋಧಿಗಳಾಗಿದ್ದಾರೆ. ಇದನ್ನು ಖಂಡಿಸಿ ನಾಳೆ ಮುಂಜಾನೆ 10 ಗಂಟೆಗೆ ಬಸವಕಲ್ಯಾಣ ಕ್ಷೇತ್ರದ ಹುಲಸೂರಿನ ಮುಖ್ಯ ರಸ್ತೆ, ಔರಾದ ಪಟ್ಟಣದ ಎಪಿಎಮ್‌ಸಿ ವೃತ್ತ, ಬೀದರ ಕ್ಷೇತ್ರದ ಜನವಾಡಾ ಗ್ರಾಮದ ಮುಖ್ಯರಸ್ತೆ, ಬೀದರ ದಕ್ಷಿಣ ಕ್ಷೇತ್ರದ ಮನ್ನಾಎಖ್ಖೆಳ್ಳಿಯ ಬಸವೇಶ್ವರ ವೃತ್ತ ಹುಮನಾಬಾದ ಕ್ಷೇತ್ರದ ಚಿಟಗುಪ್ಪಾ ಪಟ್ಟಣದ ಬಸವರಾಜ ವೃತ್ತ ಹಾಗೂ ಮಧ್ಯಾನ್ಹ 2 ಗಂಟೆಗೆ ಭಾಲ್ಕಿಯ ಅಂಬೇಡ್ಕರ ವೃತ್ತದಲ್ಲಿ ರಸ್ತೆ ತಡೆ ಮುಖಾಂತರ ಪ್ರತಿಭಟನೆ ನಡೆಸಲಾಗುತ್ತಿದ್ದು ಹೆಚ್ಚಿನ ಸಂಖ್ಯೆಯಲ್ಲಿ ರೈತರು ಈ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಬೇಕೆಂದು ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಾವಿದರ ಬದುಕು ಕಲಾಪ್ರದರ್ಶನದಿಂದ ಸಾಧ್ಯ : ಡಾ. ಸುಜಾತಾ ಜಂಗಮಶೆಟ್ಟಿ




ಬೀದರ. ಜು. 28 : ಕಲಾವಿದರು ಕೇವಲ ಸಂಭಾವನೆ ಕೇಳುತ್ತ ಕಾಲಹರಣ ಮಾಡದೆ ತಮ್ಮ ಕಲಾಸಾಮರ್ಥ್ಯವನ್ನು ಬದ್ಧತೆಯಿಂದ ಜಗತ್ತಿನ ಮುಂದೆ ತೋರಿಸಿದಾಗ ತಾನಾಗಿಯೇ ಸಂಭಾವನೆ ಹುಡುಕಿಕೊಂಡು ಬರುತ್ತದೆ. ಮತ್ತು ನಿಮ್ಮ ಸಾಮರ್ಥ್ಯದ ಪ್ರಕಾರ ಸಂಭಾವನೆ ಡಿಮ್ಯಾಂಡ್ ಮಾಡಬಹುದು. ಆಗ ಕಲಾವಿದರಿಗೆ ಬೆಲೆ ಬರುತ್ತದೆ ಎಂದು ಕರ್ನಾಟಕ ರಂಗಾಯಣ ಕಲಬುರಗಿ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ ಪ್ರತಿಪಾದಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಪೂಜ್ಯ ಚನ್ನಬಸವಪಟ್ಟದ್ದೇವರು ರಂಗಮಂದಿರದಲ್ಲಿ 2025–26ನೇ ಸಾಲಿನ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಉಪಯೋಜನೆಯಡಿಯಲ್ಲಿ ಆಯೋಜಿಸಿದ ಹಾಡಿರೇ ರಾಗಗಳ, ತೂಗಿರೆ ದೀಪಗಳ ವಿಶಿಷ್ಟ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಕಲಾವಿದರ ಏಳ್ಗೆಗಾಗಿ ಸರ್ಕಾರ ವಿಶಿಷ್ಟ ಮತ್ತು ವಿನೂತನ ಕಾರ್ಯಕ್ರಮ ಹಮ್ಮಿಕೊಂಡು ಕಲಾವಿದರ ಬದುಕು ಹಸನು ಮಾಡುತ್ತಿದೆ. ತನ್ಮೂಲಕ ಕಲೆ ಸಾಹಿತ್ಯ ಮತ್ತು ಸಂಸ್ಕೃತಿಯ ಸಂವರ್ಧನೆಗಾಗಿ ದುಡಿಯುತ್ತಿದೆ. ಕಲಾವಿದರು ಮತ್ತು ಅಧಿಕಾರಿಗಳು ಈ ಯೋಜನೆಗಳ ಯಶಸ್ವಿಗೆ ದುಡಿಯಬೇಕೆಂದು ಸಲಹೆ ನೀಡಿದರು.

ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ ಮಾತನಾಡಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಮತ್ತು ರಂಗಾಯಣ ಕಲಬುರಗಿ ಉತ್ತಮ ಅನುದಾನವನ್ನು ಕಲೆ ಸಾಹಿತ್ಯ ಸಂಸ್ಕೃತಿಯ ಏಳ್ಗೆಗೆ ನೀಡುತ್ತಿದೆ. ಆದರೆ ಸಂಘ–ಸಂಸ್ಥೆಗಳು ಕಲಾವಿದರಿಗೆ ಉತ್ತಮ ಸಂಭಾವನೆ ನೀಡಿ ಕಲಾವಿದರಿಗೆ ಮತ್ತು ಕಲೆಯ ಏಳ್ಗೆಗೆ ಪ್ರಾಮಾಣಿಕವಾಗಿ ಶ್ರಮಿಸಬೇಕು. ಅಂದಾಗ ಮಾತ್ರ ಸರ್ಕಾರದ ಯೋಜನೆಗಳು ಕಲಾವಿದರಿಗೆ ತಲುಪಿಸಿದಂತಾಗುತ್ತದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಮಾತನಾಡಿ ಹಲವು ಸರ್ಕಾರದ ಯೋಜನೆಗಳನ್ನು ಕಲಾವಿದರಿಗಾಗಿ ನೀಡಲಾಗುತ್ತಿದೆ. ಕಲಾವಿದರು ಉತ್ತಮ ವೇಷಭೂಷಣ, ಪ್ರಯತ್ನ, ವಾದ್ಯ ಪರಿಕರಗಳನ್ನು ತಮ್ಮ ಹತ್ತಿರ ಇಟ್ಟುಕೊಂಡು ಉತ್ತಮ ಪ್ರದರ್ಶನ ನೀಡಬೇಕೆಂದರು.

ಇದೇ ವೇಳೆ ಶಂಭುಲಿಂಗ ವಾಲ್ದೊಡ್ಡಿ, ವಿಜಯಕುಮಾರ ಸೋನಾರೆ, ಸುನೀಲ ಕಡ್ಡೆ, ಶಂಕರ ಚೊಂಡಿ, ದೇವಿದಾಸ ಚಿಮಕೊಡೆ, ಸಂಗೀತಾ ಕಾಂಬಳೆ, ಚಿನ್ನಮ್ಮ, ಕಮಳಮ್ಮ, ಮಾರುತಿ ಕಂಟಿ, ಶಿವರಾಜ ತಡಪಳ್ಳಿ, ಶಾದ್ರಕ ಹಿಪ್ಪಳಗಾಂವ, ಸೂರ್ಯಕಾಂತ, ತಂಗೆಮ್ಮಾ, ವಿಜಯ್ ಹುಮ್ನಾಬಾದ, ರಾಜು ತಂಡ, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ವೇದಿಕೆ ಮೇಲೆ ಕಸಾಪ ಅಧ್ಯಕ್ಷ ಸುರೇಶ ಚನಶೆಟ್ಟಿ, ಕಾರ್ಯದರ್ಶಿ ಎಂ.ಎಸ್.ಮನೋಹರ, ಪ್ರವೀಣ ಮಹಾತ್ಮಕರ್, ಡಾ. ಕಾಶಿನಾಥ ಚಲ್ವಾ, ಸಂಗ್ರಾಮ ಎಂಗಳೆ, ದೇವಿದಾಸ ಜೋಶಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ರಾಜಶೇಖರ ವಟಗೆ, ಕ್ಲೈಮೆಂಟೆನ್, ಗುರುಶಾಂತಪ್ಪ, ಸುಧಾಕರ, ಸಂಗ್ರಾಮ ಚಿಟ್ಟಾ, ಶಫಿ, ರಂಗಾಯಣದ ಕಲಬುರಗಿ ಸಿಬ್ಬಂದಿ ಅಮರ ಮತ್ತು ಮಲ್ಲಿಕಾರ್ಜುನ ಸೇರಿದಂತೆ ಹಲವರಿದ್ದರು.

# ಸಮಾಜದ ಅಂಕು ಡೊಂಕು ತಿದ್ದುವಲ್ಲಿ ಪತ್ರಿಕೆಗಳ ಕೊಡುಗೆ ಅಪಾರ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.28: ಸಮಾಜದ ಅಂಕು ಡೊಂಕು ತಿದ್ದುವಲ್ಲಿ ಪತ್ರಿಕೆಗಳ ಕೊಡುಗೆ ಅಪಾರ ಎಂದು ಶಾರದಾ ಪಬ್ಲಿಕ್ ಶಾಲೆಯ ಅಧ್ಯಕ್ಷ ವಸಂತ ಪಾಟೀಲ್ ಹೇಳಿದರು.

ಪಟ್ಟಣದ ಶಾರದಾ ಪಬ್ಲಿಕ್ ಶಾಲೆಯಲ್ಲಿ ಸೋಮವಾರ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪತ್ರಿಕೆಗಳು ಜ್ಞಾನದ ಕಣಜವಾಗಿವೆ. ಅವುಗಳನ್ನು ಹೆಚ್ಚೆಚ್ಚು ಓದುವ ಮೂಲಕ ಜ್ಞಾನ ಭಂಡಾರ ಹೆಚ್ಚಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಜಗತ್ತಿಗೆ ಸಿದ್ದಗೊಳ್ಳಲು ಪತ್ರಿಕೆಗಳ ಓದು ಅಗತ್ಯವಿದೆ ಎಂದು ತಿಳಿಸಿದರು. ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ಗಣಪತಿ ಬೋಚರೆ, ಹಿರಿಯ ಪತ್ರಕರ್ತ ವಿಜಯಕುಮಾರ ಪರ್ಮಾ ಮಾತನಾಡಿದರು. ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತ ಅಶೋಕ ರಾಜೋಳೆ, ಪತ್ರಕರ್ತರ ಸಂಘದ ಖಜಾಂಚಿ ಸಂತೋಷ ಬಿಜಿ ಪಾಟೀಲ್, ಶಿಕ್ಷಣ ಸಂಯೋಜಕ ಸಹಾದೇವ ಗೌಡಗಾವೆ, ಅಂಬರೀಶ್ ಖಂಡ್ರೆ ಸೇರಿದಂತೆ ಹಲವರು ಇದ್ದರು. ಆಡಳಿತಾಧಿಕಾರಿ ಮಹಾದೇವ ಪಟ್ನೆ ಸ್ವಾಗತಿಸಿದರು. ಅಶೋಕ ಭಂಡಾರಿ ನಿರೂಪಿಸಿದರು.

ಸನ್ಮಾನ:ಇದೇವೇಳೆ ಪತ್ರಿಕಾ ದಿನಾಚರಣೆ ಅಂಗವಾಗಿ ತಾಲೂಕಿನ ಮುದ್ರಣ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣದ ಪತ್ರಕರ್ತರನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಲಾಯಿತು. ಸಂಸ್ಥೆಯ ಅಧ್ಯಕ್ಷ ವಸಂತ ಪಾಟೀಲ್ ಮತ್ತು ಆಡಳಿತಾಧಿಕಾರಿ ಮಹಾದೇವ ಪಟ್ನೆ ಪತ್ರಕರ್ತರನ್ನು ಸನ್ಮಾನಿಸಿ, ಗೌರವಿಸಿದರು.

# ಮೆಥೋಡಿಸ್ಟ್ ಚರ್ಚ್ ಸಮಿತಿಗೆ ನೇಮಕ



ಬೀದರ. ಜು. 28 : ಇಲ್ಲಿನ ವಿದ್ಯಾನಗರ ಬಡಾವಣೆಯಲ್ಲಿನ ಸೇಂಟ್ ಪೌಲ್ ಮೆಥೋಡಿಸ್ಟ್ ಚರ್ಚ್ ನ 2025–26ನೇ ಸಾಲಿನ ಕಾರ್ಯನಿರ್ವಹಣಾ ಸಮಿತಿ ಪದಾಧಿಕಾರಿಗಳ ಸನ್ಮಾನ ಹಾಗೂ ಪ್ರತಿಜ್ಞೆ ಬೋಧನೆ ಕಾರ್ಯಕ್ರಮ ನಡೆಯಿತು.

ಚರ್ಚ್ ನ ಪಾಸ್ಟರ್, ಸಮಿತಿಯ ಅಧ್ಯಕ್ಷೆ ರೆ.ನಿರ್ಮಾಲ ಸೈಮಾನ್ ಮಾಕ9 ಅವರು ಎಲ್ಲ ಪದಾಧಿಕಾರಿಗಳನ್ನು ಸನ್ಮಾನಿಸಿ ಮಾತನಾಡಿದ ಅವರು, ಚರ್ಚ್ ನ ಕೆಲಸ ದೇವರ ಕೆಲಸವಿದ್ದಂತೆ. ಪ್ರಾಮಾಣಿಕ, ನಿಷ್ಠೆಯಿಂದ ಮಾಡುವವರಿಗೆ ದೇವರು ಎಂದು ಕೈಬಿಡುವುದಿಲ್ಲ. ಕ್ರಿಸ್ತನ ವಿಚಾರ, ತತ್ವ, ಆದರ್ಶಗಳ ಅನುಕರಣೆಯಿಂದ ಬದುಕಿನ ನೈಜ ಆನಂದ ಪಡೆಯಬಹುದು. ಸಾರ್ಥಕ್ಯ ಜೀವನಕ್ಕೆ ಕ್ರಿಸ್ತನ ಸಂದೇಶ ಮೂಲಾಧಾರವಾಗಿವೆ ಎಂದರು.

ಚರ್ಚ್‌ನ ಎಲ್ಲ ಕೆಲಸಗಳನ್ನು ಸುಗಮವಾಗಿ ನೋಡಿಕೊಂಡು ಹೋಗಲು ಸಮಿತಿ ರಚಿಸಲಾಗಿದೆ. ಚರ್ಚ್‌ನ ಅಭಿವೃದ್ಧಿಗಾಗಿ ಎಲ್ಲ ಪದಾಧಿಕಾರಿಗಳು ಕ್ರಿಯಾಶೀಲವಾಗಿ ಕೆಲಸ ಮಾಡಬೇಕು ಎಂದು ಹೇಳಿದರು.

ಬಿ.ಜೆ. ಸ್ಯಾಮುವೆಲ್, ಸ್ವಾಮಿದಾಸ ಬೇಂದ್ರೆ, ಸುಭದ್ರಾ ಡೇವಿಡ್, ಸಂಪತಕುಮಾರ, ಶಾಂತರಾಜ, ದೀಪಕ್, ಸಲೋಮನ್ ಡೇವಿಡ್, ಎಂ.ಎಸ್.ಡೇವಿಡ್, ಎಲಿಜೆಬತ್, ಸಾದೀಶ್ ಮೇತ್ರೆ, ಸಾಬಸ್ಟಿನ್, ಸ್ವರಾಜಕುಮಾರ, ಮೋಜಸ್, ಇಮಾನವೆಲ್, ಅರುಣ, ವೈ.ಎಲ್.ಇಮಾನವೆಲ್ ಇತರರಿದ್ದರು.

# ಜನಗಣತಿಯಲ್ಲಿ ಲಿಂಗಾಯತ ಎಂದೇ ಬರೆಸಿ



ಬೀದರ. ಜು. 28 : ಮುಂಬರುವ ಜನಗಣತಿಯಲ್ಲಿ ಲಿಂಗಾಯತರು ಧರ್ಮದ ಕಾಲಂನಲ್ಲಿ ತಪ್ಪದೆ ಲಿಂಗಾಯತ ಎಂದೇ ಬರೆಸಬೇಕು ಎಂದು ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಧನ್ನೂರ ಮನವಿ ಮಾಡಿದ್ದಾರೆ.

ದಾವಣಗೆರೆಯಲ್ಲಿ ಈಚೆಗೆ ನಡೆದ ವೀರಶೈವ ಪೀಠಾಚಾರ್ಯ ಹಾಗೂ ಶಿವಾಚಾರ್ಯ ಶೃಂಗವು ಜನಗಣತಿಯಲ್ಲಿ ವೀರಶೈವ ಲಿಂಗಾಯತ ಎಂದು ಬರೆಸಬೇಕೆಂದು ಕರೆ ಕೊಟ್ಟು ಲಿಂಗಾಯತ ಸಮುದಾಯದ ದಾರಿ ತಪ್ಪಿಸುವ ಪ್ರಯತ್ನ ಮಾಡಿದೆ ಎಂದು ಆರೋಪಿಸಿದ್ದಾರೆ.

ವೀರಶೈವ ಲಿಂಗಾಯತ ಪದ ಅವೈಜ್ಞಾನಿಕವಾದದ್ದು. ತಾತ್ವಿಕ ಹಾಗೂ ಸೈದ್ಧಾಂತಿಕವಾಗಿಯೂ ಸರಿಯಾದುದ್ದಲ್ಲ. ಹೀಗಾಗಿಯೇ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದಿಂದ ವೀರಶೈವ ಲಿಂಗಾಯತ ಹೆಸರಲ್ಲಿ ಮೂರು ಬಾರಿ ಸಲ್ಲಿಸಲಾಗಿದ್ದ ಪ್ರತ್ಯೇಕ ಧರ್ಮ ಮಾನ್ಯತೆ ಪ್ರಸ್ತಾವ ತಿರಸ್ಕಾರಗೊಂಡಿದೆ ಎಂದು ಹೇಳಿದ್ದಾರೆ.

ಕೆಲವರು ತಮ್ಮ ಸ್ವಾರ್ಥಕ್ಕಾಗಿ ಲಿಂಗಾಯತ ಸಮಾಜವನ್ನು ಬಲಿ ಕೊಡಲು ಹೊರಟಿದ್ದಾರೆ. ಸಮಾಜದ ಪರ ಕಾಳಜಿ ತೋರಿದಂತೆ ನಾಟಕವಾಡಿ, ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಲಿಂಗಾಯತ ಎಂದು ಬರೆಸುವುದರಿಂದ ಲಿಂಗಾಯತ ಧರ್ಮಕ್ಕೆ ಸಾಂವಿಧಾನಿಕ ಮಾನ್ಯತೆ ಸಿಗಲಿದೆ. ಧರ್ಮದ ಎಲ್ಲ ಒಳ ಪಂಗಡಗಳಿಗೆ ಅಲ್ಪಸಂಖ್ಯಾತರ ಸ್ಥಾನಮಾನ ದೊರಕಲಿದೆ. ವೀರಶೈವ ಲಿಂಗಾಯತ ಎಂದು ಬರೆಸಿದರೆ ದೊಡ್ಡ ಹಿನ್ನಡೆ ಆಗಲಿದೆ. ಕಾರಣ, ಲಿಂಗಾಯತರು ಶೃಂಗದ ಕರೆಗೆ ಕಿವಿಗೊಡಬಾರದು ಎಂದು ಹೇಳಿದ್ದಾರೆ.

ರಂಭಾಪುರಿ ಶ್ರೀ ಬಸವಣ್ಣನವರ ಕುರಿತು ಮಾತನಾಡದಿರಲಿ

ಬಸವಣ್ಣನವರು ವೀರಶೈವ ಧರ್ಮ ಸ್ವೀಕರಿಸಿದ್ದರೆಂದು ತಮ್ಮ ಜೀವನ ಪರ್ಯಂತ ಸುಳ್ಳು ಹೇಳುತ್ತಾ, ಇತಿಹಾಸ ತಿರುಚಲು ಪ್ರಯತ್ನಿಸುತ್ತಿರುವ ರಂಭಾಪುರಿ ಶ್ರೀಗಳು ಬಸವಣ್ಣನವರ ಕುರಿತು ಮಾತನಾಡುವುದನ್ನು ನಿಲ್ಲಿಸಬೇಕು ಎಂದು ಬಸವರಾಜ ಧನ್ನೂರ ಒತ್ತಾಯಿಸಿದ್ದಾರೆ.

ಅನುಭವ ಮಂಟಪದ ಪ್ರವ್ರಂಥ ಗಣಂಗಳೆಲ್ಲರ ವಚನ ಸಾಹಿತ್ಯವೇ ಬಸವಣ್ಣನವರು ಲಿಂಗವಂತ ಧರ್ಮದ ಸ್ಥಾಪಕರೆಂದು ಸಾರುತ್ತಿರುವಾಗ, ಇಡೀ ನಾಡಿಗೆ ನಾಡೇ ಅದನ್ನು ಒಪ್ಪುತ್ತಿರುವಾಗ, ಇವರು ದಾರಿ ತಪ್ಪಿಸುವ ವಿಫಲ ಪ್ರಯತ್ನ ಮಾಡುತ್ತಿರುವುದೇಕೆ, ಇದೇ ಶ್ರಮವನ್ನು ಪಂಚಾಚಾರ್ಯರ ಧರ್ಮ ಪ್ರಚಾರಕ್ಕೆ ಬಳಸಿಕೊಳ್ಳಲಿ. ಬಸಣ್ಣನವರ ಹೆಸರಿಗೆ ಬರುವುದಾದರೆ ಸರಿಯಾಗಿ ಅಧ್ಯಯನ ಮಾಡಿ ಹೇಳಿಕೆ ಕೊಡಲಿ ಎಂದು ಹೇಳಿದ್ದಾರೆ.

ಬಸವಣ್ಣ ವೀರಶೈವ ಧರ್ಮ ಸ್ವೀಕಾರ ಮಾಡಿರಲೇ ಇಲ್ಲ. ಹೀಗಾಗಿ ಯಾರೇ ನೂರು ಬಾರಿ ಹೇಳಿದರೂ, ಡಂಗೂರ ಸಾರಿದರೂ ಅದನ್ನು ಯಾರೂ ಒಪ್ಪುವುದಿಲ್ಲ ಎಂದು ಹೇಳಿದ್ದಾರೆ.

ಬಸವ ತತ್ವದ ಮಠಗಳು ಬಸವ ತತ್ವ ಬಿಟ್ಟು ಬೇರೆ ತತ್ವಗಳ ಪ್ರಚಾರ ಮಾಡಲು ಸಾಧ್ಯವೇ, ಬೇರೆ ತತ್ವಗಳನ್ನು ಯಾಕೆ ಪ್ರಚಾರ ಮಾಡಬೇಕು ಎಂದು ಪ್ರಶ್ನಿಸಿದ್ದಾರೆ.

ಬಸವ ತತ್ವದ ಮಠಗಳಲ್ಲಿ ಗೊಂದಲ ಇಲ್ಲ. ಗೊಂದಲ ಇರುವುದು ಪಂಚಾಚಾರ್ಯರಲ್ಲಿ. ನೀವು ಬಸವಣ್ಣ ಅಥವಾ ರೇಣುಕಾಚಾರ್ಯರಲ್ಲಿ ಒಬ್ಬರನ್ನು ಆಯ್ಕೆ ಮಾಡಿಕೊಳ್ಳಿ ಎಂದು ಸಲಹೆ ನೀಡಿದ್ದಾರೆ.

ಅಡ್ಡ ಪಲ್ಲಕ್ಕಿ ನಡೆಯಲು ಬಿಡಲ್ಲ

ಪಂಚ ಪೀಠಾಧೀಶರ ಅಡ್ಡಪಲ್ಲಕ್ಕಿ ನಡೆಸಿ ಕೂಡಲಸಂಗಮ ಕ್ಷೇತ್ರವನ್ನು ಪವಿತ್ರಗೊಳಿಸುವುದಾಗಿ ಶಾಸಕ ವಿಜಯಾನಂದ ಕಾಶಪ್ಪನವರ್ ನೀಡಿರುವ ಹೇಳಿಕೆಗೆ ಬಸವರಾಜ ಧನ್ನೂರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಶಪ್ಪನವರ್ ಹೇಳಿಕೆ ಮೂರ್ಖತನದ್ದು. ಅದನ್ನು ತೀವ್ರವಾಗಿ ಖಂಡಿಸಲಾಗುತ್ತದೆ ಎಂದು ಹೇಳಿದ್ದಾರೆ. ಪಂಚಪರುಷ ಮೂರ್ತಿಯಾದ ಬಸವಣ್ಣನವರ ಐಕ್ಯಕ್ಷೇತ್ರ ಕೂಡಲಸಂಗಮ ಅಪವಿತ್ರವಾಗಲು ಸಾಧ್ಯವಿಲ್ಲ. ಕಾಶಪ್ಪನವರ್ ಮೊದಲು ತಮ್ಮ ಬುದ್ಧಿ ಪವಿತ್ರಗೊಳಿಸಿಕೊಳ್ಳಲಿ ಎಂದು ಸಲಹೆ ನೀಡಿದ್ದಾರೆ.

ಕೂಡಲಸಂಗಮದ ಬಗ್ಗೆ ಹಗುರವಾಗಿ ಮಾತನಾಡುವುದು ಸಲ್ಲದು. ಇದನ್ನು ಮುಂದುವರಿಸಿದರೆ ಬಸವ ಭಕ್ತರ ತೀವ್ರ ಪ್ರತಿ–ರೋಧ ಎದುರಿಸಬೇಕಾಗುತ್ತದೆ. ಕೂಡಲಸಂಗಮದಲ್ಲಿ ಅಡ್ಡಪಲ್ಲಕ್ಕಿ ನಡೆಸಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

# ಒಳಮೀಸಲಾತಿ ಜಾರಿಗಾಗಿ ಆ. 1 ರಂದು ಅರೆಬೆತ್ತಲೆ ಮೆರವಣಿಗೆ



ಬೀದರ.ಜು.28: ಮೂವತ್ತು ವರ್ಷಗಳ ಹೋರಾಟದ ಫಲವಾಗಿ ಕೇಂದ್ರ ಸರ್ಕಾರದ ಸಹಕಾರದಿಂದ ಸುಪ್ರಿಂ ಕೋರ್ಟ್ ಒಳ ಮೀಸಲಾತಿ ಜಾರಿ ಮಾಡಬೇಕೆಂದು ರಾಜ್ಯ ಸರ್ಕಾರಕ್ಕೆ ಸೂಚಿಸಿ ಒಂದು ವರ್ಷ ಗತಿಸಿದರೂ ರಾಜ್ಯ ಕಾಂಗ್ರೆಸ್ ಸರ್ಕಾರ ಕುಂಟು ನೆಪವೊಡ್ಡಿ ವಿಳಂಬ ಮಾಡುತ್ತಿದೆ ಎಂದು ಮಾದಿಗ ಸಂಘಟನೆಗಳ ಒಕ್ಕೂಟದ ಕಾರ್ಯಾಧ್ಯಕ್ಷ ಫರ್ನಾಂಡೀಸ್ ಹಿಪ್ಪಳಗಾಂವ ತಿಳಿಸಿದರು. ನಗರದ ಪತ್ರಿಕಾ ಭವನದಲ್ಲಿ ರವಿವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಆಯಾ ರಾಜ್ಯಗಳ ದತ್ತಾಂಶದ ಆಧಾರದ ಮೇಲೆ ಒಳ ಮೀಸಲಾತಿ ಜಾರಿ ಮಾಡಿ ಎಂದರೂ ಸಚಿವ ಎಚ್.ಸಿ. ಮಹಾದೇವಪ್ಪ ಅವರ ಕುತಂತ್ರದಿಂದ ಸಿಎಂ ಅವರು ಜಾರಿಗೆ ಮೀನಮೇಷ ಎಣಿಸುತ್ತಿದ್ದಾರೆ. ನಾವು ಜಾತಿ ಜನಗಣತಿ ಮಾಡಿ ಎಂದು ಹೇಳಿಲ್ಲ. ಆದರೂ ಸರ್ಕಾರ ಮಾಡುತ್ತಿದೆ. ಇದುವರೆಗೆ ಕೇವಲ 80% ಜಾತಿ ಜನಗಣತಿ ಮಾತ್ರ ಮಾಡಲಾಗಿದೆ. ಏನೇ ಆದರೂ ನಮಗೆ ಹಸಿವಾಗಿದೆ. ನಮ್ಮ ಪಾಲಿನ ಶೇ 6 % ಪ್ರತಿಶತ ಒಳ ಮೀಸಲಾತಿ ಜಾರಿ ಮಾಡಿ ಎಂದರೂ ಸರ್ಕಾರ ನಮ್ಮ ಕೂಗು ಕೇಳಿಸಿಕೊಳ್ಳುತ್ತಿಲ್ಲ. ಹೀಗಾಗಿ ಒಕ್ಕೂಟದ ವತಿಯಿಂದ ಆ. 1 ರಂದು ಬೆಳಿಗ್ಗೆ 11 ಗಂಟೆಗೆ ಅರೆಬೆತ್ತಲೆಯಾಗಿ ಸರ್ಕಾರದ ಶವಯಾತ್ರೆಯನ್ನು ಮೆರವಣಿಗೆ ಮುಖಾಂತರ ಒಯ್ದು, ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದರು. ಇದೇ ವೇಳೆ ಮಾದಿಗ ಸಂಘಟನೆಗಳ ಒಕ್ಕೂಟದ ಪ್ರಮುಖರಾದ ವಿಜಯಕುಮಾರ ಹಿಪ್ಪಳಗಾಂವ, ಕಮಲಾಕರ ಹೆಗಡೆ, ಜಾಫೆಟರಾಜ ಕಡ್ಯಾಳ, ವೀರಶೆಟ್ಟಿ, ರವೀಂದ್ರ ಸೂರ್ಯವಂಶಿ, ಜೈಶೀಲ ಮೇತ್ರೆ, ಡೆವಿಡ ವಾಡೇಕರ, ವಿಶಾಲ ಜೋಶಿ, ಹರೀಶ ಗಾಯಕವಾಡ, ಅಶೋಕ ಚಾಂಗಲೆರಾ, ದಯಾನಂದ ರೇಕುಳಗಿ, ಸಿದ್ರಾಮ ನಾವದಗೇರಿ, ಸನ್ನಿ ಹಿಪ್ಪಳಗಾಂವ, ಗುಂಡಪ್ಪ ಕೋಟೆ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಲಿಂಗಸಗೂರು: ಸಚಿವರಿಂದ ಸಂಜೀವಿನಿ ಅಕ್ಕ ಕೆಫೆ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು: ಜು 28, ಪಟ್ಟಣದ ತಾಲೂಕು ಪಂಚಾಯತ್ ಆವರಣದಲ್ಲಿರುವ ಸಂಜೀವಿನಿ–ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಕೌಶಲ್ಯಾಭಿವೃದ್ಧಿ, ಉಧ್ಯಮಶಿಲತೆ ಮತ್ತು ಜೀವನೋಪಾಯ ಇಲಾಖೆ,

ಜಿಲ್ಲಾ ಪಂಚಾಯತ ರಾಯಚೂರು, ತಾಲೂಕು ಪಂಚಾಯತ್ ಲಿಂಗಸಗೂರು ಆವರಣದಲ್ಲಿರುವ ಅಕ್ಕ ಕೆಫೆಯನ್ನು ವೈಧ್ಯಕೀಯ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಡಾ.ಶರಣಪ್ರಕಾಶ ಪಾಟೀಲ್ ಇವರಿಂದ ಉದ್ಘಾಟನೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕರು ಡಾ. ಮಾನಪ್ಪ ವಜ್ಜಲ್, ವಿಧಾನ ಪರಿಷತ್ ಸದಸ್ಯರಾದ ಶರಣಗೌಡ ಪಾಟೀಲ್ ಬಯ್ಯಾಪೂರ, ಎ ವಸಂತಕುಮಾರ, ಪುರಸಭೆ ಅಧ್ಯಕ್ಷ ಬಾಬುರೆಡ್ಡಿ ಮುನ್ನೂರು, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಪಾಮಯ್ಯ ಮುರಾರಿ, ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಭೂಪನಗೌಡ ಪಾಟೀಲ್, ಜಿಲ್ಲಾಧಿಕಾರಿಗಳು ನಿತೀಶ್ ಕೆ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರಕುಮಾರ ಕಾಂದೂ, ಮುಖ್ಯ ಯೋಜನಾಧಿಕಾರಿ ಡಾ.ಟಿ ರೋಣಿ, ಯೋಜನಾ ನಿರ್ದೇಶಕರು ಶರಣಬಸವರಾಜ, ಎನ್ಆರ್ ಎಲ್ ಎಂ ಜಿಲ್ಲಾ ವ್ಯವಸ್ಥಾಪಕರುಗಳಾದ ಶ್ರೀಕಾಂತ್ ಬನ್ನಿಗೋಳ, ವಿಜಯ ಹೊಸಮನಿ, ತಾಲೂಕಿನ ಈರಪ್ಪ ಗುರಿಕಾರ, ಮಲ್ಲಪ್ಪ, ಬಸವರಾಜ್ ಕಟ್ಟಿಮನಿ, ಹೊನ್ನಮ್ಮ, ಮಂಜುನಾಥ ಹಾಗೂ ತಾಲೂಕಿನ ಉಕಐಈ ಸಿಬ್ಬಂದಿಗಳು, ಒಕ್ಕೂಟದ ಅಧ್ಯಕ್ಷರು ಪದಾಧಿಕಾರಿಗಳು ಇದ್ದರು.

# ವಡಗೇರಾ ಪಟ್ಟಣದ ವಾರ್ಡ್ ಸಂಖ್ಯೆ 3ರಲ್ಲಿ ಚರಂಡಿ ಕೊಳಚೆ ಸಮಸ್ಯೆ: ಜನರ ಆಕ್ರೋಶ



ಮಲ್ಲಮ್ಮ ನುಡಿ ವಾರ್ತೆ

ವಡಗೇರಾ, ಜುಲೈ 28–ವಡಗೇರಾ: ವಡಗೇರಾ ಪಟ್ಟಣದ ವಾರ್ಡ್ ಸಂಖ್ಯೆ 3ರಲ್ಲಿ ಚರಂಡಿ ಕೊಳಚೆ ಮತ್ತು ಕಸದಿಂದ ತುಂಬಿ, ಚರಂಡಿಯ ನೀರು ಸಿಮೆಂಟ್ ರಸ್ತೆಯ ಮೇಲೆ ಹರಿಯುತ್ತಿದೆ. ಈ ಸಮಸ್ಯೆಯಿಂದಾಗಿ ಸ್ಥಳೀಯ ನಿವಾಸಿಗಳ ಜೀವನ ಕಷ್ಟಕರವಾಗಿದ್ದು, ಸೊಳ್ಳೆಗಳ ಹಾವಳಿ ಹೆಚ್ಚಾಗಿ ರೋಗ ರುಜಿನೆಗಳು ಹರಡುವ ಭೀತಿ ಎದುರಾಗಿದೆ. ಸ್ಥಳೀಯರು ಈ ಬಗ್ಗೆ ಗ್ರಾಮ ಪಂಚಾಯತ್ ಸದಸ್ಯರು, ಅಧ್ಯಕ್ಷರು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ಹಲವು ಬಾರಿ ತಂದರೂ, ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಚರಂಡಿಯಲ್ಲಿ ಕಸ ಮತ್ತು ಕೊಳಚೆ ತುಂಬಿರುವುದರಿಂದ ನೀರು ಸರಾಗವಾಗಿ ಹರಿಯದೇ, ಮನೆಗಳ ಮುಂಭಾಗದಲ್ಲಿ ನಿಂತು ಕೊಳೆಯುತ್ತಿದೆ. ಇದರಿಂದ ಸ್ಥಳೀಯರಲ್ಲಿ ಆಕ್ರೋಶ ವ್ಯಕ್ತವಾಗಿದ್ದು, ಪಂಚಾಯತ್ ಕಚೇರಿಯನ್ನು ಮುತ್ತಿಗೆ ಹಾಕುವ ಎಚ್ಚರಿಕೆ ನೀಡಿದ್ದಾರೆ.

"ನಾವು ಈ ಸಮಸ್ಯೆಯ ಬಗ್ಗೆ ಅನೇಕ ಬಾರಿ ದೂರು ನೀಡಿದ್ದೇವೆ, ಆದರೆ ಅಧಿಕಾರಿಗಳು ಕಿವಿಗೊಡುತ್ತಿಲ್ಲ. ಮಕ್ಕಳು ಮತ್ತು ವೃದ್ಧರ ಆರೋಗ್ಯದ ಮೇಲೆ ಇದರಿಂದ ಗಂಭೀರ ಪರಿಣಾಮ ಬೀರುತ್ತಿದೆ," ಎಂದು ಸ್ಥಳೀಯ ನಿವಾಸಿಯೊಬ್ಬರು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯತ್‌ನ ನಿರ್ಲಕ್ಷ್ಯದಿಂದ ಕುಡಿಯುವ ನೀರಿನ ಮೂಲಗಳಿಗೂ ಕೊಳಕು ನೀರು ಸೇರಿಕೊಳ್ಳುವ ಆತಂಕ ಜನರಲ್ಲಿ ಮೂಡಿದೆ.

ಈ ಸಮಸ್ಯೆಯನ್ನು ತಕ್ಷಣವೇ ಬಗೆಹರಿಸಲು ಸಂಬಂಧಿತ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ. ಒಂದು ವೇಳೆ ಶೀಘ್ರ ಕ್ರಮ ಕೈಗೊಳ್ಳದಿದ್ದರೆ, ಜನರು ಪ್ರತಿಭಟನೆಗೆ ಇಳಿಯುವ ಸಾಧ್ಯತೆ ಇದೆ.

# ಯಾದಗಿರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘ, ಜಿಲ್ಲಾ ಟ್ಯಾಕ್ಸ್ ಬಾರ್ ಅಸೋಸಿಯೇಷನ್ ಸಭೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘ, ಜಿಲ್ಲಾ ಟ್ಯಾಕ್ಸ್ ಬಾರ್ ಅಸೋಸಿಯೇಷನ್ ಸಭೆ

ನೂತನ ಆದಾಯ ತೆರಿಗೆ ಕಾಯ್ದೆ ಚಾರ್ಟರ್ಡ್ ಅಕೌಂಟೆಂಟರಿಗೆ ಮಾರಕ: ಸಂಸದ ಜಿ ಕುಮಾರ ನಾಯಕ.

ಆದಾಯ ತೆರಿಗೆಯಂತಹ ಮಹತ್ವದ ಕಾಯ್ದೆ ಜಾರಿ ತರುವ ಪೂರ್ವ ಈ ಬಗ್ಗೆ ನುರಿತ ತಜ್ಞರ ಮತ್ತು ಈ ಕ್ಷೇತ್ರದಲ್ಲಿ ಅನುಭವಿಗಳ ಮಧ್ಯೆ ಚರ್ಚೆಗೆ ಕೇಂದ್ರ ಸರಕಾರ ಅವಕಾಶ ನೀಡುವ ಅಗತ್ಯವಿತ್ತು

ಇಂದು ಯಾದಗಿರಿ ನಗರದ ಎಸ್ ಡಿ ಎನ್ ಹೋಟೆಲ್ ಸಭಾಂಗಣದಲ್ಲಿ ಯಾದಗಿರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘ, ಮತ್ತು ಯಾದಗಿರಿ ಚಾರ್ಟೆಡ್ ಅಕೌಂಟ್ ಅಸೋಸಿಯೇಷನ್ ಜಂಟಿಯಾಗಿ ಆಯೋಜಿಸಿದ್ದ ನೂತನ ಆದಾಯ ತೆರಿಗೆ ಕಾಯ್ದೆ 2025ರ ಚರ್ಚೆಯಲ್ಲಿ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ.ಕುಮಾರ ನಾಯಕರವರು ಪಾಲ್ಗೊಂಡು ಮಾತನಾಡಿದರು.

ಕೇಂದ್ರ ಸರ್ಕಾರ ಪ್ರಸ್ತುತ ಅಸ್ತಿತ್ವದಲ್ಲಿರುವ ಆದಾಯ ತೆರಿಗೆ ಕಾಯ್ದೆಗೆ, ತಿದ್ದುಪಡಿಯ ನೂತನ ಆದಾಯ ತೆರಿಗೆ ಕಾಯ್ದೆ–2025 ಜಾರಿ ಸಿದ್ಧತೆ ನಡೆಸಿದೆ.

ಕೇಂದ್ರ ಜಾರಿಗೊಳಿಸಲುದ್ದೇಶಿತ ನೂತನ ಆದಾಯ ತೆರಿಗೆ ಕಾಯ್ದೆ ಚಾರ್ಟರ್ಡ್ ಅಕೌಂಟೆಂಟ್ ಸೇವೆಗೆ ಮಾರಕವಾಗಿದೆ. ಡಿಜಿಟಲ್ ಡಿವೈಸ್ ತಂತ್ರಜ್ಞಾನ ವ್ಯಾಪಾರಿಗಳ ಖಾಸಗಿ ಜೀವನಕ್ಕೆ ಸಂಚಕಾರವಾಗಿದೆ.

ಇಂತಹ ಮಹತ್ವದ ಕಾಯ್ದೆ ಜಾರಿ ಪೂರ್ವ ಇದರ ಎಲ್ಲಾ ಅಂಶಗಳ ಬಗ್ಗೆ ನೂತನ ಆದಾಯ ತೆರಿಗೆ ಕಾಯ್ದೆ ಜಾರಿಗೆ ಪೂರ್ವ ಚರ್ಚೆ ಅಗತ್ಯವಾಗಿತ್ತು. ಈ ಹಿಂದೆ ವಿರೋಧ ಪಕ್ಷಗಳ ಒತ್ತಾಯದಿಂದ ವಕ್ಫ್ ತಿದ್ದುಪಡಿ ಕಾಯ್ದೆ ಚರ್ಚೆಗೆ ಅವಕಾಶ ಮಾಡಿಕೊಡಲಾಗಿತ್ತು ಎಂದರು.

ನೂತನ ಆದಾಯ ತೆರಿಗೆ ಕಾಯ್ದೆ ಸಾಧಕ–ಬಾಧಕಗಳ ಬಗ್ಗೆ ಚಾರ್ಟರ್ಡ್ ಅಕೌಂಟೆಂಟ್ ಕೂಲಂಕುಶ ಅಧ್ಯಯನ ಮಾಡಿ ಕೇಂದ್ರ ಸರ್ಕಾರದ ಗಮನಕ್ಕೆ ತರುವ ಅಂಶಗಳ ಬಗ್ಗೆ ಸಮಗ್ರ ಮಾಹಿತಿ ನೀಡಿದರೆ ಲೋಕಸಭೆ ಅಧಿವೇಶನದಲ್ಲಿ ಈ ಬಗ್ಗೆ ಸರ್ಕಾರದ ಮುಂದೆ ಸವಾಲಿನ ಪ್ರಶ್ನೆ ಮಂಡಿಸಿ ವಿವರಣೆ ಪಡೆಯಲು ಸಾಧ್ಯವಾಗುತ್ತದೆ ಎಂದರು.

ಈ ಚರ್ಚಾ ಸಭೆಯಲ್ಲಿ ಪಾಲ್ಗೊಂಡಿದ್ದ ಅನೇಕ ಚಾರ್ಟರ್ಡ್ ಅಕೌಂಟೆಂಟ್ ಅವರು, ಡಿಜಿಟಲ್ ತಂತ್ರಜ್ಞಾನ ವೈಯಕ್ತಿಕ ಜೀವನಕ್ಕೆ ಬಾಧಕವಾಗದಂತೆ ಗಮನಿಸಬೇಕು ಮತ್ತು ಚಾರ್ಟರ್ಡ್ ಅಕೌಂಟೆಂಟ್ ವೃತ್ತಿಜೀವನದ ಮೇಲೆ ಯಾವುದೇ ಪ್ರಹಾರ ಮಾಡದಂತೆ ತಿದ್ದುಪಡಿ ಪರಿಷ್ಕರಿಸಬೇಕು ಎಂದು ಧ್ವನಿ ಎತ್ತಿದರು.

ಸಭೆಯಲ್ಲಿ ಪಾಲ್ಗೊಂಡಿದ್ದ ಅನೇಕರು ಮಹತ್ವದ ಸಲಹೆಗಳನ್ನು ನೀಡಿದರು. ಕೇಂದ್ರ ಸರ್ಕಾರದ ಮುಂದೆ ಮಂಡಿಸುವ 5 ಪ್ರಶ್ನೆಗಳ ಬಗ್ಗೆ ಈ ಸಭೆಯಲ್ಲಿ ಸುದೀರ್ಘ ಚರ್ಚೆ ಮತ್ತು ಅದಕ್ಕೆ ಪೂರಕ ಮಾಹಿತಿ ಒದಗಿಸಲಾಯಿತು.

ಈ ಕಾರ್ಯಕ್ರಮದ ವೇದಿಕೆಯಲ್ಲಿ ಅಧ್ಯಕ್ಷರಾದ ದಿನೇಶ್ ಕುಮಾರ ಜೈನ್, ವೆಂಕಟ ಕೃಷ್ಣ, ಶ್ರೀ ವಿವೇಕ್ ಎಂ ಮತ್ತು ಕಾರ್ಯದರ್ಶಿಗಳಾದ ಮಲ್ಲಿಕಾರ್ಜುನ್ ಅಕ್ಕಿ ಹಾಗೂ ಯಾದಗಿರಿ ಜಿಲ್ಲೆಯ ಜಆಅಅಖ ಸದಸ್ಯರು, ಚಾರ್ಟೆಡ್ ಅಕೌಂಟೆಂಟ್ಸ್‌ಗಳು, ವಾಣಿಜ್ಯ ವ್ಯಾಪಾರ ಮಳಿಗೆಯ ವ್ಯಾಪಾರಸ್ಥರು, ಸಾರ್ವಜನಿಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗಂಡು ಮಗುವಿಗೆ ಜನ್ಮ ನೀಡಿದ ವೈದ್ಯರ ನಿರ್ಲಕ್ಷತನದಿಂದಲೇ ತಾಯಿ ಮುಕ್ತಪಟ್ಟಿದ್ದಾಳೆ ಆರೋಪ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಗಂಡು ಮಗುವಿಗೆ ಜನ್ಮ ನೀಡಿದ ಕೆಲವೇ ಕ್ಷಣಗಳಲ್ಲಿ ತಾಯಿ ಮೃತಪಟ್ಟಿರುವ ಘಟನೆ ರವಿವಾರ ಜಿಮ್ಸ್ ಆಸ್ಪತ್ರೆಯಲ್ಲಿ ನಡೆದಿದ್ದು, ವೈದ್ಯರ ನಿರ್ಲಕ್ಷ್ಯದಿಂದಲೇ ತಾಯಿ ಮೃತಪಟ್ಟಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಜೇವರ್ಗಿ ತಾಲ್ಲೂಕಿನ ನರಿಬೋಳ ಗ್ರಾಮದ ಶ್ರಿದೇವಿ (22) ಮೃತರು ಎಂದು ತಿಳಿದುಬಂದಿದೆ.

ನಿನ್ನೆ (ಶನಿವಾರ) ರಾತ್ರಿ ಹೆರಿಗೆಗೆಂದು ಜಿಮ್ಸ್ ಆಸ್ಪತ್ರೆಗೆ ದಾಖಲಾಗಿದ್ದ ಶ್ರಿದೇವಿ ಅವರಿಗೆ ರವಿವಾರ ಬೆಳಗ್ಗೆ ಸಾಮಾನ್ಯ ಹೆರಿಗೆಯಾಗಿ ಗಂಡು ಮಗು ಜನಿಸಿತ್ತು.

ಆದರೆ ಮಗು ಜನಿಸಿದ ಕೆಲವೇ ಕ್ಷಣಗಳಲ್ಲಿ ಲೋ ಬಿಪಿಯಾಗುತ್ತಿದೆ ಎಂದು ವೈದ್ಯರು ಹೇಳಿದ್ದರು ಎನ್ನಲಾಗಿದೆ.

ವೈದ್ಯರ ನಿರ್ಲಕ್ಷ್ಯದಿಂದ ಪತ್ನಿ ಸಾವನ್ನಪ್ಪಿದ್ದಾಳೆ, ಸರಿಯಾದ ಚಿಕಿತ್ಸೆ ನೀಡಿದ್ದರೆ ಬದುಕಿರುತ್ತಿದ್ದಳು' ಎಂದು ಪತಿ ಹಾಗೂ ಮೃತರ ಕುಟುಂಬಸ್ಥರು ಜಿಮ್ಸ್ ವೈದ್ಯರ ವಿರುದ್ಧ ಆರೋಪ ಮಾಡಿದ್ದಾರೆ

# ಜುಲೈ 31ರಂದು ಸ್ವಾತಂತ್ರೋತ್ಸವ;ದಿನಾಚರಣೆ ಪೂರ್ವಭಾವಿ ಸಭೆ

ರಾಯಚೂರು ಜುಲೈ 28 (ಕರ್ನಾಟಕ ವಾರ್ತೆ): ಜಿಲ್ಲಾಡಳಿದಿಂದ 2025ರ ಸಾಲಿನ ಆಗಸ್ಟ್ 15ರ ಸ್ವಾತಂತ್ರೋತ್ಸವ ದಿನಾಚರಣೆ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು ಸಮಾಲೋಚನೆ ಹಾಗೂ ವಿಷಯಗಳ ಕುರಿತು ಚರ್ಚಿಸಲು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರ ಅಧ್ಯಕ್ಷತೆಯಲ್ಲಿ ಜುಲೈ 31ರ ಬೆಳಿಗ್ಗೆ 11.30ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸ್ವಾತಂತ್ರ್ಯ ಹೋರಾಟಗಾರರು ಸಭೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಮಾರೇಶ್ವರ ಆಸ್ಪತ್ರೆಯಲ್ಲಿ ಚೈಲ್ಡ್ ಡೆವಲಪ್‌ಮೆಂಟ್ ಕ್ಲಿನಿಕ್ ಚಿಕ್ಕಮಕ್ಕಳ ಆರೋಗ್ಯಕ್ಕೆ ಆದ್ಯತೆ–ವೀರಣ್ಣ ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28–ಚಿಕ್ಕಮಕ್ಕಳ ಆರೋಗ್ಯಕ್ಕೆ ಆದ್ಯತೆ ನೀಡುವ ದೃಷ್ಟಿಯಿಂದ ಕುಮಾರೇಶ್ವರ ಆಸ್ಪತ್ರೆಯಲ್ಲಿ ಚೈಲ್ಡ್ ಡೆವಲಪ್‌ಮೆಂಟ್ ಕ್ಲಿನಿಕ್ ಸ್ಥಾಪಿಸಲಾಗಿದೆ. ಈ ಕ್ಲಿನಿಕ್‌ನಲ್ಲಿ ಬೆಳವಣಿಗೆಯ ವಿಳಂಬತೆಯ ಅಪಾಯದಲ್ಲಿರುವ ಮಕ್ಕಳಿಗೆ ಸೂಕ್ತ ಚಿಕಿತ್ಸೆ ನೀಡಲಾಗುವುದು ಎಂದು ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹೇಳಿದರು.

ನಗರದ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯ ಚಿಕ್ಕಮಕ್ಕಳ ವಿಭಾಗದಲ್ಲಿ ಆರಂಭಿಸಲಾಗಿರುವ ಮಕ್ಕಳ ಬೆಳವಣಿಗೆ ಕ್ಲಿನಿಕ್ (ಚೈಲ್ಡ್ ಡೆವಲಪ್‌ಮೆಂಟ್) ಸೋಮವಾರ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳ ಬೆಳವಣಿಗೆಗೆ ಬೇಕಾಗಿರುವ ವಿಶೇಷ ಅಭಿವೃದ್ಧಿಯ ಮೇಲ್ವಿಚಾರಣೆ ಮಾಡುವ ಹಾಗೂ ಅವಶ್ಯಕತೆಗಳನ್ನು ನಿರ್ಣಯಿಸುವ ನಿಟ್ಟಿನಲ್ಲಿ ಈ ಕ್ಲಿನಿಕ್ ವಿಶೇಷ ಸೇವೆ ಸಲ್ಲಿಸಲಿದೆ ಎಂದರು.

ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ ಮಾತನಾಡಿ, ಮಕ್ಕಳ ಕುಂಠಿತ ಬೆಳವಣಿಗೆ, ಅವಧಿಪೂರ್ವ ಜನಿಸಿದ ಮಗು ಅಥವಾ ಕಡಿಮೆ ತೂಕದ ಶಿಶು, ಜನನದ ವೇಳೆ ತೊಂದರೆಗಳನ್ನು ಅನುಭವಿಸಿದ ಮಗು, ತಡವಾದ ಬೆಳವಣಿಗೆ, ಕಲಿಕೆ ಅಥವಾ ಸಂವಹನದ ಸಮಸ್ಯೆಗಳು, ಹುಟ್ಟಿನಿಂದ ಇರುವ ದೈಹಿಕ ಅಥವಾ ಅಂಗಾಂಗಗಳ ದೋಷಗಳು, ಮಗುವಿನಲ್ಲಿನ ಅನುವಂಶಿಕ ಕಾಯಿಲೆಗಳು, ದೀರ್ಘಕಾಲೀನ ಕಾಯಿಲೆಗಳು, ಮಾತು ಅಥವಾ ಭಾಷಾ ವಿಳಂಬ, ಆಟಿಸಮ್ ಅಥವಾ ಇತರ ಮೆದುಳಿನ ಬೆಳವಣಿಗೆಯ ಸಮಸ್ಯೆಗಳನ್ನು ಹೊಂದಿರುವ ಮಕ್ಕಳಿಗೆ ಈ ಕ್ಲಿನಿಕ್‌ನಲ್ಲಿ ಉಪಯುಕ್ತ ಮತ್ತು ಪರಿಣಾಮಕಾರಿ ಚಿಕಿತ್ಸೆ ನೀಡಲಾಗುತ್ತದೆ ಎಂದು ಹೇಳಿದರು.

ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಅಶೋಕ ಬಡಕಲಿ, ಈ ಚಿಕಿತ್ಸಾ ಕೇಂದ್ರದಲ್ಲಿ ಮಕ್ಕಳ ತಜ್ಞರು ಹಾಗೂ ಮೆದುಳಿನ ಬೆಳವಣಿಗೆ ಮೌಲ್ಯಮಾಪಕರು, ಮಕ್ಕಳ ನರರೋಗ ತಜ್ಞರು, ಮನೋವೈದ್ಯರು, ಭಾಷಾ ಮತ್ತು ಸಂವಹನ ತಜ್ಞರು, ಶಾರೀರಿಕ ಚಿಕಿತ್ಸಾ ತಜ್ಞರು ಹಾಗೂ ಮೆದುಳಿನ ಮೌಲ್ಯಮಾಪಕರು, ಮನಃಶಾಸ್ತ್ರಜ್ಞರು, ವೃತ್ತಿಪರ ಚಿಕಿತ್ಸಾ ತಜ್ಞರು ಲಭ್ಯವಿರುವರು ಹಾಗೂ ಅತ್ಯಾಧುನಿಕ ಉಪಕರಣಗಳು ಲಭ್ಯವಿವೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ, ಬೆಂಗಳೂರಿನ ಚಿಕ್ಕಮಕ್ಕಳ ನರರೋಗ ತಜ್ಞ ಡಾ.ಸುರೇಶ್‌ರಾವ್ ಅರೂರ್, ಕರ್ನಾಟಕ ಅಕಾಡೆಮಿ ಆಫ್ ಪಿಡಿಯಾಟ್ರಿಕ್ ನ್ಯೂರಾಲಜಿಯ ಅಧ್ಯಕ್ಷ ಡಾ.ಸಿ.ಪಿ.ರವಿಕುಮಾರ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಡಾ.ರಮೇಶ ಪೋಳ, ಡಾ.ತಳವಾರ, ಡಾ.ವನಕಿ, ಡಾ.ಪಲ್ಲವಿ ಚರಂತಿಮಠ, ಡಾ.ಅನಿತಾ, ಡಾ.ಮಿರ್ಜಿ, ಡಾ.ಮನೋಜ, ವಿವಿಧ ವಿಭಾಗಗಳ ಮುಖ್ಯಸ್ಥರು ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 'ಗ್ಯಾರಂಟಿ' ಮನೆ ಮನೆ ಜಾಗೃತಿ ಅಗತ್ಯ–ಸಿಇಓ ಶಶಿಧರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28–ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ತಾಲೂಕು ಮಟ್ಟದ ಅಧ್ಯಕ್ಷರು ಗ್ರಾಮಮಟ್ಟದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮನೆ ಮನೆಗೆ ತೆರಳಿ ಯೋಜನೆಗಳ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾ ಪಂಚಾಯತ್ ಹಳೆಯ ಸಭಾಭವನದಲ್ಲಿ ಸೋಮವಾರ ಜರುಗಿದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮಮಟ್ಟದಲ್ಲಿ ಹೆಚ್ಚಿನ ಜನಸ್ಪಂದನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಈ ಕಾರ್ಯಕ್ರಮಗಳಲ್ಲಿ ಜನತೆ ಎದುರಿಸುತ್ತಿರುವ ತೊಂದರೆಗಳನ್ನು ಪತ್ತೆಹಚ್ಚಿ ಅವುಗಳಿಗೆ ಶೀಘ್ರ ಪರಿಹಾರ ಕಲ್ಪಿಸುವ ಕ್ರಮ ಕೈಗೊಳ್ಳಬೇಕು ಅಂದಾಗ ಮಾತ್ರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸುಲಭವಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾಮಟ್ಟದಲ್ಲಿ ಚರ್ಚೆಯಾಗುವ ವಿಷಯಗಳನ್ನು ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಜಾರಿಗೆ ತಂದಾಗ ಮಾತ್ರ ಯೋಜನೆಗಳು ನಿಜಾರ್ಥದಲ್ಲಿ ಯಶಸ್ವಿಯಾಗುತ್ತವೆ ಎಂದು ಶಶಿಧರ ಕುರೇರ ಹೇಳಿದರು.

ಗ್ಯಾರಂಟ ಯೋಜನೆಗಳ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಯೋಜನೆಗಳ ಪ್ರಗತಿಯ ವಿವರವನ್ನು ಸಭೆಗೆ ತಿಳಿಸಿದರು. ಶಕ್ತಿ ಯೋಜನೆ ಜಾರಿಗೊಂಡ ನಂತರ ಜಿಲ್ಲೆಯಲ್ಲಿ ಸಾರ್ವಜನಿಕ ಸಾರಿಗೆಯ ಪ್ರಯಾಣಿಕರ ಸಂಖ್ಯೆ 2.71 ಲಕ್ಷದಿಂದ 3.19 ಲಕ್ಷಕ್ಕೆ ಹೆಚ್ಚಾಗಿದೆ. ಎಪ್ರಿಲ್ 1 ರಿಂದ ಜುಲೈ 22 ರವರೆಗೆ ಜಿಲ್ಲೆ ಭಾಗದ ಒಟ್ಟು ಆದಾಯ ರೂ.14,859 ಲಕ್ಷವಾಗಿದ್ದು, ಇದರ ಪೈಕಿ ರೂ.8,491 ಲಕ್ಷ ಶಕ್ತಿ ಯೋಜನೆಯಿಂದ ಸಂಗ್ರಹವಾಗಿದೆ.

ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಫೆಬ್ರವರಿ 2025 ರಿಂದ ಜುಲೈ 2025ರ ತನಕ ಪಡಿತರ ಚೀಟಿ–ದಾರರಿಗೆ 3,54,680 ಕ್ವಿಂಟಲ್ ಅಕ್ಕಿ ವಿತರಣೆ ನಡೆದಿದೆ. ಗೃಹ ಜ್ಯೋತಿ ಯೋಜನೆ ಅಡಿಯಲ್ಲಿ ಜಿಲ್ಲೆಯ ಒಟ್ಟು ಸ್ಥಾವರಗಳ ಸಂಖ್ಯೆ 4,33,828 ಆಗಿದ್ದು, ಈ ಪೈಕಿ 4,24,865 ಸ್ಥಾವರಗಳು ನೋಂದಣಿಯಾಗಿವೆ. ಇದರಿಂದ ರೂ.345.62 ಕೋಟಿ ರೂ. ಮೌಲ್ಯ ಅಂದಾಜಿಸಲಾಗಿದೆ ಎಂದು ಸಭೆಗೆ ತಿಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಸಾಗರ ತೆಕ್ಕನ್ನವರ, ಉಪಾಧ್ಯಕ್ಷರು, ತಾಲೂಕು ಮಟ್ಟದ ಎಲ್ಲ ಪದಾಧಿಕಾರಿಗಳು ಹಾಗೂ ಇತರ ಅಧಿಕಾರಿಗಳು ಭಾಗವಹಿಸಿದ್ದರು.

# ಕೃಷಿ ಭಾಗ್ಯ ಯೋಜನೆಗೆ ಉತ್ತಮ ಸ್ಪಂದನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28–ಜಿಲ್ಲೆಯಲ್ಲಿ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 3,19,907 ಹೆಕ್ಟೇರ್ ಭೂಮಿಯಲ್ಲಿ ಬಿತ್ತನೆ ಕಾರ್ಯವಾಗಿದ್ದು, ಶೇ.103ರಷ್ಟು ಸಾಧನೆ ಆಗಿದೆ. ಜಿಲ್ಲೆಯಾದ್ಯಂತ ಮುಂಗಾರು ಬೆಳೆ ಸಮೀಕ್ಷೆ ಆ್ಯಪ್ ಮೂಲಕ ಜಾರಿಗೆ ಬಂದಿದ್ದು, 1,115 ರೈತರು ತಮ್ಮ ಬೆಳೆ ವಿವರ ದಾಖಲಿಸಿದ್ದಾರೆ.

ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ವಿತರಣೆ ಯಡಿಯಲ್ಲಿ 1.66 ಕೋಟಿ ರೂ. ಮೌಲ್ಯದ ಬೀಜವನ್ನು 1.54 ಲಕ್ಷಕ್ಕೂ ಹೆಚ್ಚು ರೈತರಿಗೆ ನೀಡಲಾಗಿದೆ. ಆಗಸ್ಟ್ 31 ರವರೆಗೆ ರಿಯಾಯಿತಿ ಬೀಜ ಲಭ್ಯವಿದೆ. ಫಸಲ್ ಬಿಮಾ ಯೋಜನೆಯಡಿ 54,824 ರೈತರಲ್ಲಿ 8,982 ಜನರಿಗೆ ರೂ.15.82 ಕೋಟಿ ಪರಿಹಾರ ಮಂಜೂರಾಗಿದ್ದು, ಈ ವರ್ಷ ಜುಲೈವರೆಗೆ 2,634 ರೈತರು ಹೆಸರು ನೋಂದಾಯಿಸಿದ್ದಾರೆ.

ಕೃಷಿ ಭಾಗ್ಯ ಯೋಜನೆಯಡಿ 772 ರೈತರಿಗೆ ರೂ. 7.23 ಕೋಟಿ ನೆರವು ನೀಡಲಾಗಿದೆ. ಈಗ 192 ಕೃಷಿ ಹೊಂಡಗಳ ಗುರಿ ನಿಗದಿಯಾಗಿದೆ. ಹೈಟೆಕ್ ಹಾರ್ವೆಸ್ಟರ್ ಹಬ್‌ಗಳಿಗೆ ಶೇ.50–70ರಷ್ಟು ಸಹಾಯಧನ ದೊರೆಯುತ್ತಿದೆ. ಜುಲೈ 21ರಂದು ಜಿಲ್ಲೆಯಲ್ಲಿ ನಡೆದ ಮೇಳದಲ್ಲಿ 1000ಕ್ಕೂ ಹೆಚ್ಚು ರೈತರು, 17 ಖರೀದಿದಾರರು ಭಾಗವಹಿಸಿ ರೂ. 249.28 ಕೋಟಿ ಒಡಂಬಡಿಕೆ ಮಾಡಿಕೊಂಡಿದ್ದಾರೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಾನ ಧರ್ಮಗಳೆ ಕೈಗೆ ಭೂಷಣ : ಚಂದ್ರು ಬಗನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಮ್ಮ ಕೈಗಳಿಗೆ ಬಂಗಾರಕ್ಕಿಂತ ದಾನ ಧರ್ಮಗಳೇ ನಿಜವಾದ ಭೂಷಣ ಎಂದು ಯುವ ಮುಖಂಡ ಚಂದ್ರು ಬಗನಾಳ ಹೇಳಿದರು.

ಅವರು ಕುಕನೂರ ಪಟ್ಟಣದ ಅನ್ನದಾನೀಶ್ವರ ಶಾಖಾಮಠದ ವತಿಯಿಂದ ಶ್ರೀಮಠದ ಜಾತ್ರ ನಿಮಿತ್ಯ ನಡೆದ ಸದ್ಭಾವನ ಪಾದಯಾತ್ರೆಲ್ಲಿ ಪಾಲ್ಗೊಂಡು ಮಾತನಾಡುತ್ತಾ ಮನುಷ್ಯ ಪರೋಪಕಾರಿಯಾಗಿ ಬದುಕಬೇಕು ಸಮಾಜದಲ್ಲಿರುವ ನೊಂದವರ ಬೆಂದವರ ಧ್ವನಿಯಾಗಬೇಕು, ಮಠ ದೇವಾಲಯಗಳ ಧಾರ್ಮಿಕ ಕಾರ್ಯಕ್ರಮಗಳಿಗೆ ತನು ಮನ ಧನದಿಂದ ಸೇವೆ ಮಾಡಬೇಕು ಜೊತೆಗೆ ಹಸಿದವರಿಗೆ ಮಾತ್ರ ಅನ್ನದ ಬೆಲೆ ಗೊತ್ತಿರುತ್ತದೆ ಎಂದರು. ರೈತ ಮುಖಂಡ ಬಸಣ್ಣ ಈಬೇರಿ ಮಾತನಾಡಿ ಅನ್ನದಾನೀಶ್ವರ ಮಠ ತನ್ನದೇ ಆದ ಇತಿಹಾಸ ಪರಂಪರೆ ಹೊಂದಿದೆ, ನಮ್ಮೂರಿಗೆ ಧಾರ್ಮಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಕ್ಷೇತ್ರಕ್ಕೆ ಶ್ರೀಮಠದ ಕೊಡುಗೆ ಅಪಾರ, ಮಠ ಮಾನ್ಯಗಳ ಸೇವೆಯನ್ನ ಎಲ್ಲಾರು ಮಾಡಬೇಕು, ಭಕ್ತರ ಕಲ್ಯಾಣವೇ ಮಠಗಳ ಮೂಲ ಉದ್ದೇಶವಾಗಿದೆ ಎಂದರು.

ಜಾತ್ರ ಸಮಿತಿ ಉಪಾಧ್ಯಕ್ಷ ಶಿವುಕುಮಾರ ಯತ್ನಟ್ಟಿ ಮಾತನಾಡಿ ಶ್ರಾವಣ ಮಾಸದಲ್ಲಿ ಒಂದು ತಿಂಗಳ ಪರ್ಯಂತ ನಡೆಯುವ ಪಾದಯಾತ್ರೆಗೆ ಭಕ್ತರ ಸಹಕಾರ ಅವಶ್ಯ, ಭಕ್ತರ ದೇಣಿಗೆಯಿಂದ ನೂತನ ತೇರು ನಿರ್ಮಾಣ ಕಾರ್ಯ ನಡೆಯುತ್ತಿದೆ ಎಂದರು.

ಈ ಸಂದರ್ಭದಲ್ಲಿ ಪೂಜ್ಯ ಮಹಾದೇವ ಸ್ವಾಮೀಜಿ, ಸಂಗಮೇಶ ಕಲ್ಮಠ, ಗದಿಗೆಪ್ಪ ಪವಾಡಶೆಟ್ಟಿ, ಪ್ರಭು ಶಿಸಿಂಪರ, ಆನಂದ ಯತ್ನಟ್ಟಿ, ಆನಂದ ಮಡಿವಾಳರ, ಸೋಮಣ್ಣ ಅರಕೇರಿ, ಈಶಪ್ಪ, ಗುದ್ನೇಶ ಬಾಗೇವಾಡಿ, ದೇವಪ್ಪ ರಾಟಿಮನಿ, ಈಶಪ್ಪ ಸಬರದ, ಶಿವಪ್ಪ ಶಿಳ್ಳಿನ ಮತ್ತು ಇತರರು ಇದ್ದರು.

# ಹಿರಿಯ ನಾಗರಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ವಿಕಲಚೇತರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಶ್ವ ಹಿರಿಯ ನಾಗರಿಕರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 1 ರಂದು ನಡೆಯುವ ವಿಶ್ವ ಹಿರಿಯ ನಾಗರಿಕರ ದಿನಾಚಾರಣೆ ಸಂದರ್ಭದಲ್ಲಿ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಪ್ರತಿಭೆ ಅಥವಾ ಕ್ರೀಡೆ ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಮಾಜ ಸೇವೆಯನ್ನು ಒಳಗೊಂಡಂತೆ ಗಣನೀಯ ಸೇವೆ ಸಲ್ಲಿಸಿದ 6 ಹಿರಿಯ ನಾಗರಿಕರಿಗೆ ವ್ಯಯಕ್ತಿಕ ಪ್ರಶಸ್ತಿಗಳನ್ನು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ 1 ಸಂಸ್ಥೆಗೆ ಸೇರಿ ಒಟ್ಟು 7 ಪ್ರಶಸ್ತಿಗಳನ್ನು ರಾಜ್ಯ ಮಟ್ಟದಲ್ಲಿ ನೀಡಲಾಗುತ್ತಿದ್ದು, ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಗಣನೀಯವಾಗಿ ಸೇವೆ ಸಲ್ಲಿಸಿದ ಹಿರಿಯ ನಾಗರಿಕರು ಮತ್ತು ಅರ್ಹ ಸಂಸ್ಥೆಗಳು ಅರ್ಜಿ ಸಲ್ಲಿಸಬಹುದು. ಆಸಕ್ತ ಹಿರಿಯ ನಾಗರಿಕರು ಮತ್ತು ಅರ್ಹ ಸಂಸ್ಥೆಗಳು ವಿಕಲಚೇತರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಪ್ಪಳ ಕಛೇರಿಯಿಂದ ಪಡೆದು ನಿಗದಿತ ನಮೂನೆಯಲ್ಲಿ ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಪ್ರಸ್ತಾವನೆಗಳನ್ನು ದ್ವಿಪ್ರತಿಯಲ್ಲಿ ಆಗಸ್ಟ್ 25ರೊಳಗೆ ಕೊಪ್ಪಳ ನಗರದ ಹೊಸಪೇಟ್ ರಸ್ತೆಯ ರಿಲಾಯನ್ಸ್ ಪೆಟ್ರೋಲ್ ಬಂಕ್ ಎದುರುಗಡೆಯ ನಗರಾಭಿವೃದ್ಧಿ ಪ್ರಾಧಿಕಾರ ಕಾರ್ಯಾಲಯ ಆವರಣದಲ್ಲಿರುವ ಕೊಠಡಿ ಸಂಖ್ಯೆ 31.32ರ ಕೊಪ್ಪಳ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಗೆ ಕಛೇರಿ ಅವಧಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08539–295496 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಯವರ ಪ್ರಕಟಣೆಯು ತಿಳಿಸಿದೆ.

# ಕಿರು ಟೆಂಡರ್‌ಗೆ ಅಧಿಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 28–ಇಲ್ಲಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಿಂದ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಸೇವಾ ಏಜೆನ್ಸಿಗಳ ಮೂಲಕ ಶುಚಿಗೊಳಿಸುವ ವ್ಯಕ್ತಿಗಳನ್ನು ನೇಮಿಸಿಕೊಳ್ಳಲು ಕಿರು ಟೆಂಡರ್ ಅಧಿಸೂಚನೆ ಹೊರಡಿಸಲಾಗಿದ್ದು, ಅರ್ಹ ಏಜೆನ್ಸಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಯಮಗಳು ಮತ್ತು ಷರತ್ತುಗಳಿಗನುಗುಣವಾಗಿ ಆಸಕ್ತರು ಏಜೆನ್ಸಿಗಳು ಆಗಸ್ಟ್ 06ರ ಸಂಜೆ 5ಗಂಟೆಯೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನ್ಯಾಯಾಲಯದ ವೆಬ್‌ಸೈಟ್ ವಿಳಾಸ: https://raichur.dcourts.gov.in/notice/short-tender-notification ನೋಡಬಹುದಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: 5401 ರೈತರಿಗೆ ರೂ.9.12 ಕೋಟಿ ಬೆಳೆ ವಿಮೆ ಪಾವತಿ ರೈತರು ಈ ಬಾರಿಯೂ ತಮ್ಮ ಬೆಳೆಗಳಿಗೆ ಬೆಳೆ ವಿಮೆ ಮಾಡಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.28–ಕೃಷಿ ಇಲಾಖೆಯಿಂದ 2024–25 ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಬಳ್ಳಾರಿ ಜಿಲ್ಲೆಯ 5401 ರೈತರ ಖಾತೆಗಳಿಗೆ ಒಟ್ಟು 9.12 ಕೋಟಿ ರೂ. ಮೊತ್ತದ ಬೆಳೆ ವಿಮೆ ಪರಿಹಾರ ವರ್ಗಾಯಿಸಲಾಗಿದ್ದು, ಪ್ರಸ್ತಕ ಸಾಲಿನಲ್ಲಿಯೂ ರೈತರು ತಮ್ಮ ಬೆಳೆಗಳಿಗೆ ವಿಮೆ ಮಾಡಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯಡಿ 2024–25 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಯೋಜನೆಯಡಿ ನೋಂದಣಿಯಾದ 5,401 ರೈತರಿಗೆ ಇಲ್ಲಿಯವರೆಗೆ ಒಟ್ಟು 9.12 ಕೋಟಿ ರೂ. ಬೆಳೆ ವಿಮೆ ಪರಿಹಾರ ಮೊತ್ತವನ್ನು ವಿಮಾ ಸಂಸ್ಥೆಯಿಂದ ಇತ್ಯರ್ಥಪಡಿಸಲಾಗಿದೆ.

**ತಾಲ್ಲೂಕುವಾರು ಮಾಹಿತಿ:**

ಬಳ್ಳಾರಿ ತಾಲ್ಲೂಕು–1077 ರೈತರಿಗೆ ರೂ.2.52 ಕೋಟಿ, ಕುರುಗೋಡು ತಾಲ್ಲೂಕು–404 ರೈತರಿಗೆ ರೂ.0.62 ಕೋಟಿ, ಕಂಪ್ಲಿ ತಾಲ್ಲೂಕು–1854 ರೈತರಿಗೆ ರೂ.3.58 ಕೋಟಿ, ಸಂಡೂರು–689 ರೈತರಿಗೆ ರೂ.0.16 ಕೋಟಿ, ಸಿರುಗುಪ್ಪ ತಾಲ್ಲೂಕು–1377 ರೈತರಿಗೆ ರೂ.2.24 ಕೋಟಿ ಇತ್ಯರ್ಥ ಪಡಿಸಲಾಗಿದೆ. ಹಾಗಾಗಿ ರೈತರು 2025–26ನೇ ಸಾಲಿನ ಬೆಳೆಗಳಿಗೂ ಬೆಳೆ ವಿಮೆ ಮಾಡಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಕೋರಿದ್ದಾರೆ.

ಸೂರ್ಯಕಾಂತಿ, ತೊಗರಿ, ಹತ್ತಿ, ಈರುಳ್ಳಿ, ಕೆಂಪು ಮೆಣಿಸಿನಕಾಯಿ, ಜೋಳ ಹಾಗೂ ಮೆಕ್ಕೆಜೋಳ ಬೆಳೆಗಳಿಗೆ ಜುಲೈ 31 ಹಾಗೂ ಇನ್ನಿತರೆ ಬೆಳೆಗಳಾದ ನವಣೆ, ಶೇಂಗಾ, ಭತ್ತ, ರಾಗಿ, ಹುರಳಿ ಬೆಳೆಗಳಿಗೆ ಆಗಸ್ಟ್ 16 ಕೊನೆಯ ದಿನವಾಗಿದೆ.

ಜಿಲ್ಲೆಯ ಎಲ್ಲಾ ರೈತರು ಬೆಳೆ ವಿಮೆ ಯೋಜನೆಯ ಲಾಭ ಪಡೆಯಲು ಯಾವುದೇ ಸ್ಥಳೀಯ ಬ್ಯಾಂಕ್, ಸಾರ್ವಜನಿಕ ಸೇವಾ ಕೇಂದ್ರ ಹಾಗೂ ಗ್ರಾಮ ಪಂಚಾಯತಿಯಲ್ಲಿ ಹೊಸದಾಗಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಒನ್ ಸೇವಾ ಕೇಂದ್ರಗಳನ್ನು ಸಂಪರ್ಕಿಸಿ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಬೆಳೆ ಸ್ಪರ್ಧೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.28–ಕೃಷಿ ಇಲಾಖೆ ವತಿಯಿಂದ 2025–26ನೇ ಸಾಲಿನ ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಬೆಳೆ ಸ್ಪರ್ಧೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕೃಷಿ ಇಲಾಖೆಯ ಕೆ–ಕಿಸಾನ್ ಪೋರ್ಟಲ್ ನಲ್ಲಿ ಸಿಟಿಜನ್ ಲಾಗಿನ್ ಅಥವಾ ಆರ್‌ಎಸ್‌ಕೆ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸೇವಾ ಕೇಂದ್ರ ಅಥವಾ ಸ್ವತಃ ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಕೆ–ಕಿಸಾನ್ ಪೋರ್ಟಲ್‌ನಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಎಫ್‌ಐಡಿ ಬಳಸಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ.

ಕೃಷಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಮುಂಗಾರು ಹಂಗಾಮಿಗೆ ಆಗಸ್ಟ್ 30 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿ ಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.29 ರಂದು ವಿಶ್ವ ಮೆದುಳು ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.28–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ, ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ “ಎಲ್ಲಾ ವಯಸ್ಸಿನವರಿಗೂ ಮೆದುಳಿನ ಆರೋಗ್ಯ” ಎಂಬ ಘೋಷಣೆಯೊಂದಿಗೆ ಜು.29 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಮುಂಭಾಗದ ಆವರಣದಲ್ಲಿ ವಿಶ್ವ ಮೆದುಳಿನ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾರಮೇಶ್ ಬಾಬು ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಕೆ.ಜಿ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಮಲೇರಿಯಾ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಆಸ್ಪತ್ರೆಯ ಸ್ಥಾನಿಕ ವೈದ್ಯಾಧಿಕಾರಿ ಡಾ.ವಿಶ್ವನಾಥ್.ಕೆ., ಜಿಲ್ಲಾ ಆಸ್ಪತ್ರೆಯ ವಿಭಾಗೀಯ ಮುಖ್ಯಸ್ಥರು ಹಾಗೂ ತಜ್ಞವೈದ್ಯ ಡಾ.ಶ್ರೀಧರ್ ಎಮ್.ಆರ್., ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ನರರೋಗ ತಜ್ಞ ವೈದ್ಯ ಡಾ.ಕಮಲ್ ಕುಮಾರ್ ಜೈನ್, ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ನೋಡಲ್ ಅಧಿಕಾರಿ ಹಾಗೂ ತಜ್ಞ ವೈದ್ಯ ಡಾ.ರಾಕೇಶ್, ಜಿಲ್ಲಾ ಆಸ್ಪತ್ರೆಯ ಆಡಳಿತ ಸಹಾಯಕ ಅಧಿಕಾರಿಗಳಾದ ದುರುಗಪ್ಪ.ಟಿ., ರಜೀಯಾ ಬೇಗಂ, ಶುಶ್ರೂಷಾಧೀಕ್ಷಕಿ ವಿಮಲಾಕ್ಷಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್ ಕಾರ್ಯಕ್ರಮ ನಿರೂಪಿಸುವರು. ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ ಕಾರ್ಯಕ್ರಮದ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಸಣ್ಣಕೇಶವ ಸ್ವಾಗತಿಸುವರು.

ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಸಿಬ್ಬಂದಿವರ್ಗ ಸೇರಿದಂತೆ ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿರುವರು.

ಅಂದು ಬೆಳಿಗ್ಗೆ 09 ಗಂಟೆಗೆ ಜಿಲ್ಲಾ ಆಸ್ಪತ್ರೆಯ ಮೆದುಳಿನ ಆರೋಗ್ಯ ಚಿಕಿತ್ಸಾ ಕೇಂದ್ರದ ಆವರಣದಲ್ಲಿ ಮೆದುಳು ಚುರುಕುಗೊಳಿಸುವ ಚಟುವಟಿಕೆಗಳು ನಡೆಯಲಿವೆ ಎಂದು ಪ್ರಕಟಣೆ ತಿಳಿಸಿದೆ.

# ಜು.30 ರಂದು ವಿಶ್ರೀಕೃ ವಿಶ್ವವಿದ್ಯಾಲಯ 16ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.28–ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ 16ನೇ ಸಂಸ್ಥಾಪನಾ ದಿನಾಚರಣೆ–ಯ ಕಾರ್ಯಕ್ರಮವನ್ನು ಜು.30 ರಂದು ಬೆಳಿಗ್ಗೆ 9.30 ಗಂಟೆಗೆ ವಿಶ್ವವಿದ್ಯಾಲಯದ ಬಯಲು ರಂಗಮಂದಿರ ಆವರಣದಲ್ಲಿ ಆಯೋಜಿಸಲಾಗಿದೆ.

ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಆಂಧ್ರಪ್ರದೇಶದ ಕೇಂದ್ರೀಯ ಗಿರಿಜನ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ.ತೇಜಸ್ವಿ ವಿ.ಕಟ್ಟಿಮನಿ ಅವರು ದಿಕ್ಸೂಚಿ ಭಾಷಣ ಮಾಡುವರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಧಾರವಾಡದ ಕರ್ನಾಟಕ ನೀರಾವರಿ ನಿಗಮ ನಿಯಮಿತದ ಮುಖ್ಯ ಆಡಳಿತಾಧಿಕಾರಿ ಎಸ್.ಎನ್.ರುದ್ರೇಶ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ವಿಶ್ರೀಕೃ ವಿಶ್ವವಿದ್ಯಾಲಯದ ಕುಲಸಚಿವ ನಾಗರಾಜು.ಸಿ., ಕುಲಸಚಿವ(ಮೌಲ್ಯಮಾಪನ) ಪ್ರೊ.ಎನ್.ಎಂ.ಸಾಲಿ, ಹಣಕಾಸು ಅಧಿಕಾರಿ ನಾಗರಾಜ, ಕಾರ್ಯಕ್ರಮ ಸಂಯೋಜಕ ಪ್ರೊ.ಎನ್.ಶಾಂತನಾಯ್ಕ್ ಸೇರಿದಂತೆ ವಿಶ್ವವಿದ್ಯಾಲಯದ ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ ಸದಸ್ಯರು, ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ–ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿರುವರು.

ಕಾರ್ಯಕ್ರಮದ ನಂತರ ಬೆಂಗಳೂರಿನ ಡಾ.ಅಪ್ಪಗೆರೆ ತಿಮ್ಮರಾಜು ಅವರಿಂದ ಜಾನಪದ ಗೀತೆ, ವಿಜಯನಗರ ಜಿಲ್ಲೆಯ ಗೊಲ್ಲರಹಳ್ಳಿಯ ರಾಮವ್ವ ಜೋಗತಿ ತಂಡದಿಂದ ಜೋಗತಿ ನೃತ್ಯ, ಕಂಪ್ಲಿಯ ಆರ್.ಶೀಲಾ ತಂಡದವರಿಂದ ಆದಿವಾಸಿ ಬುಡಕಟ್ಟು ಹಕ್ಕಿ–ಪಿಕ್ಕಿ ನೃತ್ಯ, ಬಳ್ಳಾರಿಯ ಚಂದ್ರಶೇಖರ ತಂಡದವರಿಂದ ಡೊಳ್ಳು ಕುಣಿತ, ಬಳ್ಳಾರಿಯ ಜಿ.ಮೋಹನ ತಂಡದವರಿಂದ ತಾಷಾರಾಂಡೋಲು, ಬಳ್ಳಾರಿಯ ಎಂ.ನಾಗರಾಜ ತಂಡದವರಿಂದ ವೀರಗಾಸೆ ನೃತ್ಯ ಒಳಗೊಂಡಂತೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

# ರಸಗೊಬ್ಬರ ಪೂರೈಕೆಗೆ ರಾಜ್ಯದಿಂದ ಕೇಂದ್ರಕ್ಕೆ ಆರು ಬಾರಿ ಮನವಿ ರಾಜ್ಯದಲ್ಲಿ ರಸಗೊಬ್ಬರ ಕೊರತೆ ನೀಗಿಸಲು ಅಗತ್ಯ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.28–ಕೇಂದ್ರಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಆರಂಭಿಕ ಶುಲ್ಕನ್ನು ಪರಿಗಣಿಸದೇ ಯೂರಿಯಾ ಸೇರಿದಂತೆ ಎಲ್ಲಾ ರಸಗೊಬ್ಬರಗಳನ್ನು ಬೇಡಿಕೆಗೆ ಅನುಗುಣವಾಗಿ ಹಂಚಿಕೆ ಮತ್ತು ಸರಬರಾಜು ಮಾಡಲಾಗಿರುತ್ತದೆ. ಇದರಿಂದಾಗಿ ರಾಜ್ಯದಲ್ಲಿ ಯಾವುದೇ ರೀತಿಯ ರಸಗೊಬ್ಬರದ ಕೊರತೆ ಕಂಡು ಬಂದಿರುವುದಿಲ್ಲ ಎಂದು ಕೃಷಿ ಇಲಾಖೆ ಪ್ರಕಟಣೆ ತಿಳಿಸಿದೆ.

**ರಸಗೊಬ್ಬರ ಕೊರತೆಗೆ ಮೂಲ ಕಾರಣ:**

ಪ್ರಸ್ತಕ ಸಾಲಿನಲ್ಲಿ ಮಾತ್ರ ಆರಂಭಿಕ ಶುಲ್ಕ ಪರಿಗಣಿಸಿ, ಕೇಂದ್ರಸರ್ಕಾರದಿಂದ ರಸಗೊಬ್ಬರ ಹಂಚಿಕೆ ಮತ್ತು ಸರಬರಾಜು ಪ್ರಕ್ರಿಯೆ ಜರುಗಿಸಲಾಗುತ್ತಿದೆ. ಇದರಿಂದಾಗಿ ರಾಜ್ಯದಲ್ಲಿ ಯೂರಿಯಾ ರಸಗೊಬ್ಬರದ ಪ್ರಾರಂಬಿಕ ದಾಸ್ತಾನನ್ನು ಪರಿಗಣಿಸಿ, ಯೂರಿಯಾ ರಸಗೊಬ್ಬರದ ಕಡಿಮೆ ಹಂಚಿಕೆ ಮಾಡಿರುವುದು ಕೊರತೆಗೆ ಮೂಲ ಕಾರಣವಾಗಿದೆ.

ರಾಜ್ಯದ ಬೆಳೆ ಪದ್ಧತಿಯನ್ನು ಆಧರಿಸಿ ಮುಂಗಾರು ಹಂಗಾಮಿಗೆ ಮುಂಚಿತವಾಗಿ ಕೇಂದ್ರ ಸರ್ಕಾರಕ್ಕೆ 12.95 ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರ ಬೇಡಿಕೆಯನ್ನು ಸಲ್ಲಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರದಿಂದ 11.17 ಲಕ್ಷ ಮೆ.ಟನ್ ಹಂಚಿಕೆ ನಿಗದಿಪಡಿಸಲಾಗಿರುತ್ತದೆ.

ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 3.02 ಲಕ್ಷ ಮೆ.ಟನ್ ಡಿ.ಎ.ಪಿ ರಸಗೊಬ್ಬರದ ಬೇಡಿಕೆ ಇದ್ದು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 2.21 ಲಕ್ಷ ಮೆ.ಟನ್ ಸರಬರಾಜಾಗಿದ್ದು, ಇನ್ನೂ 81,000 ಮೆ.ಟನ್ ಸರಬರಾಜು ಬಾಕಿ ಇರುತ್ತದೆ.




ರಾಜ್ಯದಲ್ಲಿ ಡಿ.ಎ.ಪಿ. ಕೊರತೆ ಕಂಡು ಬಂದಾಗ ಕೃಷಿ ಸಚಿವರ ನಿರ್ದೇಶನದಂತೆ ಪರ್ಯಾಯ ರಸಗೊಬ್ಬರಗಳ ಬಳಕೆ ಕುರಿತು ರೈತರಲ್ಲಿ ಅರಿವು ಮೂಡಿಸಿ, ಪ್ರಸ್ತುತ, ಡಿ.ಎ.ಪಿ. ರಸಗೊಬ್ಬರದ ಕೊರತೆಯನ್ನು ನೀಗಿಸಲಾಗಿದೆ.

ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 6.80 ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಇದ್ದು, ಕೇಂದ್ರಸರ್ಕಾರದಿಂದ ಇಲ್ಲಿಯವರೆಗೆ 5.35 ಲಕ್ಷ ಮೆ.ಟನ್ ಸರಬರಾಜಾಗಿದ್ದು, ಇನ್ನೂ 1.45 ಲಕ್ಷ ಮೆ.ಟನ್ ಸರಬರಾಜು ಬಾಕಿ ಇರುತ್ತದೆ.

ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಸರಬರಾಜು ಮಾಡಿರುವ ರಸಗೊಬ್ಬರವನ್ನು ಸಮರ್ಪಕವಾಗಿ ಎಲ್ಲಾ ಜಿಲ್ಲೆಗಳಿಗೆ ಹಂಚಿಕೆ ಮಾಡಿ ರೈತರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿಭಾಯಿಸಲಾಗಿರುತ್ತದೆ.

**ರಾಜ್ಯದಿಂದ ರಸಗೊಬ್ಬರ ಪೂರೈಕೆಗೆ ಆರು ಬಾರಿ ಮನವಿ:**

ಕೇಂದ್ರ ರಸಗೊಬ್ಬರ ಇಲಾಖೆಯ ಅಧಿಕಾರಿಗಳಿಗೆ ಕೃಷಿ ಇಲಾಖೆ ವತಿಯಿಂದ ಏಪ್ರಿಲ್ ಮಾಹೆಯಿಂದ ಇಲ್ಲಿಯವರೆಗೆ ಆರು ಬಾರಿ ಪತ್ರಗಳನ್ನು ಬರೆದು ಹಂಚಿಕೆಗೆ ಅನುಗುಣವಾಗಿ ಅವಶ್ಯವಿರುವ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಲಾಗಿರುತ್ತದೆ.

ರಾಜ್ಯದ ಕೃಷಿ ಸಚಿವರು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ ಅಗತ್ಯವಿರುವ ಡಿ.ಎ.ಪಿ. ರಸಗೊಬ್ಬರದ ಪೂರೈಕೆಗೆ ಪತ್ರ ಮುಖೇನ ಮನವಿ ಸಲ್ಲಿಸಿದ್ದಾರೆ. ಅಲ್ಲದೇ, ಕೃಷಿ ಸಚಿವರೇ ಖುದ್ದಾಗಿ, ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವರನ್ನು ಇದೇ ಜುಲೈ 7 ರಂದು ಭೇಟಿ ಮಾಡಿ ಕೇಂದ್ರಸರ್ಕಾರದಿಂದ ಸಕಾಲದಲ್ಲಿ ಅಗತ್ಯವಿರುವ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಿರುತ್ತಾರೆ.

ರಾಜ್ಯದಲ್ಲಿ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರದ ಕಡಿಮೆ ಪೂರೈಕೆಯನ್ನು ಮನಗಂಡು, ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ, ರಾಜ್ಯಕ್ಕೆ ಅಗತ್ಯವಿರುವ ರಸಗೊಬ್ಬರ ಪೂರೈಕೆಗೆ ಜುಲೈ 17 ಮತ್ತು 25 ರಂದು ಪತ್ರ ಮುಖೇನ ಮನವಿ ಸಲ್ಲಿಸಿರುತ್ತಾರೆ. ಪ್ರಸ್ತುತ ಕೇಂದ್ರ ಸರ್ಕಾರದಿಂದ ಹಂಚಿಕೆಗನುಗುಣವಾಗಿ ಯೂರಿಯಾ ರಸಗೊಬ್ಬರವನ್ನು ಸರಬರಾಜು ಮಾಡದಿರುವುದರಿಂದ ರಾಜ್ಯದಲ್ಲಿ ಅಲ್ಲಲ್ಲಿ ಯೂರಿಯಾ ರಸಗೊಬ್ಬರದ ಕೊರತೆ ಕಂಡು ಬಂದಿರುತ್ತದೆ. ಈ ಸಂಬಂಧವಾಗಿ ರೈತರು ವಿವಿಧ ಜಿಲ್ಲೆಗಳಲ್ಲಿ ಯೂರಿಯಾ ರಸಗೊಬ್ಬರದ ಪೂರೈಕೆ ಬಗ್ಗೆ ಅಹವಾಲುಗಳನ್ನು ಸಲ್ಲಿಸಿರುತ್ತಾರೆ.

**ಯೂರಿಯಾ ಬೇಡಿಕೆ ಪ್ರಮುಖ ಕಾರಣಗಳು:**

ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಮುಂಚಿತವಾಗಿ ಉತ್ತಮ ಮಳೆಯಾಗಿದ್ದು, ಸಾಮಾನ್ಯ ಅವಧಿಗಿಂತ ಮುಂಚೆ ಬಿತ್ತನೆ ಪ್ರಾರಂಭವಾಗಿದೆ. ಇಲ್ಲಿಯವರೆಗೆ ಬಿತ್ತನೆ ವಿಸ್ತೀರ್ಣ ಹಿಂದಿನ ಸಾಲಿಗೆ ಹೋಲಿಸಿದಲ್ಲಿ ಹೆಚ್ಚಾಗಿರುತ್ತದೆ. ಹೆಚ್ಚು ರಸಗೊಬ್ಬರ ಅವಶ್ಯವಿರುವ ಮುಸುಕಿನ ಜೋಳದ ವಿಸ್ತೀರ್ಣವು ಅಂದಾಜು 2.00 ಲಕ್ಷ ಹೆಕ್ಟೇರ್ ಗಣನೀಯವಾಗಿ ಹೆಚ್ಚಳವಾಗಿದೆ. ಧಾರವಾಡ ಮತ್ತು ಗದಗ ಜಿಲ್ಲೆಗಳಲ್ಲಿ ಅಂದಾಜು 13,000 ಹೆಕ್ಟೇರ್ ಪ್ರದೇಶದಲ್ಲಿ ಮರುಬಿತ್ತನೆ ಕೈಗೊಳ್ಳಲಾಗಿರುತ್ತದೆ. ತುಂಗಭದ್ರಾ, ಕೃಷ್ಣಾ, ಕಾವೇರಿ ಇತ್ಯಾದಿ ಪ್ರಮುಖ ಜಲಾಶಯಗಳಿಂದ ಅವಧಿಗಿಂತ ಮುಂಚಿತವಾಗಿ ಅಚ್ಚುಕಟ್ಟು ಪ್ರದೇಶಗಳಿಗೆ ನೀರನ್ನು ಬಿಟ್ಟಿರುವುದರಿಂದ ಮುಂಚಿತವಾಗಿ ನಾಟಿ ಕೈಗೊಳ್ಳಲಾಗಿರುವುದು ಯೂರಿಯಾ ಮತ್ತು ರಸಗೊಬ್ಬರ ಬೇಡಿಕೆ ಪ್ರಮುಖ ಕಾರಣವಾಗಿದೆ.

ಇಲಾಖೆಯ ಅಧಿಕಾರಿಗಳು ಪ್ರತಿ ಮಂಗಳವಾರ ಕೇಂದ್ರ ಸರ್ಕಾರದಿಂದ ಜರುಗಿಸುವ ವಿಡಿಯೋ ಸಂವಾದದಲ್ಲಿ ರಾಜ್ಯಕ್ಕೆ ಅಗತ್ಯವಿರುವ ರಸಗೊಬ್ಬರಗಳ ಪೂರೈಕೆ ಮಾಡುವಂತೆ ಮನವಿ ಸಲ್ಲಿಸಿರುತ್ತಾರೆ. ಅಲ್ಲದೇ, ಕೇಂದ್ರ ಸರ್ಕಾರದ ರಸಗೊಬ್ಬರ ಇಲಾಖೆಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ರಾಜ್ಯದಲ್ಲಿ ಅವಶ್ಯವಿರುವ ರಸಗೊಬ್ಬರ ಪೂರೈಕೆಗೆ ಅವಶ್ಯ ಕ್ರಮ ವಹಿಸುತ್ತಿದ್ದಾರೆ.

ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಪರಿಸರ ಸ್ನೇಹಿಯಾಗಿರುವ ನ್ಯಾನೋ ರಸಗೊಬ್ಬರ ಬಳಕೆಗೆ ಇಲಾಖೆಯಿಂದ ವ್ಯಾಪಕ ಪ್ರಚಾರ ನೀಡಿ ಅರಿವು ಮೂಡಿಸಲಾಗುತ್ತಿದೆ. ಬೆಳೆ, ಮಣ್ಣು, ಮಾನವ, ಜಾನುವಾರು ಮತ್ತು ಪರಿಸರದ ಆರೋಗ್ಯದ ದೃಷ್ಟಿಯಿಂದ ಯೂರಿಯಾ ಬಳಕೆಯನ್ನು ಕಡಿತಗೊಳಿಸಲು ರೈತರಲ್ಲಿ ಮನವಿ ಮಾಡಲಾಗಿದೆ.

ಆರಂಭಿಕ ಶುಲ್ಕ ಪರಿಗಣಿಸದೆ ಕೊರತೆಯಾಗಿರುವ 81,000 ಮೆ.ಟನ್ ಡಿ.ಎ.ಪಿ. ಮತ್ತು 1,45,000 ಮೆ.ಟನ್. ಯೂರಿಯಾ ರಸಗೊಬ್ಬರವನ್ನು ಕೇಂದ್ರ ಸರ್ಕಾರವು ಪೂರೈಸಿದಲ್ಲಿ ರೈತರ ಬವಣೆ ನೀಗಿಸಬಹುದಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಸಹ ಅಗತ್ಯ ಕ್ರಮ ಜರುಗಿಸಬೇಕಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಅನಾಮಧೇಯ ಮೃತ ದೇಹ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.28–ನಗರದ ರೈಲ್ವೇ ಪೊಲೀಸ್ ಠಾಣೆಯ ವ್ಯಾಪ್ತಿಯ ಬಳ್ಳಾರಿ ಮತ್ತು ಗುಂತಕಲ್ಲು ಯಾರ್ಡ್ ರೈಲ್ವೇ ಕಿ.ಮೀ ನಂ 208/13 ಹತ್ತಿರ ಆಫ್‌ಲೈನ್ ರೈಲು ಹಳಿಯ ಮೇಲೆ ಸುಮಾರು 45–50 ವರ್ಷದ ಅನಾಮದೇಯ ವ್ಯಕ್ತಿಯು ಯಾವುದೋ ಕಾರಣದಿಂದ ರೈಲು ಹಳಿಯ ಮೇಲೆ ಅಡ್ಡಲಾಗಿ ಮಲಗಿ ಜು.28 ರಂದು ಆತ್ಮಹತ್ಯೆಯಿಂದ ಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಉಪ–ನೀರೀಕ್ಷಕರು ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.8 ಅಡಿ, ಕೋಲುಮುಖ, ಗೋದಿ ಮೈಬಣ್ಣ, ತೆಳ್ಳನೇಯ ಮೈಕಟ್ಟು ಹೊಂದಿದ್ದು, ಮೃತನ ತಲೆಯಲ್ಲಿ 01 ಇಂಚು ಕಪ್ಪು ಮತ್ತು ಬಿಳಿ ಮಿಶ್ರಿತ ಕೂದಲು ಮತ್ತು ಮುಖದಲ್ಲಿ 1/2 ಇಂಚು ಕಪ್ಪು ಮಿಶ್ರಿತ ಬಿಳಿ ಗಡ್ಡ, ಮೀಸೆ ಹೊಂದಿರುತ್ತಾನೆ.

ಮೃತನ ಮೈಮೇಲೆ ತಿಳಿ ಗುಲಾಬಿ ಬಣ್ಣದ ಆಫ್ ಟಿ–ಶರ್ಟ್, ನೀಲಿ ಬಣ್ಣದ ಹೂವಿನ ಚಿತ್ರವುಳ್ಳ ಲುಂಗಿ ಧರಿಸಿರುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ಉಪನಿರೀಕ್ಷಕರ ಮೊ.9480802131, ರೈಲ್ವೇ ಪೊಲೀಸ್ ವೃತ್ತ ರಾಯಚೂರು ಮೊ.9480800471 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧರ್ಮದ ಹಾದಿಯಲಿ ಸಾಗೋಣ ಶ್ರೀ ಬಸವಲಿಂಗೇಶ್ವರ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ಮನುಷ್ಯ ತನ್ನ ಬದುಕಿನಲ್ಲಿ ಧರ್ಮದ ಹಾದಿಯಲ್ಲಿ ಸಾಗಿದಾಗ ಮಾತ್ರ ಮುಕ್ತಿ ಹೊಂದಲು ಸಾಧ್ಯ ಎಂದು ಯಲಬುರ್ಗಾ ಪಟ್ಟಣದ ಶ್ರೀಧರ ಮುರಡಿ ಹಿರೇಮಠದ ಬಸವಲಿಂಗೇಶ್ವರ ಮಹಾಸ್ವಾಮಿಜಿ ಹೇಳಿದರು.

ಅವರು ಕುಕನೂರ ಪಟ್ಟಣದ ಮುಂಡರಗಿ ಅನ್ನದಾನೀಶ್ವರ ಶಾಖಾಮಠದಲ್ಲಿ ನಾಗದೇವರ, ಗಣೇಶ ಮತ್ತು ಲಕ್ಷ್ಮಿಯ ದೇವಿಯ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮ ನೆರವೇರಿಸಿ ಮಾತನಾಡುತ್ತಾ ಸಮಾಜದಲ್ಲಿ ಮನುಷ್ಯ ಎತ್ತರಕ್ಕೆ ಬೆಳೆಯಬೇಕಾದರೆ ಧರ್ಮ ಅವಶ್ಯ ಧರ್ಮದಿಂದ ನಡೆದರೆ ಮಾತ್ರ ದೊಡ್ಡವನಾಗಲು ಸಾಧ್ಯ ಎಂದರು.

ನಂತರ ಮಾತನಾಡಿದ ಶ್ರೀಮಠದ ಆಡಳಿತಾಧಿಕಾರಿ ಸಂಗಮೇಶ ಕಲ್ಮಠ ದೇವರ ಧ್ಯಾನ ಪೂಜೆಗಳಿಂದ ಮನಸ್ಸಿನಲ್ಲಿ ಆನಂದ ಉಂಟಾಗುತ್ತದೆ, ಭಕ್ತಿಯಿಂದ ಮಾತ್ರ ಏನಾದರೂ ಸಾಧಿಸಲು ಸಾಧ್ಯ, ಗುರುವಿನ ಕೃಪೆಯಿಂದ ನಮ್ಮ ಜೀವನ ಸುಧಾರಿಸಲು ಸಾಧ್ಯವಾಗುತ್ತದೆ ಎಂದರು.

ಗದಿಗೆಪ್ಪ ಪವಾಡಶೆಟ್ಟಿ ಮಾತನಾಡಿ ಶ್ರಾವಣ ಮಾಸ ಹಿಂದೂಗಳಿಗೆ ಶ್ರೇಷ್ಠವಾದ ಮಾಸ, ಈ ತಿಂಗಳಲ್ಲಿ ಪೂಜೆ ಪ್ರವಚನದಂತಹ ಧರ್ಮದ ಕಾರ್ಯಗಳಿಗೆ ಜನರು ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಬ್ರಾಹ್ಮಿ ಮುಹೂರ್ತದಲ್ಲಿ ಯಲಬುರ್ಗಾ ಪೂಜ್ಯರು ದೇವರ ಮೂರ್ತಿಗಳನ್ನ ಸ್ಥಾಪಿಸಿ ಪೂಜಾ ವಿಧಿ ವಿಧಾನ ನೆರವೇರಿಸಿದರು ನಂತರ ಭಕ್ತರಿಗೆ ಮಹಾದಾಸೋಹ ನಡೆಯಿತು.

ಪೂಜ್ಯ ಮಹಾದೇವ ಸ್ವಾಮೀಜಿ, ಪ್ರಭುಶಿವಸಿಂಪರ, ಶಿವು ಯತ್ನಟ್ಟಿ, ನಾಗರಾಜ ಚರಂತಿಮಠ, ನಿರಂಜನ ಯತ್ನಟ್ಟಿ, ಈರಣ್ಣ ಶಿರೂರ, ಬಸವರಾಜ ಬೆದವಟ್ಟಿ, ಶ್ರೀಮತಿ ಉಮಾ ರೋಣದ, ಆನಂದ ಮಡಿವಾಳರ, ಸೋಮಣ್ಣ ಅರಕೇರಿ ಮತ್ತು ಇತರರು ಇದ್ದರು.

# ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳವರ ಟ್ರಸ್ಟ್ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನ ಮಂಗಳೂರು ಗ್ರಾಮದ ಶಾಂತಿನಿಕೇತನ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳವರ ಟ್ರಸ್ಟ್ ಕಮಿಟಿ ಉದ್ಘಾಟನೆಯನ್ನು ವೇದಮೂರ್ತಿ ರೇವಣಸಿದ್ದಯ್ಯ ಅರಳಲೆಹಿರೇಮಠ ಇವರ ದಿವ್ಯ ಸಾನಿಧ್ಯದಲ್ಲಿ ಸಸಿಗೆ ನೀರು ಹಾಕುವ ಮೂಲಕ ನೂತನ ಟ್ರಸ್ಟ್ ಕಮಿಟಿ ಪದಾಧಿಕಾರಿಗಳ ಉದ್ಘಾಟನೆ ಮಾಡಲಾಯಿತು.

ನಂತರ ವಿಶ್ವನಾಥ ಮರಿಬಸಪ್ಪನವರ ಮಾತನಾಡಿ ನಮ್ಮ ಗ್ರಾಮದಲ್ಲಿ ಲಿಂ. ಪಂಡಿತ ಪುಟ್ಟರಾಜ ಗವಾಯಿಗಳ ಪರಮಭಕ್ತರಾಗಿದ್ದ ದಿ.ವಿರೂಪಾಕ್ಷಪ್ಪ ದೇವಬಸಪ್ಪನವರ(ಬ್ಯಾಳಿ) ಇವರ ಸ್ಮರಣಾರ್ಥ ಇವರ ಮಕ್ಕಳಾದ ಶರಣಪ್ಪ ದೇವಬಸಪ್ಪನವರ(ಬ್ಯಾಳಿ) ಶಂಭು ದೇವಬಸಪ್ಪನವರ(ಬ್ಯಾಳಿ) ಇವರು ಅಪಾರ ಬೆಲೆ ಬಾಳುವ ನಿವೇಶನವನ್ನು ಉಚಿತವಾಗಿ ಲಿಂ. ಪಂಡಿತ ಪುಟ್ಟರಾಜ ಗವಾಯಿಗಳ ನೂತನ ದೇವಸ್ಥಾನ ಕಟ್ಟಲು ಭೂಮಿ ನೀಡಿರುವುದು ಶ್ಲಾಘನೀಯ ಕಾರ್ಯ ಎಂದವರು ಹೇಳಿದರು. ಈ ಜಾಗದಲ್ಲಿ ಮಂಗಳೂರು ಗ್ರಾಮದ ನೂತನ ಟ್ರಸ್ಟ್ ಕಮಿಟಿಯವರು ಹಾಗೂ ಭಕ್ತರು ಎಲ್ಲರೂ ಸೇರಿಕೊಂಡು ಮುಂದಿನ ದಿನಗಳಲ್ಲಿ ನೂತನ ದೇವಸ್ಥಾನ ಕಟ್ಟಲು ತನು ಮನ ಧನದಿಂದ ಸೇವೆ ಮಾಡುವುದಾಗಿ ಈ ಸಂದರ್ಭದಲ್ಲಿ ಹೇಳಿದರು.

ಶಿವಪುತ್ರಪ್ಪ ಶಿವಶಿಂಪಿ ಹಿರಿಯ ರಂಗಭೂಮಿ ಕಲಾವಿದರು ಮಾತನಾಡಿ ನಮ್ಮ ಗ್ರಾಮದಲ್ಲಿ ಲಿಂ. ಪಂಡಿತ ಪುಟ್ಟರಾಜ ಗವಾಯಿಗಳ ನೂತನ ದೇವಸ್ಥಾನ ನಿರ್ಮಾಣ ಮಾಡಲು ಎಲ್ಲಾ ಭಕ್ತರ ಸಹಕಾರ ಅತ್ಯಗತ್ಯವಾಗಿದೆ ಎಂದರು. ನಮ್ಮ ಮಂಗಳೂರು ಗ್ರಾಮ ಕಲಾವಿದರ ತವರೂರು ಈ ಗ್ರಾಮದಲ್ಲಿ ಹಿಂದೆ ಗವಾಯಿಗಳವರ ನಾಟಕ ಕಂಪನಿ ಇದೇ ಗ್ರಾಮದಲ್ಲಿ ಶ್ರೀ ಶಿವಶರಣೆ ಅಕ್ಕಮಹಾದೇವಿ ನಾಟಕ ಸುಮಾರು ಒಂದು 121 ನಾಟಕ ಪ್ರಯೋಗ ನಡೆದಿರುವುದು ಸಂತೋಷಸದ ಸಂಗತಿ ಎಂದು ಹೇಳಿದರು.

ಶರಣಪ್ಪ ಉಮಚಗಿ ಉಪನ್ಯಾಸಕರು ಪ್ರಾಸ್ತಾವಿಕ ಮಾತುಗಳನ್ನಾಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ಸಕ್ರಪ್ಪ ಮಂಗಳಪ್ಪ ಚಿನ್ನೂರು ಉಪಾಧ್ಯಕ್ಷ ಅನ್ನಪೂರ್ಣ ಸುರೇಶ ಮ್ಯಾಗಳೇಶಿ ಹಾಗೂ ಸರ್ವ ಸದಸ್ಯರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರು ಶರಣಪ್ಪ ಹ್ಯಾಟಿ, ನಿರ್ದೇಶಕರಾದ ಶಂಕ್ರಪ್ಪ ಉಳ್ಳಾಗಡ್ಡಿ, ಲಿಂಗರಾಜ ವಿವೇಕಿ, ಶೇಖರಗೌಡ್ರ ಮಾಲಿಪಾಟೀಲ, ಅನಿಲ ಕಲ್ಲಭಾವಿ ಪತ್ರಕರ್ತರು, ಪ್ರಸನ್ನ ಅರಳಲೆಹಿರೇಮಠ ಪತ್ರಕರ್ತರು, ಶರಣಪ್ಪ ದೇವಬಸಪ್ಪನವರ(ಬ್ಯಾಳಿ), ನಿಂಗನಗೌಡ್ರ ಪೋಲೀಸಪಾಟೀಲ, ಮಂಗಳೇಶಯ್ಯ ವಣಗೇರಿಮಠ, ವಿರೇಶ ಉಮಚಗಿ, ಸುರೇಶ ಮ್ಯಾಗಳೇಶಿ, ಗಂಗಾಧರ ಕುದ್ರಿಮೋತಿ, ಶರಣಪ್ಪ ಕಲ್ಲೂರ, ಮಂಜುನಾಥ ವಿವೇಕಿ, ಶರಣಪ್ಪ ಬಳಿಗಾರ.

ಕಾರ್ಯಕ್ರಮದ ಸ್ವಾಗತ ನಿರ್ವಹಣೆ ರವೀಂದ್ರನಾಥ ಕೊಟ್ರಪ್ಪ ತೋಟದ ಪತ್ರಕರ್ತರು ನಿರ್ವಹಿಸಿದರು. ಕೊನೆಗೆ ಪ್ರಕಾಶ ಚಿನ್ನೂರು ಆಭಾರ ಮನ್ನಿಸಿದರು.

ಮಂಗಳೂರು ಗ್ರಾಮದ ನೂತನ ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳ ಟ್ರಸ್ಟ್ ಕಮಿಟಿ ಅಧ್ಯಕ್ಷರಾದ ಶೇಖರಗೌಡ್ರ, ಸಂಗನಗೌಡ್ರ ಪೊಲೀಸಪಾಟೀಲ, ಉಪಾಧ್ಯಕ್ಷರಾದ ಶಿವಪುತ್ರಪ್ಪ ಶಿವಸಿಂಪಿ, ಪ್ರಧಾನ ಕಾರ್ಯದರ್ಶಿ ನಿಂಗನಗೌಡ್ರ ಎಸ್ ಮಾಲಿಪಾಟೀಲ, ಖಜಾಂಚಿ ರಾಜೇಂದ್ರ ಚಿನ್ನೂರು, ಸಹ ಕಾರ್ಯದರ್ಶಿ ವೀರೇಶ ವಿರೂಪಾಕ್ಷಪ್ಪ ಉಮಚಗಿ, ನಿರ್ದೇಶಕರುಗಳಾದ ಶರಣಯ್ಯ ಕಲ್ಮಠ ಮಾಬುಸಾಬ ನೂರಭಾಷ, ಚನ್ನಬಸಪ್ಪ ದೇವಬಸಪ್ಪನವರ , ಸುಜಾತಾ ಮಹೇಶ ಬಂಡ್ರಕಲ್, ಲಿಂಗರಾಜ ಶರಣಪ್ಪ ವಿವೇಕಿ, ಮಂಜುಳಾ ವಿಶ್ವನಾಥ ಮರಿಬಸಪ್ಪನವರ, ಮಂಗಳೇಶ ಯತ್ನಟ್ಟಿ, ಮುದಕಯ್ಯ ವಣಗೇರಿಮಠ, ಹನುಮವ್ವ ಮಂಗಳೇಶಪ್ಪ ಯಲಿಗಾರ, ಪ್ರಕಾಶ ಬೆಲ್ಲದ, ರವೀಂದ್ರನಾಥ ಕೊಟ್ರಪ್ಪ ತೋಟದ, ಗೌರವ ಸಲಹೆಗಾರರು ಸುರೇಶ ಮಡಿವಾಳರ, ಶರಣಪ್ಪ ವೀ. ಉಮಚಗಿ, ವಿರೇಶ ಮ್ಯಾಗಳೇಶಿ, ಯೋಗಪ್ಪ ಪೂಜಾರ ಇದ್ದರು.

## ಚೆಸ್ ಸ್ಪರ್ಧೆ-ಕೃಷ್ಣಾರೆಡ್ಡಿ ರಾಷ್ಟ್ರಮಟ್ಟಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28-ಭಾರತೀಯ ಜೀವ ವಿಮಾ ನಿಗಮದ ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳನ್ನೊಳಗೊಂಡ ವಲಯ ಮಟ್ಟದ ಚೆಸ್ ಚಾಂಪಿಯನ್ ಸ್ಪರ್ಧೆಯಲ್ಲಿ ಬೆಳಗಾವಿ ವಿಭಾಗದಿಂದ ಭಾಗವಹಿಸಿದ್ದ ಬಾಗಲಕೋಟೆ ಶಾಖೆಯ ಉದ್ಯೋಗಿ ಆರ್. ಕೃಷ್ಣಾರೆಡ್ಡಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ರಾಜಮುಂಡ್ರೆಯಲ್ಲಿ ಜರುಗಿದ ವಲಯ ಮಟ್ಟದ ಚೆಸ್ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಪಡೆದಿರುವ ಕೃಷ್ಣಾರೆಡ್ಡಿ, ನವ್ಹಂಬರನಲ್ಲಿ ಮುಂಬೈಯಲ್ಲಿ ನಡೆಯುವ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಎಲ್‌ಐಸಿ ಬಾಗಲಕೋಟೆ ಶಾಖೆಯ ವ್ಯವಸ್ಥಾಪಕ ಎಂ.ಡಿ.ರಕ್ಷಿತ ತಿಳಿಸಿದ್ದಾರೆ.

## ಜಿ.ಪಂ ನಿಂದ ಸಹಾಯವಾಣಿ ಪ್ರಾರಂಭ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 28- ಜಿಲ್ಲಾ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಹಾಗೂ ಜಿಲ್ಲಾ ಪಂಚಾಯತಿ ಅಧೀನದ ಇಲಾಖೆಗಳಿಂದ ಒದಗಿಸಲಾಗುವ ಸೇವೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರ ದೂರುಗಳನ್ನು ಆಲಿಸಲು ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ಸಹಾಯವಾಣಿ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರು ಸದಪಯೋಗಪಡಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ತಿಳಿಸಿದ್ದಾರೆ.

ಜಿಲ್ಲೆಯ ಸಾರ್ವಜನಿಕರು ಕಚೇರಿ ಸಮಯ ಬೆಳಿಗ್ಗೆ 10 ರಿಂದ ಸಂಜೆ 5.30ರವರೆಗೆ ರಜಾ ದಿನಗಳನ್ನು ಹೊರತುಪಡಿಸಿ ಸಹಾಯವಾಣಿ ಸಂಖ್ಯೆ:08532-230539ಗೆ ಕರೆ ಮುಖಾಂತರ ಅಹ್ವಾಲುಗಳನ್ನು ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಗಲಕೋಟೆಯಲ್ಲಿ ಚಿಕ್ಕಮಕ್ಕಳ ನರರೋಗ ತಜ್ಞರ ಸಮ್ಮೇಳನ:
## ಚಿಕ್ಕಮಕ್ಕಳ ನರಸಂಬಂಧಿ ಕಾಯಿಲೆಗೆ ಸೂಕ್ತ ಚಿಕಿತ್ಸೆ ಅಗತ್ಯ-ಡಾ.ಸುರೇಶರಾವ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28-ಚಿಕ್ಕಮಕ್ಕಳಲ್ಲಿ ಕಾಣಿಸಿಕೊಳ್ಳುವ ಅನೇಕ ಪ್ರಕಾರದ ನರಸಂಬಂಧಿ ಕಾಯಿಲೆಗಳಿಗೆ ಆರಂಭದ ಹಂತದಲ್ಲೇ ಸೂಕ್ತ ಚಿಕಿತ್ಸೆ ನೀಡುವುದು ಅಗತ್ಯವಾಗಿದೆ ಎಂದು ಬೆಂಗಳೂರಿನ ಚಿಕ್ಕಮಕ್ಕಳ ನರರೋಗ ತಜ್ಞಡಾ.ಸುರೇಶರಾವ್ ಅರೂರ್ ಅಭಿಪ್ರಾಯಪಟ್ಟರು.

ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಚಿಕ್ಕಮಕ್ಕಳ ವಿಭಾಗ, ಕರ್ನಾಟಕ ಅಕಾಡೆಮಿ ಆಫ್ ಪಿಡಿಯಾಟ್ರಿಕ್ ನ್ಯೂರಾಲಜಿ ಮತ್ತು ಇಂಡಿಯನ್ ಅಕಾಡೆಮಿ ಆಫ್ ಪಿಡಿಯಾಟ್ರಿಕ್ ಬಾಗಲಕೋಟೆ ಶಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ರವಿವಾರ ಆಯೋಜಿಸಿದ್ದ ರಾಜ್ಯಮಟ್ಟದ ಚಿಕ್ಕಮಕ್ಕಳ ನರರೋಗ ತಜ್ಞರ 10ನೇ ವಾರ್ಷಿಕ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಚಿಕ್ಕಮಕ್ಕಳ ನರರೋಗ ಶಾಸ್ತ್ರಕ್ಕೆ ಐದು ದಶಕಗಳ ಹಿನ್ನೆಲೆ ಇದೆ. 50 ವರ್ಷಗಳ ಹಿಂದೆ ಚಿಕ್ಕಮಕ್ಕಳ ನರ-ರೋಗ ತಜ್ಞರ ಸಂಖ್ಯೆ ಕಡಿಮೆಯಿತ್ತು. ಈಚಿನ ದಿನಗಳಲ್ಲಿ ಮಕ್ಕಳಲ್ಲಿ ನರಸಂಬಂಧಿತ ಕಾಯಿಲೆಗಳು ಹೆಚ್ಚು ಕಾಣಿಸಿಕೊಳ್ಳುತ್ತಿರುವ ಪರಿಣಾಮವಾಗಿ ಪ್ರಸ್ತುತ ಚಿಕ್ಕಮಕ್ಕಳ ನರರೋಗಶಾಸ್ತ್ರದ ವ್ಯಾಪ್ತಿ ವಿಸ್ತರಿಸಿದೆ. ವಿಷಯದ ಬೆಳವಣಿಗೆಗೆ ಅನುಗುಣವಾಗಿ ತಜ್ಞರ ಸಂಖ್ಯೆ ಕೂಡ ಹೆಚ್ಚಿದೆ ಎಂದು ಅವರು ಹೇಳಿದ ಅವರು, ನರರೋಗ ಶಾಸ್ತ್ರದಲ್ಲಿ ಈಗ ಹೆಚ್ಚಿನ ಸಂಶೋಧನೆಗಳು ಸಹ ಆಗುತ್ತಿವೆ. ಇದರ ಪರಿಣಾಮ ನರರೋಗ ಕಾಯಿಲೆಗೆ ಚಿಕಿತ್ಸೆಯ ಹೊಸ ಹೊಸ ವಿಧಾನಗಳು ಬೆಳಕಿಗೆ ಬರುತ್ತಿವೆ ಎಂದು ಹೇಳಿದರು.

ಅತಿಥಿ ಕರ್ನಾಟಕ ಅಕಾಡೆಮಿ ಆಫ್ ಪಿಡಿಯಾಟ್ರಿಕ್ ನ್ಯೂರಾಲಜಿಯ ಅಧ್ಯಕ್ಷ ಡಾ.ಸಿ.ಪಿ.ರವಿಕುಮಾರ ಮಾತನಾಡಿ, ಚಿಕ್ಕಮಕ್ಕಳ ನರರೋಗಶಾಸ್ತ್ರ ಕೇವಲ ಮಕ್ಕಳಲ್ಲಿ ಕಂಡುಬರುವ ಚಲನೆಯ ಅಸ್ವಸ್ಥತೆಗೆ ಸಂಬಂಧಿಸಿದ್ದಲ್ಲ. ಮಕ್ಕಳಲ್ಲಿನ ವಿವಿಧ ಪ್ರಕಾರದ ನರರೋಗ ಕಾಯಿಲೆಗಳಿಗೆ ಸಂಬಂಧಿಸಿದೆ. ಚಿಕ್ಕಮಕ್ಕಳ ನರರೋಗಶಾಸ್ತ್ರದ ವಿಷಯದಲ್ಲಿ ಹೊಸ ಹೊಸ ಸಂಶೋಧನೆಗಳು ನಿರಂತರವಾಗಿ ನಡೆಯುತ್ತಿವೆ ಹೀಗಾಗಿ ತಜ್ಞರ ಸಂಖ್ಯೆಯೂ ಹೆಚ್ಚಿದೆ ಎಂದರು.



ಸಮ್ಮೇಳನದಲ್ಲಿ ದೇಶದ ವಿವಿಧ ಭಾಗಗಳ ಸುಮಾರು 200 ಚಿಕ್ಕಮಕ್ಕಳ ತಜ್ಞರು, ಚಿಕ್ಕಮಕ್ಕಳ ನರರೋಗ ತಜ್ಞರು, ಸ್ನಾತ-ಕೋತ್ತರ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.
ಚಿಕ್ಕಮಕ್ಕಳ ನರರೋಗಗಳ ಕುರಿತು ಸಮ್ಮೇಳನದಲ್ಲಿ ಸಂಶೋಧನಾ ಲೇಖನಗಳನ್ನು ಮಂಡಿಸಲಾಯಿತಲ್ಲದೇ, ಪರಿಣಿತರು ಉಪನ್ಯಾಸ ನೀಡಿದರು. ವಿವಿಧ ಕಂಪನಿಗಳ ವೈದ್ಯಕೀಯ ಉಪಕರಣಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಹಾಕಲಾಗಿತ್ತು.

ಅಧ್ಯಕ್ಷತೆ ವಹಿಸಿದ್ದ ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ಸಮ್ಮೇಳನದಲ್ಲಿ ಚಿಕ್ಕಮಕ್ಕಳ ನರರೋಗಶಾಸ್ತ್ರದಲ್ಲಿನ ಹೊಸ ಹೊಸ ಅವಿಷ್ಕಾರಗಳ ಕುರಿತು ಚರ್ಚೆಯಾಗಲಿ. ಚರ್ಚೆ ಹಾಗೂ ಸಂವಾದಗಳಿಂದ ಚಿಕ್ಕಮಕ್ಕಳ ಕಾಯಿಲೆಗಳಿಗೆ ಅಗತ್ಯದ ಚಿಕಿತ್ಸಾ ವಿಧಾನಗಳು ಬೆಳಕಿಗೆ ಬರಲಿ ಎಂದು ಹೇಳಿದರು.

ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ, ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಕರ್ನಾಟಕ ಅಕಾಡೆಮಿ ಆಫ್ ಪಿಡಿಯಾಟ್ರಿಕ್ ನ್ಯೂರಾಲಜಿಯ ಕಾರ್ಯದರ್ಶಿ ಡಾ.ಕಿಶೋರ ಕೋಥಾ, ಸಮ್ಮೇಳನ ಕಾರ್ಯಾಧ್ಯಕ್ಷ ಡಾ.ಅಶೋಕ ಬಡಕಲಿ ಮತ್ತು ಡಾ.ಕೆಲುಡೆಪ್ಪಾ ತಳವಾರ, ಕಾರ್ಯದರ್ಶಿ ಡಾ.ರಮೇಶ ಪೋಳ, ಡಾ.ಶ್ರೀಕಾಂತ ಅರಷಿನಗೋಡಿ, ಡಾ.ರಮೇಶ ಪತ್ತಾರ ಮತ್ತು ಚಿಕ್ಕಮಕ್ಕಳ ತಜ್ಞರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಪುರಾಣ, ಪ್ರವಚನ ಆಲಿಕೆಯಿಂದ ಬದುಕಿಗೆ ನೆಮ್ಮದಿ-ಶಿವಕುಮಾರ ಸ್ವಾಮೀಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28-ಶರಣರು, ಮಹಾತ್ಮರ ತತ್ವದಾರ್ಶಗಳನ್ನು ಶ್ರವಣ ಮಾಡಿ ಬದುಕಿನಲ್ಲಿ ನೆಮ್ಮದಿ, ಬದಲಾವಣೆ ತಂದುಕೊಳ್ಳುವುದೇ ಪುರಾಣ, ಪ್ರವಚನ ಆಲಿಸುವ ಉದ್ದೇಶ ಎಂದು ಕೆರೂರಿನ ಚರಂತಿಮಠ ಡಾ.ಶಿವಕುಮಾರ ಸ್ವಾಮೀಜಿ ಹೇಳಿದರು.

ಶ್ರಾವಣ ಮಾಸದ ನಿಮಿತ್ತ ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಕಣವಿ ವೀರಭದ್ರಶ್ವೇರ ಟ್ರಸ್ಟ್ ಹಾಗೂ ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದಿಂದ ನಡೆಯುತ್ತಿರುವ ಮಹಾಯೋಗಿ ಪೂಜ್ಯ ಅಲ್ಲೀಪುರ ಮಹಾದೇವ ತಾತನವರ ಪುರಾಣ ಪ್ರವಚಣ ಉದ್ಘಾಟನಾ ಕಾರ್ಯಕ್ರಮದ ಸಾನಿಧ್ಯ ವಹಿಸಿ ಪೂಜ್ಯರು ಆಶೀರ್ವಚನ ನೀಡಿದರು.


ನವವಿಧ ಭಕ್ತಿಗಳಲ್ಲಿ ಶ್ರವಣವಿಧ ಭಕ್ತಿ ಪ್ರಧಾನವಾಗಿದ್ದು. ಹಿರಿಯರು ಆಧ್ಯಾತ್ಮದ ಸಾಧನೆಗೆ ಶ್ರಾವಣ ಮಾಸವನ್ನು ಮೀಸಲಾಗಿಟ್ಟಿದ್ದು, ತಿಂಗಳ ಕಾಲ ನಡೆಯುವ ಪ್ರವಚನ, ಪುರಾಣಗಳನ್ನು ಮನುಷ್ಯ ಆಲಿಸುವುದರಿಂದ ಬದುಕಿನಲ್ಲಿ ಶಾಂತಿ, ನೆಮ್ಮದಿ ಪಡೆದು ಆಧ್ಯಾತ್ಮ ಜೀವಿಯಾಗಿ ಬಾಳುವುದಕ್ಕೆ ಅವಕಾಶವಿದೆ ಎಂದು ಪೂಜ್ಯರು ಹೇಳಿದರು.

ಜ್ಯೋತಿ ಬೆಳಗಿಸಿ ಪ್ರವಚನಕ್ಕೆ ಚಾಲನೆ ನೀಡಿದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ಒಳ್ಳೆಯ ನುಡಿಗಳನ್ನು ಶ್ರವಣ ಮಾಡುವ ಮಾಸವೇ ಶ್ರಾವಣ ಮಾಸ, ನಮ್ಮ ಸಾಂಸ್ಕೃತಿಕ ಹಬ್ಬಗಳ ಆಚರಣೆಯಲ್ಲಿ ಶ್ರಾವಣ ಮಾಸ ಅತ್ಯಂತ ಪವಿತ್ರವಾಗಿದೆ. ಅಲ್ಲೀಪುರ ಮಹಾದೇವ ತಾತ ಮಹಿಮಾ ಪುರುಷರು. ಅವರ ಕುರಿತ ಪ್ರವಚನ ಆಲಿಸುವುದು ಭಾಗ್ಯ ಎಂದರು. ಮಹೇಶ ಅಥಣಿ, ಜಿ.ಎನ್.ಪಾಟೀಲ, ಪ್ರಕಾಶ ರೇವಡಿಗಾರ, ಪಂಡಿತ ಅರಬ್ಬಿ ಇದ್ದರು.

ಬೀಳಗಿ ಕಲ್ಮಠದ ಪೂಜ್ಯ ಗುರುಪಾದ ಶಿವಾಚಾರ್ಯರು ಪುರಾಣ ಪ್ರವಚಣ ನಡೆಸಿಕೊಡುತ್ತಿದ್ದಾರೆ. ಹಿರಿಯ ಕಲಾವಿದರಾದ ಡಾ.ಸಿದ್ದರಾಮಯ್ಯ ಮಠಪತಿ, ಡಾ.ರೇವಣಸಿದ್ದ ಬೆಣ್ಣೂರ, ಡಾ.ಕಾಶಿಲಿಂಗ ಮಠ ಸಂಗೀತ ದಾಸೋಹ ಸೇವೆ ನಡೆಯುತ್ತಿದೆ.

## ಬಸವೇಶ್ವರ ಸಹಕಾರಿ ಬ್ಯಾಂಕಿಗೆ 2.36 ಕೋಟಿ ರೂ.ನಿವ್ವಳ ಲಾಭ

ಮಲ್ಲಮ್ಮ ನುಡಿ ವಾರ್ತೆ



ಬಾಗಲಕೋಟೆ,ಜು.28-ನಗರದ ಬಸವೇಶ್ವರ ಸಹಕಾರಿ ಬ್ಯಾಂಕು 2025 ಮಾರ್ಚ ಅಂತ್ಯಕ್ಕೆ 2.36 ಕೋಟಿ ರೂ. ನಿವ್ವಳ ಲಾಭ ಗಳಿಸಿದ್ದು, 610 ಕೋಟಿ ಸಾಲ ವಿತರಣೆ ಮಾಡಿದೆ ಎಂದು ಬ್ಯಾಂಕಿನ ಅಧ್ಯಕ್ಷ ಪ್ರಕಾಶ ತಪಶೆಟ್ಟಿ ಹೇಳಿದರು.

ರವಿವಾರ ಬ್ಯಾಂಕ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಐದು ಜಿಲ್ಲೆಗಳಲ್ಲಿ 27 ಶಾಖೆಗಳನ್ನು ಹೊಂದಿರುವ ಬ್ಯಾಂಕು, ಠೇವು ಸಂಗ್ರಹಣೆಯಲ್ಲಿ ಹೆಚ್ಚಿನ ಪ್ರಗತಿ ಸಾಧಿಸಿದೆ. ನಿಷ್ಕ್ರೀಯ ಸಾಲಗಳ ಪ್ರಮಾಣ ಶೇ.4.81 ರಷ್ಟು ಇದೆ ಎಂದರು. ಕಳೆದ ಮಾರ್ಚ ಅಂತ್ಯದ ಅಂಕಿ ಸಂಖ್ಯೆಗಳ ಪ್ರಕಾರ ಬ್ಯಾಂಕು 44545 ಸದಸ್ಯರನ್ನು ಹೊಂದಿದ್ದು, 34 ಕೋಟಿ ರೂ.ಗಳ ಶೇಅರು ಬಂಡವಾಳ, 95 ಕೋಟಿ ರೂ.ಗಳ ನಿಧಿಗಳು, 1131 ಕೋಟಿ ರೂ.ಗಳ ದುಡಿಯುವ ಬಂಡವಾಳ, 987 ಕೋಟಿ ಠೇವು ಹೊಂದಿದ್ದು, 610 ಕೋಟಿ ರೂ.ಗಳ ಸಾಲವನ್ನು ವಿತರಣೆ ಮಾಡಿದೆ ಎಂದು ಅವರು ತಿಳಿಸಿದರು.

ಬ್ಯಾಂಕಿನ ವ್ಯವಹಾರದಲ್ಲಿ ನೂತನ ತಂತ್ರಜ್ಞಾನ ಅಳವಡಿಕೆ ಮಾಡಲಾಗಿದ್ದು, ಮೊಬೈಲ್ ಮೂಲಕ ಇ-ಸ್ಟೇಟಮೆಂಟ, ನೆಫ್ಟ್, ಆರ್ ಟಿಜಿಎಸ್ ಮೂಲಕ ಹಣ ವರ್ಗಾವಣೆ ಮಾಡಿದ ದಾಖಲೆಯನ್ನು ಪರಿಶೀಲನೆ ಮಾಡಬಹುದಾಗಿದೆ. ಯುಪಿಐ ಹಣ ವರ್ಗಾವಣೆ ವ್ಯವಸ್ಥೆಯನ್ನು ಪ್ರಾರಂಭಿಸಲಾಗಿದೆ ಎಂದು ತಪಶೆಟ್ಟಿ ತಿಳಿಸಿದರು.

108 ವರ್ಷಗಳ ಹಿಂದೆ ಪ್ರಾರಂಭವಾಗಿರುವ ಬ್ಯಾಂಕು ವರ್ಷದಿಂದ ವರ್ಷಕ್ಕೆ ಪ್ರಗತಿಯನ್ನು ಸಾಧಿಸುತ್ತ ಮುನ್ನಡೆದಿದ್ದು, 2025-26 ನೇ ಸಾಲಿನಲ್ಲಿ ಈಗಿರುವ ಸದಸ್ಯರ ಸಂಖ್ಯೆಯನ್ನು ಪ್ರತಿಶತ 5 ರಷ್ಟು ಹಾಗೂ ಠೇವು ಸಂಗ್ರಹಣೆಯನ್ನು ಪ್ರತಿಶತ 10 ರಷ್ಟು ಮತ್ತು ಸಾಲ ಬಡವಡೆಯಲ್ಲೂ ಪ್ರತಿಶತ 20 ರಷ್ಟು ಹೆಚ್ಚಳ ಮಾಡುವ ಯೋಜನೆ ಹೊಂದಲಾಗಿದೆ ಎಂದ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಬ್ಯಾಂಕಿನ ಪ್ರಗತಿಯಲ್ಲಿ ಎಲ್ಲ ಶಾಖೆಗಳ ಸಿಬ್ಬಂದಿ ವರ್ಗದ ಪರಿಶ್ರಮವಿದೆ. ಜನರು ಬ್ಯಾಂಕಿನ ಬಗ್ಗೆ ಹೊಂದಿರುವ ವಿಶ್ವಾಸದಿಂದ ಬೆಳವಣಿಗೆ ಸಾಧ್ಯವಾಗಿದೆ ಎಂದು ಹೇಳಿದರು.

## ವಿಪ್ರ ಸಂಸ್ಥೆಗಳ ಗಟ್ಟಿತನಕ್ಕೆ ಬ್ರಾಹ್ಮಣ ಸಮಾಜ ಶಕ್ತಿಯಾಗಬೇಕು-ಡಾ.ಮೀನಾ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28-ದಿಟ್ಟ ಗುರಿ ಮತ್ತು ಒಗ್ಗಟ್ಟಿನೊಂದಿಗೆ ಬ್ರಾಹ್ಮಣ ಸಮುದಾಯದ ಸಂಸ್ಥೆಗಳನ್ನು ಗಟ್ಟಿಯಾಗಿ ಕಟ್ಟುವ ಕೆಲಸವನ್ನು ಬ್ರಾಹ್ಮಣ ಸಮಾಜ ಮಾಡಬೇಕಿದೆ ಎಂದು ವಿಜಯಪುರ ಮಹಿಳಾ ವಿವಿ ವಿಶ್ರಾಂತ ಕುಲಪತಿ ಡಾ.ಮೀನಾ ಚಂದಾವರಕರ ಹೇಳಿದರು.

ನಗರದ ವಿದ್ಯಾಪ್ರಸಾರಕ ಮಂಡಳದ ಶಂಕ್ರಪ್ಪ ಸಕ್ರಿ ಹೈಸ್ಕೂಲಿನ ಸರಳಾಬಾಯಿ ಭಾಗವತ ಸಭಾಂಗಣದಲ್ಲಿ ಭಾನುವಾರ ಬಾಗಲಕೋಟೆ ಜಿಲ್ಲಾ ಬ್ರಾಹ್ಮಣ ಸಮಾಜದಿಂದ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಮತ್ತು ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಈ ಹಿಂದೆ ಜಿಲ್ಲೆಯ ರ‍್ಯಾಂಕಿಂಗ್ ಲಿಸ್ಟನಲ್ಲಿ ಸಕ್ರಿ ಹೈಸ್ಕೂಲ್ ಮುಂಚೂಣಿಯಲ್ಲಿರುತ್ತಿತ್ತು. ಹೀಗಾಗಿ ಸಂಸ್ಥೆ ನಾಡಿಗೆ ಅನೇಕ ಸಾಧಕರನ್ನು ಕೊಡುಗೆಯಾಗಿ ನೀಡಿದೆ. ಸಂಸ್ಥೆಯ ಬೆಳವಣಿಗೆಯ ಹಿಂದೆ ಅನೇಕ ಜನರ ಶ್ರಮವಿದೆ.

ಇಂತಹ ಸಂಸ್ಥೆಗೆ ಹಿಂದಿನ ವೈಭವ ತಂದುಕೊಳ್ಳಬೇಕಾಗಿದೆ. ಇದಕ್ಕೆ ಸಮಾಜ ಒಟ್ಟಾಗಿ ಸಂಸ್ಥೆಯ ಜೊತೆಗೆ ನಿಲ್ಲಬೇಕಿದೆ ಎಂದು ಚಂದಾವರಕರ ಹೇಳಿದರು.

ಬಿಂಧುಮಾಧವಾಚಾರ್ಯ ನಾಗಸಂಪಿಗೆ, ಭೀಮಸೇನಾಚಾರ್ಯ ಪಾಂಡುರಂಗಿ, ರಘೋತ್ತಮಾಚಾರ್ಯ ನಾಗಸಂಪಿಗೆ, ಉದ್ಯಮಿ ಜಯತೀರ್ಥ ಕಟ್ಟಿ ಮಾತನಾಡಿ, ಸಮಾಜ ಸಂಘಟನೆಯ ಕೆಲಸ ನಿರಂತರವಾಗಿ ನಡೆಯಬೇಕು. ಸಂಸ್ಥೆಗಳ ಬೆಳವಣಿಗೆಗೆ ಶಕ್ತಿಯಾಗಿ ನಿಲ್ಲಬೇಕು. ಮಕ್ಕಳಿಗೆ ಸಂಸ್ಕಾರ ನೀಡಬೇಕು, ನಾವು ಬ್ರಾಹ್ಮಣರು ಎಂದು ಹೇಳಿಕೊಳ್ಳಲು ಹಿಂಜರಿಕೆ ಇಟ್ಟುಕೊಳ್ಳಬಾರದು ಎಂದು ಹೇಳಿದರು.

ವಿದ್ಯಾಪ್ರಸಾರಕ ಮಂಡಳದ ಕಾರ್ಯಾಧ್ಯಕ್ಷೆ ಶ್ರೀಲತಾ ಹೆರೆಂಜಲ, ಗೌರವ ಕಾರ್ಯದರ್ಶಿ ಡಾ.ಗಿರೀಶ ಮಸೂರಕರ, ನಗರಸಭೆ ಉಪಾಧ್ಯಕ್ಷೆ ಶೋಭಾ ರಾವ್, ಹಿರಿಯರಾದ ಟಿ.ಎಚ್.ಕುಲಕರ್ಣಿ, ಶ್ರೀಹರೀಂದ್ರ ಪಾಟೀಲ, ಬ್ರಾಹ್ಮಣ ಸಮಾಜದ ಜಿಲ್ಲಾಧ್ಯಕ್ಷ ನರಸಿಂಹ ಆಲೂರ, ಮಹಿಳಾ ಘಟಕದ ಅಧ್ಯಕ್ಷೆ ಶುಭದಾ ದೇಶಪಾಂಡೆ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಉಪಾಧ್ಯಕ್ಷ ಎನ್.ಆರ್.ಕುಲಕರ್ಣಿ, ಜಿಲ್ಲಾ ಉಪಾಧ್ಯಕ್ಷರಾದ ಅಡವೀಂದ್ರ ಇನಾಂದಾರ, ಸತೀಶ ಕುಲಕರ್ಣಿ, ರಾಘವೇಂದ್ರ ಕುಲಕರ್ಣಿ, ಹುನಗುಂದ ಘಟಕದ ಅಧ್ಯಕ್ಷ ಪ್ರಶಾಂತ ದೇಸಾಯಿ ಮತ್ತಿತರರು ಅತಿಥಿಗಳಾಗಿದ್ದರು.

ಎಸ್.ಕೆ. ಕುಲಕರ್ಣಿ, ವಿನಾಯಕ ತಾಳಿಕೋಟಿ, ಸಂತೋಷ ಗದ್ದನಕೇರಿ, ಗಿರೀಶ ಆಶ್ರೀತ, ಕೆ.ವಿಜಯಕುಮಾರ, ರಾಘವೇಂದ್ರ ಗುಮಾಸ್ತೆ, ಕೇಶವ ಕುಲಕರ್ಣಿ, ನರಸಿಂಹ ಮನಗೂಳಿ, ಮುಧೋಳದ ಅಣ್ಣಾರಾವ್ ಕುಲಕರ್ಣಿ, ಪ್ರಸನ್ನ ಚಾಟೆ ಮತ್ತಿತರರು ನೇತೃತ್ವ ವಹಿಸಿದ್ದರು.

## ಜಿಲ್ಲಾ ಪಂಚಾಯತ-ವರ್ಗಾವಣೆ ಕೌನ್ಸಲಿಂಗ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28-ಕಳೆದ 10 ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಿದ ಗ್ರಾಮ ಪಂಚಾಯತ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವರ್ಗಾವಣೆಯನ್ನು ಕೌನ್ಸಲಿಂಗ್ ಮೂಲಕ ಮಾಡಲಾಗುತ್ತಿದೆ.

ಪ್ರಥಮ ಹಂತವಾಗಿ ವಿಶೇಷ ಪ್ರಕರಣಗಳಾದ ಪತಿ-ಪತ್ನಿ ಪ್ರಕರಣ, ವಿಶೇಷ ಚೇತನರು ಮತ್ತು ಇನ್ನೀತರ ವರ್ಗಾವಣೆಯನ್ನು ಕೈಗೊಳ್ಳಲಾಗಿದೆ. ಜುಲೈ 28 ಸೋಮವಾರ ಸ್ಥಳ ನಿರೀಕ್ಷೆಯಲ್ಲಿರುವ ಮತ್ತು ಸಾಮಾನ್ಯ ಕೋರಿಕೆ ವರ್ಗಾವಣೆಯನ್ನು ಕೈಗೊಳ್ಳಲಾಗಿದ್ದು, ಜುಲೈ 29 ರಂದು ಕಡ್ಡಾಯ ವರ್ಗಾವಣೆ ಕೌನ್ಸಲಿಂಗ್ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ ಸಿಇಓ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ
## ಐತಿಹಾಸಿಕ ಮುಚಖಂಡಿ ಕೆರೆ ಅಭಿವೃದ್ಧಿಗೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ



ಮುಚಖಂಡಿ ಗ್ರಾಮದ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ಮಣ್ಣು, ಗರಸು ಅಗೆಯುತ್ತಿರುವ 2 ಟಿಪ್ಪರ ವಾಹನ ಹಾಗೂ 1 ಜೆಸಿಬಿ ವಾಹನವನ್ನು ವಶಕ್ಕೆ ಪಡೆದು ನಿಯಮಾನುಸಾರ ಕ್ರಮವಹಿಸುವಂತೆ ತಹಶೀಲದಾರ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸಂಗಪ್ಪ ಸೂಚಿಸಿದರು.

ಬಾಗಲಕೋಟೆ,ಜು.28-ಐತಿಹಾಸಿಕ ಮುಚಖಂಡಿ ಕೆರೆ ಸಂರಕ್ಷಣೆ, ಅಭಿವೃದ್ಧಿ ಹಾಗೂ ಪರಂಪೋಕು(ಬಿ-ಖರಾಬ) ಜಮೀನಿನಲ್ಲಿ ಗಿಡಗಳನ್ನು ನೆಟ್ಟು ಪೋಷಿಸುವ ಕಾರ್ಯವಾಗಬೇಕೆಂದು ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ರವಿವಾರ ಮುಖಂಡಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಮುಚಖಂಡಿ ಕೆರೆ ವೀಕ್ಷಣೆ ಮಾಡಿದ ಅವರು, ಕೆರೆಯ ಸುತ್ತ ಮುತ್ತಲಿನ 100 ಎಕರೆ ಪರಂಪೋಕು ಜಮೀನಿನಲ್ಲಿ ಹೊಸದಾಗಿ ಸಸಿಗಳನ್ನು ನೆಡುವಂತೆ ಹಾಗೂ ಬೇಸಿಗೆ ಕಾಲದಲ್ಲಿ ಅವು ನಶಿಸಿ ಹೋಗದಂತೆ ಅಗತ್ಯ ಕ್ರಮವಹಿಸಲು ಅರಣ್ಯ, ಸಣ್ಣ ನೀರಾವರಿ ಮತ್ತು ಅಂತರಜಲ ಅಭಿವೃದ್ಧಿ ಇಲಾಖೆ ಹಾಗೂ ಬಾಗಲಕೋಟೆ ನಗರಾಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಚಖಂಡಿ ಕೆರೆಗೆ ಹೊಂದಿಕೊಂಡಿರುವ ಬೆಟ್ಟಗಳಲ್ಲಿನ ಅರಣ್ಯ ನಾಶದಿಂದಾಗಿ ಮಣ್ಣಿನ ಸವೆತ, ಕೆರೆಯಲ್ಲಿ ಹೂಳು ತುಂಬುವಿಕೆ ಮತ್ತು ನೀರಿನ ಮಟ್ಟ ಕುಸಿಯುವಿಕೆ ಉಂಟಾಗಿದೆ. ಈ ಪ್ರದೇಶದಲ್ಲಿ ಸ್ಥಳೀಯ ಸಸ್ಯಪ್ರಭೇದಗಳನ್ನು ನೆಡುವುದರಿಂದ ಮಣ್ಣಿನ ಸವೆತವನ್ನು ತಡೆಯಬಹುದಾಗಿದೆ. ಅಂತರ್ಜಲ ಮರುಪೂರಣವನ್ನು ಹೆಚ್ಚಿಸಬೇಕು.

ಜೈವಿಕ ವೈವಿಧ್ಯತೆಯನ್ನು ಪುನಃ ಸ್ಥಾಪಿಸಬೇಕಿದೆ ಈ ನಿಟ್ಟಿನಲ್ಲಿ ಗ್ರಾಮಸ್ಥರು, ಪರಿಸರ ಸಂಘಟನೆಗಳು ಮತ್ತು ಸ್ವಯಂಸೇವಕರು ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಕೆರೆಯಲ್ಲಿನ ಹೂಳು, ಕಸ, ಗಿಡ-ಗಂಟಿ ಹಾಗೂ ಪ್ಲಾಸ್ಟಿಕ ತ್ಯಾಜ್ಯಗಳನ್ನು ವಿಲೇವಾರಿ ಮಾಡಿ, ಕೆರೆಯನ್ನು ಸ್ವಚ್ಛಗೊಳಿಸಲು ತಿಳಿಸಿದರಲ್ಲದೇ ಕೆರೆ ತುಂಬುವ ಯೋಜನೆಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಣ್ಣ ನೀರಾವರಿ, ಅಂತರಜಲ ಅಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಕೆರೆಯ ಎದುರು ನಿರ್ಮಿಸಲಾಗಿರುವ ಉದ್ಯಾನ ವನವನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು ಅಲ್ಲಿನ ಕಸ, ತ್ಯಾಜ್ಯ ವಸ್ತುಗಳನ್ನು ವಿಲೇವಾರಿ ಮಾಡಿ ಆವರಣವನ್ನು ಶುಚಿಯಾಗಿಡಬೇಕು. ಕೈದೋಟದಲ್ಲಿ ಸಸಿಗಳನ್ನು ಕಾಲಕಾಲಕ್ಕೆ ಕಟಾವು ಮಾಡಿ, ನೀರುಣಿಸುವ ಕಾರ್ಯವಾಗಬೇಕು ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್, ಉಪಅರಣ್ಯಸಂರಕ್ಷಣಾಧಿಕಾರಿ ರುಥ್ರೆನ್, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ್, ಭೂ ದಾಖಲೆಗಳ ಉಪನಿರ್ದೇಶಕ ರವಿಕುಮಾರ ಎಂ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಉಪನಿರ್ದೇಶಕ ಷಣ್ಮುಕಡಿ.ಎಚ್, ಸಣ್ಣ ನೀರಾವರಿ ಮತ್ತು ಅಂತರಜಲ ಅಭಿವೃದ್ಧಿ ಇಲಾಖೆ ಸಹಾಯಕ ಅಭಿಯಂತರ ಪ್ರಕಾಶ ನಾಯಿಕ, ಹಿರಿಯ ಭೂವಿಜ್ಞಾನಿ ಮಹೇಶ ಬಿರಾಜನವರ, ತಹಶೀಲದಾರ ವಾಸುದೇವ ಸ್ವಾಮಿ ಸೇರಿದಂತೆ ಇತರರು ಇದ್ದರು.

## ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಗ್ರಾಪಂ ನೌಕರರ ಪ್ರತಿಭಟನೆ



ಹೆಚ್ಚುವರಿ ಕೆಲಸ, ಕಡಿಮೆ ವೇತನ ಹಾಗೂ ಭದ್ರತೆ ಕೊರತೆಗಳಿಂದ ನೌಕರರು ನರಳುತ್ತಿದ್ದಾರೆ. ಸರ್ಕಾರ ಕೂಡಲೇ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ನಿರಂತರ ಹೋರಾಟ ನಡೆಸುವುದಾಗಿ ಗ್ರಾಪಂ ನೌಕರರ ಸಂಘಟನೆಯ ರಾಜ್ಯ ಅಧ್ಯಕ್ಷ ಎಂ.ಬಿ.ನಾಡಗೌಡ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.28-ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಗ್ರಾಮ ಪಂಚಾಯತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು ನಗರದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.

ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ನೇತೃತ್ವದಲ್ಲಿ ನವನಗರದ ಜಿಲ್ಲಾಡಳಿತ ಭವನದ ಎದುರು ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾ ಪಂಚಾಯತಿ ಸಿಇಓ ಶಶಿಧರ ಕುರೇರ ಹಾಗೂ ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಗ್ರಾಮ ಪಂಚಾಯತಿ ನೌಕರರು ಹಗಲು ರಾತ್ರಿಯೆನ್ನದೇ ನಿಷ್ಠೆಯಿಂದ ದುಡಿಯುತ್ತಿದ್ದರೂ ಶ್ರಮಕ್ಕೆ ತಕ್ಕಂತೆ ವೇತನ ನೀಡುತ್ತಿಲ್ಲ. ಜೊತೆಗೆ ಭವಿಷ್ಯಕ್ಕೆ ಭದ್ರತೆ ನೀಡಲಾಗುತ್ತಿಲ್ಲ ಎಂದು ದೂರಿದ ಪ್ರತಿಭಟನಾಕಾರರು, ನಿವೃತ್ತಿ ಅಥವಾ ಮರಣ ಹೊಂದಿದ ಗ್ರಾಮ ಪಂಚಾಯತಿ ನೌಕರರ ಕುಟುಂಬಕ್ಕೆ ಪ್ರತಿ ತಿಂಗಳು ಕನಿಷ್ಠ 6 ಸಾವಿರ ರೂ.ಗಳ ಪಿಂಚಣಿ ವ್ಯವಸ್ಥೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ನೌಕರರಿಗೆ 31 ಸಾವಿರ ರೂ. ವೇತನ ನಿಗದಿ ಮಾಡಬೇಕು. ಮಧ್ಯಂತರ ಪರಿಹಾರವಾಗಿ ಪ್ರತಿ ತಿಂಗಳು 3 ಸಾವಿರ ರೂ. ಹೆಚ್ಚುವರಿಯಾಗಿ ನೀಡಬೇಕು ಎಂಬುದು ಸೇರಿದಂತೆ ತಮ್ಮ 20 ಬೇಡಿಕೆಗಳುಳ್ಳ ಮನವಿ ಪತ್ರವನ್ನು ಸಿಇಓ ಅವರ ಮೂಲಕ ಸರ್ಕಾರಕ್ಕೆ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಿಂದ ನೂರಾರು ಜನ ಗ್ರಾಮ ಪಂಚಾಯಿತಿ ನೌಕರರು ಪಾಲ್ಗೊಂಡಿದ್ದರು.

# ಪತ್ರಿಕಾ,ಮಾಧ್ಯಮ ಕ್ಷೇತ್ರದ ಸೇವೆಗಾಗಿ " ವಿಶೇಷ ಜೀವಮಾನ ಸಾಧನೆ ಪ್ರಶಸ್ತಿ " ಪಡೆದ ರಾಯಚೂರಿನ ಭೀಮರಾಯ ಹದ್ದಿನಾಳ್

ದಾವಣಗೆರೆ : ಸರಳ ಜೀವಿಗಳು,ಯುವಕರ ಕಣ್ಮಣಿಗಳು,ಪತ್ರಿಕಾ ರಂಗದ ಧ್ರುವತಾರೆ, ಶ್ರೀ ಮಹರ್ಷಿ ವಾಲ್ಮೀಕಿ ನಾಯಕ ರತ್ನ ಪ್ರಶಸ್ತಿ ಪುರಸ್ಕೃತರು,ಸದಾಹಸನ್ಮುಖಿಗಳು, ಪ್ರತಿಯೊಬ್ಬರ ಕಷ್ಟಕ್ಕೆ ಸ್ಪಂದಿಸುವ ಗುಣನಡತೆವುಳ್ಳವರು,ಎಲ್ಲರಿಗೂ ಒಳ್ಳೆಯದನ್ನೇ ಬಯಸುವ ಸರಳ ಸಜ್ಜನಿಕೆಯ ಸಹಕಾರ ಮೂರ್ತಿಯಾಗಿರುವರಾಯಚೂರಿನ ಕಂಪಿಲವಾಣಿ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಸಂಪಾದಕರಾದ ಭೀಮರಾಯ ಹದ್ದಿನಾಳ್ ಅವರಿಗೆ ರಾಯಚೂರು ಜಿಲ್ಲೆಯ ಲಿಂಗಸಗೂರು ಪಟ್ಟಣದಲ್ಲಿ ಕರ್ನಾಟಕದ




ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಜುಲೈ 27 ರ ಭಾನುವಾರದಂದು ಏರ್ಪಡಿಸಿದ್ದ " ಪತ್ರಿಕಾ ದಿನಾಚರಣೆ"ಸಮಾರಂಭದಲ್ಲಿ " ವಿಶೇಷ ಜೀವಮಾನ ಸಾಧನೆ"ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಪತ್ರಿಕೆ ಮಾಧ್ಯಮ ಕ್ಷೇತ್ರದಲ್ಲಿ 33 ವರ್ಷಗಳ ಕಾಲ ಸುದೀರ್ಘವಾಗಿ ಸೇವೆಯನ್ನು ಸಲ್ಲಿಸಿರುವ ಇವರು"ವಿಶೇಷ ಜೀವಮಾನ ಸಾಧನೆ ಪ್ರಶಸ್ತಿ" ಯನ್ನು ಸ್ವೀಕರಿಸಿದ್ದು ನಮಗೆಲ್ಲರಿಗೂ ಸಂತಸತಂದಿದೆಎಂದುತಿಳಿಸಿರುವ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯಾಧ್ಯಕ್ಷರಾದ ಎ.ಸಿ. ತಿಪ್ಪೇಸ್ವಾಮಿ ಅವರು ಭೀಮರಾಯ ಹದ್ದಿನಾಳ ಅವರಿಗೆ ತುಂಬು ಹೃದಯದ ಅಭಿನಂದನೆಗಳನ್ನುಸಲ್ಲಿಸಿದ್ದಾರೆ.

ಪ್ರಶಸ್ತಿ ಪುರಸ್ಕೃತರಾದ ಭೀಮರಾಯ ಹದ್ದಿನಾಳ್ ಅವರು ನಮ್ಮ ಸಂಘದ ರಾಜ್ಯ ಉಪಾಧ್ಯಕ್ಷರಾಗಿರುವುದುನಮಗೆಲ್ಲ ಹೆಮ್ಮೆಪಡುವಂತಹದ್ದು ಎಂದು ಸಂತೋಷ ವ್ಯಕ್ತಪಡಿಸಿದ್ದಾರೆ.

# ಎಂಎಲ್ಸಿ ಪಾಟೀಲ್; ಧನ ಸಹಾಯ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ತಾಲೂಕಿನ ಮೋಳಕೇರಾ ಗ್ರಾಮದಲ್ಲಿ ಕಳೆದ ಕೆಲ ದಿನಗಳ ಹಿಂದೆ 5 ವರ್ಷದ ಬಾಲಕ ಫತ್ರೋದ್ದಿನ್ ಕಾಲಿಗೆ ಗಂಭೀರ ಗಾಯ ಮಾಡಿಕೊಂಡಿದ್ದ, ಹಿನ್ನಲೆ ಬಾಲಕನ ಮನೆಗೆ ಎಂಎಲ್ಸಿ ಭೀಮರಾವ ಪಾಟೀಲ್ ಭೇಟಿ ನೀಡಿ ಬಾಲಕನ ತಂದೆಗೆ ಸಹಾಯಧನ ವಿತರಿಸಿದರು.

ಬಳಿಕ ಎಂಎಲ್ಸಿ ಭೀಮರಾವ ಪಾಟೀಲ್ ಬಾಲಕನ ಆರೋಗ್ಯ ವಿಚಾರಿಸಿ, ಆತನ ಕುಟುಂಬಸ್ಥರಿಗೆ ಧೈರ್ಯ ತುಂಬಿ, ಬಸವರಾಜ ಪಾಟೀಲ್ ಫೌಂಡೇಶನ ವತಿಯಿಂದ 25 ಸಾವಿರ ಸಹಾಧನ ನೀಡಿ, ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಪರಿಹಾರ ಧನ ಕೊಡಿಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಧನರಾಜ ಪಾಟೀಲ್, ವಿಜಯ ಬಿರಾದಾರ, ಸತೀಷ ಪಾಂಡೆ, ಶಿವಕುಮಾರ ಮೋಳಕೇರಿ ಸೇರಿ ಅನೇಕ ಮುಖಂಡರಿದ್ದರು.

# ರೋಗಗಳ ನಿಯಂತ್ರಣಕ್ಕೆ ಕ್ರಮ ವಹಿಸಿ: ಶಾಸಕ ಪ್ರಭು ಚವ್ಹಾಣ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಿ):ಜು.28:ಮಳೆಗಾಲದಲ್ಲಿ ಡೆಂಗ್ಯೂ, ಮಲೇರಿಯಾ ಹಾಗೂ ಮತ್ತಿತರೆ ಸಾಂಕ್ರಾಮಿಕ ರೋಗಗಳ ಹರಡುವಿಕೆ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಔರಾದ(ಬಿ) ಹಾಗೂ ಕಮಲನಗರದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ದೂರವಾಣಿ ಮುಖಾಂತರ ಸೂಚನೆ ನೀಡಿರುವ ಶಾಸಕರು, ಎಲ್ಲ ಗ್ರಾಮಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ತಗ್ಗು-ಗುಂಡಿಗಳಲ್ಲಿ ನೀರು ನಿಲ್ಲುವುದರಿಂದ ಸೊಳ್ಳೆಗಳ ಹಾವಳಿ ಹೆಚ್ಚಾಗಿ ವಿವಿಧ ರೋಗಗಳು ಹರಡುವ ಕಾರಣ ಎಲ್ಲಿಯೂ ಕೊಳಚೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದಿದ್ದಾರೆ.ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ರಸ್ತೆ, ಬೀದಿಗಳನ್ನು ಶುಚಿಯಾಗಿಡಬೇಕು. ಬ್ಲೀಚಿಂಗ್ ಪೌಡರ್ ಸಿಂಪಡಿಸಬೇಕು. ಜನತೆಗೆ ಪ್ರತಿದಿನ ಶುದ್ಧ ಕುಡಿಯುವ ನೀರು ಪೂರೈಸಬೇಕು.ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಸ್ವಚ್ಛತೆಯ ಕುರಿತು ಸ್ವತ ನಿಗಾ ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ತಾಲ್ಲೂಕು ವೈದ್ಯಾಧಿಕಾರಿಗಳು ರೋಗಿಗಳಿಗೆ ಸೂಕ್ತ ಚಿಕಿತ್ಸೆ ಕಲ್ಪಿಸಲು ಎಲ್ಲ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ಅಗತ್ಯ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು. ತಾವು ಖುದ್ದಾಗಿ ಎಲ್ಲ ಆಸ್ಪತ್ರೆಗಳಿಗೆ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಬೇಕು. ಅವಶ್ಯಕ ಔಷಧ ಲಭ್ಯವಿರುವಂತೆ ನೋಡಿಕೊಳ್ಳಬೇಕೆಂದು ಹೇಳಿದ್ದಾರೆ. ಗ್ರಾಮ ಮಟ್ಟದಲ್ಲಿ ಕೆಲಸ ಮಾಡುವ ಎಲ್ಲ ವೈದ್ಯಾಧಿಕಾರಿಗಳು,ಸಿಬ್ಬಂದಿ,ಆಶಾ ಕಾರ್ಯಕರ್ತೆಯರು ಸರಿಯಾಗಿ ಕರ್ತವ್ಯ ನಿರ್ವಹಿಸಬೇಕು.ಮಳೆಗಾಲದಲ್ಲಿ ಹರಡುವ ರೋಗಗಳು ಮತ್ತು ನಿಯಂತ್ರಿಸುವ ಬಗ್ಗೆ ಜಾಗೃತಿ ಮಾಡಿಸಬೇಕು ಎಂದು ಸೂಚಿಸಿದ್ದಾರೆ. *ಸಾರ್ವಜನಿಕರಲ್ಲಿ ಮನವಿ:*ಮಳೆಗಾಲದ ಸಂದರ್ಭದಲ್ಲಿ ಸಾರ್ವಜನಿಕರು ತಮ್ಮ ಆರೋಗ್ಯದತ್ತ ಹೆಚ್ಚಿನ ಕಾಳಜಿ ವಹಿಸಬೇಕು. ತಮ್ಮ ಮನೆ ಮತ್ತು ಸುತ್ತಲಿನ ಪರಿಸರವನ್ನು ಶುಚಿಯಾಗಿಟ್ಟುಕೊಳ್ಳಬೇಕು. ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಚರಂಡಿಗಳು, ಹಳೆಯ ಟೈರ್‌ಗಳು, ತೆಂಗಿನ ಚಿಪ್ಪುಗಳಲ್ಲಿ,ತೊಟ್ಟಿಗಳಲ್ಲಿ ನೀರು ಬಹಳ ಕಾಲದವರೆಗೆ ಸಂಗ್ರಹಗೊಳ್ಳದಂತೆ ನೋಡಿಕೊಳ್ಳಬೇಕು. ಸಾಧ್ಯವಾದಷ್ಟು ಕಾಯಿಸಿ ಆರಿಸಿದ ನೀರನ್ನು ಸೇವಿಸಬೇಕು. ಏನಾದರೂ ಆರೋಗ್ಯ ಸಮಸ್ಯೆಗಳು ಕಾಣಿಸಿದಲ್ಲಿ ತಕ್ಷಣ ಹತ್ತಿರದ ಆರೋಗ್ಯ ಕೇಂದ್ರಗಳಿಗೆ ತೆರಳಿ ಚಿಕಿತ್ಸೆ ಪಡೆಯಬೇಕು ಎಂದು ಶಾಸಕರು ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.



ಹುಮನಾಬಾದ್: ಖಾಸಗಿ ವಾಹನಗಳ ಪಾರ್ಕಿಂಗ್ ಆಗಿ ಮಾರ್ಪಟ್ಟ ಹುಮನಾಬಾದ್ ಬಸ್ ನಿಲ್ದಾಣ. ಇದಕ್ಕೆ ಯಾರು ಕಾರಣಿಭೂತರು ಕ್ರಮ ಜರುಗಲಿ ಎಂಬುದು ಸಾರ್ವಜನಿಕರ ಆಶಯ.

# ಶಿಥಿಲ ಕೋಣೆಯಿಂದ ತರಗತಿ ಸ್ಥಳಾಂತರಿಸಲು ಸೂಚನೆ



ಈ ಶಾಲೆ ಹೆಸರಿಗಷ್ಟೇ ಮಾದರಿ ಶಾಲೆಯಾಗಿದೆ. ಮಕ್ಕಳ ಕಲಿಕೆಗೆ ಪೂರಕ ವಾತಾವರಣ ಇಲ್ಲ. ಮಕ್ಕಳು ವಿವಿಧ ಸವಲತ್ತುಗಳಿಂದ ವಂಚಿತರಾಗಿದ್ದಾರೆ. ಶಿಥಿಲಗೊಂಡ ಕೋಣೆಗಳಲ್ಲಿ ಮಕ್ಕಳು ವಿದ್ಯಾಭ್ಯಾಸ ಮಾಡುವ ಪರಿಸ್ಥಿತಿ ಇರುವುದು ವಿಪರ್ಯಾಸ.

–ಶಶಿಧರ ಕೋಸಂಬೆ ಸದಸ್ಯರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು.

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜು.28:ತಾಲೂಕಿನ ಮಳಚಾಪೂರ ಗ್ರಾಮದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಸೋಮವಾರ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಭೇಟಿ ನೀಡಿ ಪರಿಶೀಲಿಸಿದರು. 4 ಮತ್ತು 5ನೆಯ ತರಗತಿ ಕೋಣೆಗೆ ಅವರು ಭೇಟಿ ನೀಡಿದ ಸಂದರ್ಭದಲ್ಲಿ ಶಿಥಿಲಾವಸ್ಥೆಯ ಕೋಣೆಗಳಲ್ಲಿ ವಿದ್ಯಾರ್ಥಿಗಳು ಬೋಧನೆ ಮಾಡುತ್ತಿರುವುದು ಕಂಡು ಬಂದಿತು. ಮಳೆಗಾಲದ ದಿನಗಳಲ್ಲಿ ಶಿಥಿಲಗೊಂಡ ತರಗತಿ ಕೋಣೆಗಳಲ್ಲಿ ವಿದ್ಯಾರ್ಥಿಗಳು ಪಾಠ ಮಾಡಲು ಹೇಗೆ ಸಾಧ್ಯ ಎಂದು ಸ್ಥಳದಲ್ಲಿದ್ದ ಬಿಇಒಗೆ ಪ್ರಶ್ನಿಸಿದರು.

ಹೊಸತರಗತಿ ಕೋಣೆಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಬಿಇಒ ಸಿ.ಜಿ.ಹಳ್ಳದ ಮಾಹಿತಿ ನೀಡಿದರು. ತರಗತಿ ಕೋಣೆಗಳು ಸಂಪೂರ್ಣ ಶಿಥಿಲಗೊಂಡಿವೆ. ನಿರಂತರ ಮಳೆ ಸುರಿಯುತ್ತಿರುವುದರಿಂದ ಮಕ್ಕಳಿಗೆ ಅಪಾಯ ತಂದೊಡ್ಡುವ ಸಾಧ್ಯತೆ ಇದೆ. ಕಟ್ಟಡ ಕಾಮಗಾರಿ ಪೂರ್ಣಗೊಳ್ಳುವ ವರೆಗೂ ಸುಸ್ಥಿತಿಯಲ್ಲಿರುವ ಮುಖ್ಯಗುರುಗಳ ಕೋಣೆ ಮತ್ತು ಅಂಗನವಾಡಿ ಕೇಂದ್ರದ ಕಟ್ಟಡಕ್ಕೆ ಕೂಡಲೇ ತರಗತಿ ಸ್ಥಳಾಂತರಿಸಿ ಮಕ್ಕಳಿಗೆ ಪಾಠ ಬೋಧನೆ ಮಾಡಬೇಕು ಎಂದು ಸೂಚನೆ ನೀಡಿದರು.ಮುಖ್ಯಗುರುಗಳು ಕೂಡ ಮೇಲ್ಉಸ್ತುವಾರಿ ಸರಿಯಾಗಿ ನೋಡುತ್ತಿಲ್ಲ. ಶಾಲಾ ಪರಿಸರದಲ್ಲಿ ಅನೈರ್ಮಲ್ಯ ತಾಂಡವಾಡುತ್ತಿದೆ.ಶಿಕ್ಷಕರು ಮಕ್ಕಳ ಹಾಜರಾತಿ ಸಮರ್ಪಕವಾಗಿ ನಿರ್ವಹಣೆ ಮಾಡದಿರುವುದು ಕಂಡು ಬಂದಿದೆ. ಮುಖ್ಯಗುರುಗಳಿಗೆ ಮತ್ತು ವರ್ಗ ಶಿಕ್ಷಕರಿಗೆ ನೋಟಿಸ್ ನೀಡಿ ಆಯೋಗಕ್ಕೆ ವರದಿ ನೀಡುವಂತೆ ಆಯೋಗದ ಸದಸ್ಯ ಶಶಿಧರ ಕೋಸಂಬೆ ಅವರು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.ಈ ಸಂದರ್ಭದಲ್ಲಿ ಬಿಇಒ ಸಿ.ಜಿ.ಹಳ್ಳದ್, ಶಿಕ್ಷಣ ಸಂಯೋಜಕ ಮಲ್ಲಿಕಾರ್ಜುನ ಕನ್ನಾಳೆ ಸೇರಿದಂತೆ ಹಲವರು ಇದ್ದರು.

# ಮೂಲಸೌಕರ್ಯ ಕಲ್ಪಿಸಲು ಆದ್ಯತೆ:ಸಚಿವ ಖಂಡ್ರೆ




ಮಲ್ಲಮ್ಮನುಡಿವಾರ್ತೆಭಾಲ್ಕಿ:ಜು.28: ಪಟ್ಟಣದ ವಿವಿಧ ಬಡಾವಣೆಗಳಿಗೆ ಮೂಲಸೌಕರ್ಯ ಕಲ್ಪಿಸಲು ಆದ್ಯತೆ ನೀಡಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಶನಿವಾರ 2.115 ಕೋಟಿ ವೆಚ್ಚದ ಸಿಸಿ ರಸ್ತೆ ಮತ್ತು ಚರಂಡಿ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.ತಾಲೂಕಿನಲ್ಲಿ ರಸ್ತೆ ನಿರ್ಮಾಣ,ಚರಂಡಿ ಅಭಿವೃದ್ಧಿ, ಶಾಲಾ ಕಾಲೇಜು, ಆಸ್ಪತ್ರೆ ಕಟ್ಟಡ ನಿರ್ಮಾಣ ಸೇರಿದಂತೆ ಮುಂತಾದ ಅಭಿವೃದ್ಧಿ ಕೆಲಸಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದರು.ಪಟ್ಟಣದ ಎಲ್ಲ ಬಡಾವಣೆಗಳಲ್ಲಿ ರಸ್ತೆ, ಚರಂಡಿ ನಿರ್ಮಾಣ ಮತ್ತು ಬೀದಿದೀಪ ಅಳವಡಿಕೆಗೆ ಆದ್ಯತೆ ನೀಡಲಾಗಿದೆ. ನೂರಾರು ಕೋಟಿ ರೂ ಅನುದಾನದಲ್ಲಿ ಈಗಾಗಲೇ ಪಟ್ಟಣದ ವಿವಿಧ ಬಡಾವಣೆಗಳಲ್ಲಿ ರಸ್ತೆ,ಚರಂಡಿ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದೆ. ಇನ್ನು ಹೊಸಬಡಾವಣೆಗಳಲ್ಲಿಯು ರಸ್ತೆ,ಚರಂಡಿ ನಿರ್ಮಾಣಕ್ಕೆ ಮುಂದಾಗಿದ್ದೇವೆ.ಸ್ವಚ್ಛ ಹಾಗೂ ಸುಂದರ ಪಟ್ಟಣವಾಗಿ ಸಿರೂಪಿಸುವ ದೃಷ್ಟಿಯಿಂದ ವಿವಿಧ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಮಾಜಿ ಅಧ್ಯಕ್ಷ ಬಸವರಾಜ ವಂಕೆ ಸೇರಿದಂತೆ ಪುರಸಭೆ ಸದಸ್ಯರು, ಅಧಿಕಾರಿಗಳು,ಸ್ಥಳೀಯ ಮುಖಂಡರು, ಸಾರ್ವಜನಿಕರು ಹಾಜರಿದ್ದರು.

# ರಾಜ್ಯದಲ್ಲಿ ಒಟ್ಟು 11.50 ಕೋಟಿ ಸಸಿ ನೆಡಲಾಗುವುದು : ಸಚಿವ ಈಶ್ವರ ಖಂಡ್ರೆ

## ಗಿರಿಜಿಲ್ಲೆಯಲ್ಲಿ ನಾಲ್ಕು ಲಕ್ಷದ ಗುರಿ - ಪ್ರತಿಯೊಬ್ಬರು ಪರಿಸರ ಉಳಿಸಿ



ಯಾದಗಿರಿ:ಜು:28: ಪ್ರಕೃತಿ ಮತ್ತು ಪರಿಸರ ಉಳಿಸುವ ನಿಟ್ಟಿನಲ್ಲಿ ರಾಜ್ಯದಲ್ಲಿ ಒಟ್ಟು 11.50 ಕೋಟಿ ಸಸಿ ನೆಟ್ಟು ಅವುಗಳನ್ನು ಪೋಷಿಸಿ ಬೆಳೆಸುವ ಗುರಿ ರಾಜ್ಯ ಸರ್ಕಾರ ಮತ್ತು ಅರಣ್ಯ ಇಲಾಖೆ ಹೊಂದಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಹೇಳಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಅರಣ್ಯ ಇಲಾಖೆ ಹಮ್ಮಿಕೊಂಡಿದ್ದ ವನಮಹೋತ್ಸವ ಕಾರ್ಯಕ್ರಮಕ್ಕೆ ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿ ಸಚಿವರು ಮಾತನಾಡಿದರು.

ಈ ವರ್ಷ ಮೂರು ಕೋಟಿ ಸಸಿ ನೆಡಲಾಗುವುದು.ಅದರಲ್ಲಿ ಯಾದಗಿರಿ ಜಿಲ್ಲೆಯಲ್ಲಿ 4 ಲಕ್ಷ ಸಸಿಗಳನ್ನು ನೆಡುವ ಗುರಿ ಹೊಂದಲಾಗಿದೆ. ಇದರಲ್ಲಿ ಒಂದು ಲಕ್ಷ ಎತ್ತರದ ಸಸಿಗಳನ್ನು ಹಚ್ಚಲಾಗುವುದು. ಇದು ಕೀಳಲು ಆಗುವುದಿಲ್ಲ ಮತ್ತು ಬಹುಕಾಲ ಬದುಕುತ್ತವೆ ಎಂದರು.

ನೆಟ್ಟ ಸಸಿಗಳನ್ನು ಪೋಷಿಸಲು ಅರಣ್ಯ ಇಲಾಖೆ ಸಿಬ್ಬಂದಿ ಕೆಲಸ ಮಾಡುತ್ತದೆ. ಪ್ರಕೃತಿ ಮತ್ತು ಪರಿಸರ ಉಳಿದರೇ ಮಾತ್ರ ನಾವೆಲ್ಲರೂ ಉತ್ತಮವಾಗಿ ಬದುಕಿಳಿಯಲು ಸಾಧ್ಯವೆಂದು ಸಚಿವರು ಹೇಳಿದರು.

ಇಂದಿನ ಹವಾಮಾನ ಮನುಕುಲದ ಉಳಿವಿಗೆ ತೊಂದರೆಯಾಗುತ್ತಿದೆ.ಗಿಡ-ಮರಗಳ ಮಾರಣಹೋಮದಿಂದ ಪರಿಸರ ನಾಶವಾಗಿ ಜೀವ,ಜಂತುಗಳು ಸಾಯುತ್ತಿವೆ.ಮರಗಳಿಂದ ಹೇರಳವಾದ ಆಕ್ಸಿಜನ್ ಸಿಗುತ್ತದೆ. ಇದರಿಂದ ಸಕಲ ಜೀವರಾಶಿಗಳು ಬದುಕಲು ಸಹಾಯವಾಗುತ್ತದೆ ಎಂದು ಸಚಿವರು ಮಾರ್ಮಿಕವಾಗಿ ವಿವರಿಸಿದರು.

ಹವಾಮಾನದಲ್ಲಿ ಸಾಕಷ್ಟು ವ್ಯತ್ಯಾಸ ಆಗುತ್ತಿರುವುದರಿಂದ ಪ್ರಕೃತಿ ವಿಕೋಪ, ಗುಡ್ಡಗಳ ಕುಸಿತ, ಪ್ರವಾಹ,ತಾಪಮಾನ ಹೆಚ್ಚಾಗುವುದು ನಾವೆಲ್ಲರೂ ಕಾಣುತ್ತಿದ್ದೇವೆ. ಇದ-ರಿಂದ ಅಪಾರ ಜನರು ಜೀವ ಕಳೆದುಕೊಳ್ಳುತ್ತಿದ್ದಾರೆಂದು ಸಚಿವ ಖಂಡ್ರೆ ವಿಷಾಧಿಸಿದರು.

ಮಕ್ಕಳಿಗೆ ಪರಿಸರ ಕಾಳಜಿ ಬಗ್ಗೆ ಜಾಗೃತಿ ಮೂಡಿಸಬೇಕು. ಅವರಿಗೆ ಗಿಡ,ಮರಗಳಿಂದ ಏನು ಲಾಭ ಎಂಬ ಬಗ್ಗೆ ತಿಳಿಸಬೇಕೆಂದ ಅವರು, ಪ್ಲಾಸ್ಟಿಕ್ ಬಳಕೆ ಮಾಡಬೇಡಿ, ಬಟ್ಟೆ ಕೈಚೀಲಗಳೇ ಬಳಸಿ. ಇಂದು ಆಹಾರ, ಹಾಲು, ತರಕಾರಿ ಹಣ್ಣು ಹಂಪಲು ಸೇರಿದಂತೆಯೇ ಎಲ್ಲದರಲ್ಲೂ ಮಾಲಿನ್ಯ ಇದೆ. ಕಲುಷಿತವಾಗಿದ್ದನ್ನೇ ನಾವು ಸೇವಿಸುತ್ತಿದ್ದೇವೆ. ಅದನ್ನೇ ಬಳಕೆ ಮಾಡುವ ಅನಿವಾರ್ಯತೆಗೆ ಬಂದಿದ್ದೇವೆ. ಇದು ಸಂಪೂರ್ಣ ಹೋಗಬೇಕೆಂದು ಸಚಿವರು ಸೇರಿದ ಸಭಿಕರಿಗೆ ಕರೆ ನೀಡಿದರು.ಅಧ್ಯಕ್ಷತೆ ವಹಿಸಿದ್ದ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರು ಮಾತನಾಡಿ, ಪರಿಸರ ಉಳುವಿಗೆ ಮತ್ತು ಗಿಡ,ಮರಗಳ ರಕ್ಷಣೆಗೆ ಸರ್ಕಾರ ಸಾಕಷ್ಟು ಅನುದಾನ ನೀಡಿ ಖರ್ಚು ಮಾಡುತ್ತಿದೆ. ಕಾರಣ ನಾವೆಲ್ಲರೂ ಗಿಡ,ಮರಗಳನ್ನು ಹೆಚ್ಚು ಹೆಚ್ಚು ಬೆಳೆಸೋಣ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ, ಶಾಸಕ ರಾಜಾ ವೇಣು ಗೋಪಾಲ ನಾಯಕ್,ನಗರಸಭೆ ಅಧ್ಯಕ್ಷೆ ಲಲಿತಾ ಅನಪುರ, ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಎಸ್ ಪಿ ಪ್ರಥ್ವಿಕ್ ಶಂಕರ್, ಹೆಚ್ಚುವರಿ ಡಿಸಿ ರಮೇಶ ಕೋಲಾರ್, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಚೇತನ್ ಗಸ್ತಿ, ಸುಮೀತ್ ಕುಮಾರ್ ಪಾಟೀಲ್, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಹ್ಮದ್ ಅಸದ್ ಸೇರಿದಂತೆಯೇ ಇತರರಿದ್ದರು.

ಆರ್.ಜೆ.ಮಂಜು ನಿರೂಪಿಸಿದರು.

ಹಿರಿಯ ಕಲಾವಿದ ಚಂದ್ರಶೇಖರ ಗೋಗಿ ತಂಡದಿಂದ ನಾಡಗೀತೆ ನಡೆಯಿತು.ಕಾರ್ಯಕ್ರಮದಲ್ಲಿ ಅಪಾರ ಸಂಖ್ಯೆ ಮಹಿಳೆಯರು, ವಿವಿಧ ಗಣ್ಯರು ಭಾಗವಹಿಸಿದ್ದರು.

# ರಸಗೊಬ್ಬರ ಪೂರೈಕೆಗೆ ರಾಜ್ಯದಿಂದ ಕೇಂದ್ರಕ್ಕೆ ಆರು ಬಾರಿ ಮನವಿ

## ರಾಜ್ಯದಲ್ಲಿ ರಸಗೊಬ್ಬರ ಕೊರತೆ ನೀಗಿಸಲು ಅಗತ್ಯ ಕ್ರಮ

ಬೆಂಗಳೂರು, ಜು 28: ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಆರಂಭಿಕ ಶುಲ್ಕನ್ನು ಪರಿಗಣಿಸದೇ ಯೂರಿಯಾ ಸೇರಿದಂತೆ ಎಲ್ಲಾ ರಸಗೊಬ್ಬರಗಳನ್ನು ಬೇಡಿಕೆಗೆ ಅನುಗುಣವಾಗಿ ಹಂಚಿಕೆ ಮತ್ತು ಸರಬರಾಜು ಮಾಡಲಾಗಿರುತ್ತದೆ. ಇದರಿಂದಾಗಿ ರಾಜ್ಯದಲ್ಲಿ ಯಾವುದೇ ರೀತಿಯ ರಸಗೊಬ್ಬರದ ಕೊರತೆ ಕಂಡು ಬಂದಿರುವುದಿಲ್ಲ ಎಂದು ಕೃಷಿ ಇಲಾಖೆ ಪ್ರಕಟಣೆ ತಿಳಿಸಿದೆ. ರಸಗೊಬ್ಬರ ಕೊರತೆಗೆ ಮೂಲ ಕಾರಣ: ಪ್ರಸಕ್ತ ಸಾಲಿನಲ್ಲಿ ಮಾತ್ರ ಆರಂಭಿಕ ಶುಲ್ಕ ಪರಿಗಣಿಸಿ, ಕೇಂದ್ರ ಸರ್ಕಾರದಿಂದ ರಸಗೊಬ್ಬರ ಹಂಚಿಕೆ ಮತ್ತು ಸರಬರಾಜು ಪ್ರಕ್ರಿಯೆ ಜರುಗಿಸಲಾಗುತ್ತಿದೆ. ಇದರಿಂದಾಗಿ ರಾಜ್ಯದಲ್ಲಿ ಯೂರಿಯಾ ರಸಗೊಬ್ಬರದ ಪ್ರಾರಂಭಿಕ ದಾಸ್ತಾನನ್ನು ಪರಿಗಣಿಸಿ, ಯೂರಿಯಾ ರಸಗೊಬ್ಬರದ ಕಡಿಮೆ ಹಂಚಿಕೆ ಮಾಡಿರುವುದು ಕೊರತೆಗೆ ಮೂಲ ಕಾರಣವಾಗಿದೆ. ರಾಜ್ಯದ ಬೆಳೆ ಪದ್ಧತಿಯನ್ನು ಆಧರಿಸಿ ಮುಂಗಾರು ಹಂಗಾಮಿಗೆ ಮುಂಚಿತವಾಗಿ ಕೇಂದ್ರ ಸರ್ಕಾರಕ್ಕೆ 12.95 ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರ ಬೇಡಿಕೆಯನ್ನು ಸಲ್ಲಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರದಿಂದ 11.17 ಲಕ್ಷ ಮೆ.ಟನ್ ಹಂಚಿಕೆ ನಿಗದಿಪಡಿಸಲಾಗಿರುತ್ತದೆ. ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 3.02 ಲಕ್ಷ ಮೆ. ಟನ್ ಡಿ.ಎ.ಪಿ ರಸಗೊಬ್ಬರದ ಬೇಡಿಕೆ ಇದ್ದು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 2.21 ಲಕ್ಷ ಮೆ. ಟನ್ ಸರಬರಾಜಾಗಿದ್ದು, ಇನ್ನೂ 81,000 ಮೆ.ಟನ್ ಸರಬರಾಜು ಬಾಕಿ ಇರುತ್ತದೆ. ರಾಜ್ಯದಲ್ಲಿ ಡಿ.ಎ.ಪಿ. ಕೊರತೆ ಕಂಡು ಬಂದಾಗ ಕೃಷಿ ಸಚಿವರ ನಿರ್ದೇಶನದಂತೆ ಪರ್ಯಾಯ ರಸಗೊಬ್ಬರಗಳ ಬಳಕೆ ಕುರಿತು ರೈತರಲ್ಲಿ ಅರಿವು ಮೂಡಿಸಿ, ಪ್ರಸ್ತುತ, ಡಿ.ಎ.ಪಿ. ರಸಗೊಬ್ಬರದ ಕೊರತೆಯನ್ನು ನೀಗಿಸಲಾಗಿದೆ. ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 6.80 ಲಕ್ಷ ಮೆಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಇದ್ದು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 5.35 ಲಕ್ಷ ಮೆ.ಟನ್ ಸರಬರಾಜಾಗಿದ್ದು, ಇನ್ನೂ 1.45 ಲಕ್ಷ ಮೆ.ಟನ್ ಸರಬರಾಜು ಬಾಕಿ ಇರುತ್ತದೆ. ಕೇಂದ್ರ ಸರ್ಕಾರದಿಂದ ಇಲ್ಲಿಯ ವರೆಗೆ ಸರಬರಾಜು ಮಾಡಿರುವ ರಸಗೊಬ್ಬರವನ್ನು ಸಮರ್ಪಕವಾಗಿ ಎಲ್ಲಾ ಜಿಲ್ಲೆಗಳಿಗೆ ಹಂಚಿಕೆ ಮಾಡಿ ರೈತರಿಗೆ ಯಾವುದೇ ರೀತಿಯ ತೊಂದ-ರೆಆಗದಂತೆ ನಿಭಾಯಿಸಲಾಗಿರುತ್ತದೆ. ರಾಜ್ಯದಿಂದ ರಸಗೊಬ್ಬರ ಪೂ-ರೆಕೆಗೆ ಆರು ಬಾರಿ ಮನವಿ: ಕೇಂದ್ರ ರಸಗೊಬ್ಬರ ಇಲಾಖೆಯ ಅಧಿಕಾರಿಗಳಿಗೆ ಕೃಷಿ ಇಲಾಖೆ ವತಿಯಿಂದ ಏಪ್ರಿಲ್ ಮಾಹೆಯಿಂದ ಇಲ್ಲಿಯವರೆಗೆ ಆರು ಬಾರಿ ಪತ್ರಗಳನ್ನು ಬರೆದು ಹಂಚಿಕೆಗೆ ಅನುಗುಣವಾಗಿ ಅವಶ್ಯವಿರುವ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಲಾಗಿರುತ್ತದೆ. ರಾಜ್ಯದ ಕೃಷಿ ಸಚಿವರು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ ಅಗತ್ಯವಿರುವ ಡಿ.ಎ.ಪಿ. ರಸಗೊಬ್ಬರದ ಪೂರೈಕೆಗೆ ಪತ್ರ ಮುಖೇನ ಮನವಿ ಸಲ್ಲಿಸಿದ್ದಾರೆ. ಅಲ್ಲದೇ, ಕೃಷಿ ಸಚಿವರೇ ಖುದ್ದಾಗಿ, ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವರನ್ನು ಇದೇ ಜುಲೈ 7ರಂದು ಭೇಟಿ ಮಾಡಿ ಕೇಂದ್ರ ಸರ್ಕಾರದಿಂದ ಸಕಾಲದಲ್ಲಿ ಅಗತ್ಯವಿರುವ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಿರುತ್ತಾರೆ. ರಾಜ್ಯದಲ್ಲಿ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರದ ಕಡಿಮೆ ಪೂರೈಕೆಯನ್ನು ಮನಗಂಡು, ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ, ರಾಜ್ಯಕ್ಕೆ ಅಗತ್ಯವಿರುವ ರಸಗೊಬ್ಬರ ಪೂರೈಕೆಗೆ ಜುಲೈ 17 ಮತ್ತು 25ರಂದು ಪತ್ರ ಮುಖೇನ ಮನವಿ ಸಲ್ಲಿಸಿರುತ್ತಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.